ಬೆಂಗಳೂರು ಸಂಪುಟ: 16 ಸಂಚಿಕೆ: 29 ಪುಟ: 06 ಶುಕ್ರವಾರ 20-12-2024 Mail: mussanje2010@gmail.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh www.mussanjenews.com

## ನಾವೂ ಈಗ ಡಿಜಿಟಲೀಕರಣಗೊಂಡಿದ್ದೇವೆ...

ಪ್ರಿಯ ಓದುಗರೇ.....

ತಮ್ಮೆಲ್ಲರ ಒತ್ತಾಸೆಯ ಮೇರೆಗೆ ನಿಮ್ಮ 'ಮುಸ್ಸಂಜೆ' ಸಂಜೆ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ. ಹದಿನೈದು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 16ನೇ ವಸಂತಕ್ಕೆ ಕಾಲಿಟ್ಟ ಈ ಸುಸಂದರ್ಭದಲ್ಲಿ ರಾಜ್ಯದಲ್ಲೇ ಅಲ್ಲದೇ ದೇಶದ ವಿವಿಧೆಡೆಗಳಿಂದ ಸಹಕಾರ ದೊರೆತ ಹಿನ್ನೆಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶ ಕಲ್ಪಿಸಿದ್ದೇವೆ. ಈಗ ಪತ್ರಿಕೆಯನ್ನು ನೈಜ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಿದ್ದೇವೆ. ನಮ್ಮ ಈ ಪ್ರಯತ್ನಕ್ಕೆ ಓದುಗರು, ಚಂದಾದಾರರೂ, ಹಾಗೂ ಜಾಹೀರಾತುದಾರರಾದ ತಮ್ಮ ಪ್ರೋತ್ಸಾಹವನ್ನು ಎಂದಿನಂತೆ ನಿರೀಕ್ಷಿಸುತ್ತೇವೆ...

www.mussanjenews.com

- ಇಂತಿ ಸಂಪಾದಕ

## 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ

# ಹರಿದು ಬಂದ ಜನ ಸಾಗರ

## ರಾಜ್ಯದೆಲ್ಲೆಡೆಯಿಂದ ಮಂಡ್ಯ ನಗರಕ್ಕೆ ಆಗಮಿಸಿದ ಸಾಹಿತ್ಯಾಸಕ್ತರು

ಮಂಡ್ಯ: ಮಂಡ್ಯ: ಸಕ್ಕರೆಯ ನಾಡು, ಅಕ್ಕರೆಯ ಬೀಡು, ಕಾವೇರಿ ನೆಲೆವೀಡು ಮಂಡ್ಯದಲ್ಲಿ ಸಾಹಿತ್ಯ ಸಂಭ್ರಮ ಮನೆ ಮಾಡಿತ್ತು. ಇಂದಿನಿಂದ ಆರಂಭಗೊಂಡ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ನಾಡಿನ ಮೂಲೆ ಮೂಲೆಗಳಿಂದ, ದೇಶ-ವಿದೇಶಗಳಿಂದ ಜನಸಾಗರವೇ ಹರಿದುಬಂದಿತ್ತು. ಎಲ್ಲೆಡೆ ಕನ್ನಡದ ಕಹಳೆ ಮೊಳಗಿತ್ತು.

ಇಂದಿನಿಂದ ಮೂರು ದಿನಗಳ ಕಾಲ ಜರುಗಲಿರುವ ಕನ್ನಡ ನುಡಿ ಜಾತ್ರೆಗೆ ಧ್ವಜಾರೋಹಣ ನೆರವೇರಿಸುವ ಮೂಲಕ ಅಧಿಕೃತವಾಗಿ ಚಾಲನೆ ನೀಡಲಾಯಿತು. ಬೆಳಗ್ಗೆ 6.30ಕ್ಕೆ ಸಮ್ಮೇಳನದ ಅಧ್ಯಕ್ಷರಾದ ಜಾನಪದ ವಿದ್ವಾಂಸರು, ನಾಡೋಜ ಗೊ.ರು.ಚನ್ನಬಸಪ್ಪ ಅವರ ಉಪಸ್ಥಿತಿಯಲ್ಲಿ ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಮ್ಮೇಳನ ಸ್ವಾಗತ ಸಮಿತಿಯ ಅಧ್ಯಕ್ಷರಾದ ಎನ್. ಚಲುವರಾಯಸ್ವಾಮಿ ಅವರು ರಾಷ್ಟ್ರ ಧ್ವಜಾರೋಹಣ ಮಾಡಿದರು.

ಕನ್ನಡ ಸಾಹಿತ್ಯ ಪರಿಷತ್‌ನ ರಾಜ್ಯಾಧ್ಯಕ್ಷ ಹಾಗೂ ಸಮ್ಮೇಳನ ಸ್ವಾಗತ ಸಮಿತಿಯ ಗೌರವ ಕಾರ್ಯದರ್ಶಿ ನಾಡೋಜ ಡಾ.ಮಹೇಶ್ ಜೋಷಿ, ಕನ್ನಡ ಸಾಹಿತ್ಯ ಪರಿಷತ್‌ನ ಧ್ವಜಾರೋಹಣ ನೆರವೇರಿಸಿದರೆ, ಮಂಡ್ಯ ಜಿಲ್ಲಾ ಕಸಾಪ ಸಂಚಾಲಕಿ ಮೀರಾ ಶಿವಲಿಂಗಯ್ಯ ಅವರು ನಾಡಧ್ವಜಾರೋಹಣ ನೆರವೇರಿಸಿದರು.

ವೈಭವದ ಮೆರವಣಿಗೆ, ಪೂರ್ಣಕುಂಭ ಸ್ವಾಗತ, ಜಾನಪದ ಕಲಾತಂಡಗಳ ಪ್ರದರ್ಶನದ ಮೂಲಕ ಸಮ್ಮೇಳನದ ಅಧ್ಯಕ್ಷರಾದ ಗೊ.ರು.ಚನ್ನಬಸಪ್ಪ ಅವರನ್ನು ವೇದಿಕೆಗೆ ಕರೆತರಲಾಯಿತು.

ಸಮ್ಮೇಳನ ಅಧ್ಯಕ್ಷರ ಮೆರವಣಿಗೆಗೆ ಆದಿಚುಂಚನಗಿರಿ




ಮಠದ ಪೀಠಾಧ್ಯಕ್ಷರಾದ ಡಾ.ಶ್ರೀ.ನಿರ್ಮಲಾನಂದನಾಥ ಸ್ವಾಮೀಜಿ, ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ಚಾಲನೆ ನೀಡಿದರು.

ಕಸಾಪ ಅಧ್ಯಕ್ಷ ಮಹೇಶ್ ಜೋಷಿ, ಶಾಸಕರಾದ ಗಣಿಗ ರವಿ, ರಮೇಶ್ ಬಂಡಿಸಿದ್ದೇಗೌಡ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಎಲ್ಲೆಡೆ ಕನ್ನಡದ ಬಾವುಟಗಳು :


ಮಂಡ್ಯದಲ್ಲಷ್ಟೆ ಅಲ್ಲ ಬೆಂಗಳೂರಿನಿಂದ ಮೈಸೂರು ರಸ್ತೆವರೆಗೆ ಎಲ್ಲೆಡೆ ಕನ್ನಡದ ಬಾವುಟಗಳು, ಸಾಹಿತ್ಯ ಸಮ್ಮೇಳನಕ್ಕೆ ಸ್ವಾಗತಿಸುವ ಕಟೌಟ್, ಬ್ಯಾನರ್‌ಗಳು ರಾರಾಜಿಸುತ್ತಿದ್ದವು. ಇಂದಿನಿಂದ ಮೂರು ದಿನಗಳ ಕಾಲ ಮಂಡ್ಯದ ಸ್ಯಾಂಜೋ ಆಸ್ಪತ್ರೆ ಹಾಗೂ ಹೋಟೆಲ್ ಅಮರಾವತಿ ಮುಂಭಾಗ ನಡೆಯುವ ಅಖಿಲ ಭಾರತ ಕನ್ನಡ ಸಾಹಿತ್ಯ ಪುಟ 2




ಮಂಡ್ಯದಲ್ಲಿ ನಡೆಯುತ್ತಿರುವ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸ್ಮರಣಿಕೆ ನೀಡಿ ಗೌರವಿಸಲಾಯಿತು. ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದ ಸ್ವಾಮೀಜಿ, ಸಮ್ಮೇಳನಾಧ್ಯಕ್ಷ ಗೋರೂರು ಚನ್ನಬಸಪ್ಪ, ಸಾಹಿತಿಗಳಾದ ದೊಡ್ಡರಂಗೇಗೌಡ, ಚಂದ್ರಶೇಖರ್ ಕಂಬಾರ,ಸಚಿವ ಚಲುವರಾಯಸ್ವಾಮಿ, ಶಾಸಕ ನರೇಂದ್ರ ಸ್ವಾಮಿ ಮತ್ತಿತರರಿದ್ದರು.

## ರವಿ ಮಾತನಾಡಿದ್ದು ರೆಕಾರ್ಡ್ ಆಗಿಲ್ಲ

**ಹುಬ್ಬಳ್ಳಿ:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ವಿರುದ್ಧ ಬಿಜೆಪಿ ಎಂಎಲ್‌ಸಿ ಸಿ.ಟಿ.ರವಿ ಅವರು ಮಾತನಾಡಿದ್ದ



ಬಗ್ಗೆ ಯಾವುದೇ ರೆಕಾರ್ಡ್ ಇಲ್ಲ. ಆದರೆ, ಅಶ್ಲೀಲ ಪದ ಬಳಸಿದ್ದಾರೆ ಎಂದು ನಾಲ್ವರು ಸಾಕ್ಷಿ ಹೇಳಿದ್ದಾರೆ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ. ಸಿ ಟಿ ರವಿಯವರು ಮಾತನಾಡಿದ್ದು ಆಡಿಯೋ ರೆಕಾರ್ಡ್ ಆಗಿಲ್ಲ ಸಾಕ್ಷಿಗಳು ಮಾತ್ರ ಇವೆ. ರೆಕಾರ್ಡ್ ಹುಡುಕಿದ್ದೇನೆ ನಮಗೆ ಆಡಿಯೋ ಸಿಕ್ಕಿಲ್ಲ. ನಾಲ್ಕು ಜನರು ಸಾಕ್ಷಿ ಹೇಳಿದ್ದಾರೆ. ಸಿಟಿ ರವಿ ಮತ್ತು ಲಕ್ಷ್ಮೀ ಹೆಬ್ಬಾಳ್ಕರ್ ಇಬ್ಬರ ದೂರನ್ನೂ ಪಡೆದಿದ್ದೇವೆ ಎಂದು ತಿಳಿಸಿದರು. ಸದನದಲ್ಲಿ ಪ್ರಶ್ನೋತ್ತರ ವೇಳೆ ಮುಗಿದ ಬಳಿಕ, ಕಾಂಗ್ರೆಸ್‌ನವರು ಕೇಂದ್ರ ಸಚಿವ ಶಾ ಪುಟ 2

## ಪ್ರತಿಭಟನೆ ನಡೆಸಿದರೆ ಕ್ರಮ



**ನವದೆಹಲಿ:** ಸಂಸತ್ ಆವರಣದ ಎಲ್ಲಿಯೂ ಮತ್ತು ಯಾವುದೇ ಗೇಟ್ ಬಳಿಕ ಪ್ರತಿಭಟನೆ ಮತ್ತು ಪ್ರದರ್ಶನ ನಡೆಸುವಂತಿಲ್ಲ. ನಡೆಸಿದಲ್ಲಿ, ಸದನವೂ ಗಂಭೀರ ಕ್ರಮಕ್ಕೆ ಮುಂದಾಗಲಿದೆ ಎಂದು ಸ್ಪೀಕರ್ ಓಂ ಬಿರ್ಲಾ ಎಚ್ಚರಿಸಿದ್ದಾರೆ.

ಸದನದಲ್ಲಿ ಈ ಬಗ್ಗೆ ಮಾತನಾಡಿದ ಸ್ಪೀಕರ್, ಸದನದ ನಿಯಮವನ್ನು ಪಾಲನೆ ಮಾಡಬೇಕಿದ್ದು, ಪ್ರತಿಯೊಬ್ಬರಿಗೂ ಸದನದ ಘನತೆ ಮತ್ತು ಗೌರವವನ್ನು ಕಾಪಾಡಬೇಕು, ಯಾವುದೇ ರೀತಿಯ ಪ್ರತಿಭಟನೆಯನ್ನು ಸಂಸತ್ ಅವರಣದಲ್ಲಿ ನಡೆಸುವುದು ಸರಿಯಲ್ಲ. ಸಂಸತ್ತಿನ ಗೇಟ್ ಮುಂದೆ ಪ್ರತಿಭಟನೆ ನಡೆಸುವುದು ಸರಿಯಲ್ಲ. ಪ್ರತಿಭಟನೆ ನಡೆಸದಂತೆ ನಾನು ಒತ್ತಾಯಿಸುತ್ತಿದ್ದೇನೆ ಎಂದು ಅವರು ತಿಳಿಸಿದರು.

ಇದಕ್ಕೂ ಸಂಸದೀಯ ಸಚಿವ ಕಿರಣ್ ರಿಜಿಜು ಕೂಡ ಕಾಂಗ್ರೆಸ್ ನಾಯಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸದನದಲ್ಲಿ ಗಾಂಧಿ ಅವರ ಕ್ರಮವೂ ಬಿಜೆಪಿ ಸದಸ್ಯರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ಅದರಲ್ಲೂ ಇಬ್ಬರು ಸಂಸದರು ಗಾಯಗೊಂಡ ಘಟನೆ ಖಂಡನೀಯ. ಸ್ಪೀಕರ್ ಹೇಳಿದಂತೆ ನಾವು ಸಂಸತ್ತಿನ ಗೇಟ್ ಮುಂದೆ ನಾವು ಪ್ರತಿಭಟನೆ ನಡೆಸುವುದಿಲ್ಲ, ನಮ್ಮ ಸಂಸದರು ಮಹಾತ್ಮ ಗಾಂಧಿ ಪ್ರತಿಮೆ ಬಳಿ ಪ್ರತಿಭಟನೆ ಮುಂದುವರೆಸಲಿದ್ದೇವೆ ಎಂದರು.

ಅಮಿತ್ ಶಾ ಹೇಳಿಕೆ ಖಂಡಿಸಿ ಇಂದು ಕೂಡ ಕಾಂಗ್ರೆಸ್ ನಾಯಕರು ಸಂಸತ್ ಆವರಣದಲ್ಲಿ ಪ್ರತಿಭಟನೆ ಮುಂದುವರೆಸಿದ್ದಾರೆ. ವಿಜಯ್ ಚೌಕ್‌ನಿಂದ ಸಂಸತ್‌ವರೆಗೆ ಇಂಡಿಯಾ ಒಕ್ಕೂಟದ ಬಣದ ನಾಯಕರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದು, ಅಮಿತ್ ಶಾ ಅವರು ರಾಜೀನಾಮೆ ನೀಡಬೇಕು ಮತ್ತು ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದ್ದಾರೆ.

ಇದಕ್ಕೆ ಪ್ರತಿಯಾಗಿ ಆಡಳಿತರರೂಢ ಪಕ್ಷ ಎನ್‌ಡಿಎ ನಾಯಕರು ಕೂಡ ಸಂಸತ್ ಆವರಣದಲ್ಲಿ ಕಾಂಗ್ರೆಸ್, ಡಾ ಬಿಆರ್ ಅಂಬೇಡ್ಕರ್ ಅವರಿಗೆ ಅಗೌರವ ಪುಟ 2

## ರೌಡಿಗಳ ಗೂಂಡಾ ಸರ್ಕಾರ

**ಬೆಂಗಳೂರು:** ಪೊಲೀಸ್ ವಶದಲ್ಲಿರುವ ಒಬ್ಬ ಪರಿಷತ್ ಸದಸ್ಯನಿಗೆ ತಮ್ಮ ಸರ್ಕಾರ ರಕ್ಷಣೆ ಕೊಡಲು ಆಗುತ್ತಿಲ್ಲ. ನಿಮ್ಮದು ರೌಡಿಗಳ ಗೂಂಡಾ ಸರ್ಕಾರವಿರಬಹುದು ಎಂದು ವಿಪಕ್ಷ ನಾಯಕ ಆರ್.ಅಶೋಕ್ ಆಕ್ರೋಶ ಹೊರ ಹಾಕಿದ್ದಾರೆ. ಈ ಕುರಿತು ಮಾತನಾಡಿದ ಆರ್.ಅಶೋಕ್, ಅಥವಾ ಸರ್ಕಾರದ ಭಾಗವಾಗಿರುವವರೇ ರೌಡಿಗಳು, ಗೂಂಡಾಗಳಾಗಿರಬೇಕು ಎಂದು ಕಿಡಿಕಾರಿದರು. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದ ದೇಶದ್ರೋಹಿಗಳು ಯಾವುದೇ ಕಾನೂನು ಕ್ರಮವಿಲ್ಲದೆ ಹೊರಗಿದ್ದಾರೆ. ಆ ದೇಶದ್ರೋಹಿಗಳನ್ನ ಪುಟ 2

## ಓಂ ಪ್ರಕಾಶ್ ಚೌಟಾಲಾ ನಿಧನ

**ಚಂಢೀಗಡ:** ಹರಿಯಾಣದಲ್ಲಿ ಐದು ಬಾರಿ ಮುಖ್ಯಮಂತ್ರಿಯಾಗಿ ಅಧಿಕಾರದ ಚುಕ್ಕಾಣಿ ಹಿಡಿದಿದ್ದ, ರಾಷ್ಟ್ರೀಯ ಲೋಕ ದಳ ವರಿಷ್ಠ ನಾಯಕ ಓಂ ಪ್ರಕಾಶ್ ಚೌಟಾಲಾ ಗುರುಗ್ರಾಮದ ತಮ್ಮ ನಿವಾಸದಲ್ಲಿ ಹೃದಯಾಘಾತದಿಂದ ನಿಧನರಾಗಿದ್ದಾರೆ. ತಕ್ಷಣಕ್ಕೆ ಅವರನ್ನು ಮೆಧಾಂತ್ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಪ್ರಯೋಜನವಾಗಿಲ್ಲ. ಅವರಿಗೆ 89 ವರ್ಷ ವಯಸ್ಸಾಗಿತ್ತು. ಮಾಜಿ ಪ್ರಧಾನಿ ದೇವಿ ಲಾಲ್ ಅವರ ಮಗ ಓಂ ಪ್ರಕಾಶ್ ಚೌಟಾಲಾ ಅವರು. 1935ರ ಜನವರಿ 1ರಂದು ಚೌಟಲಾ ಗ್ರಾಮದಲ್ಲಿ ಜನಿಸಿದ್ದರು. 1989ರ ಡಿಸೆಂಬರ್ 2ರಂದು ಪುಟ 2

## ನಾನು ಶಾಕ್‌ನಲ್ಲಿದ್ದೇನೆ, ತುಂಬಾ ದುಃಖವಾಗಿದೆ

ಬೆಳಗಾವಿ: ಅಶ್ಲೀಲ ಪದಬಳಕೆಯಿಂದ ತಾವು ಶಾಕ್‌ನಲ್ಲಿದ್ದು, ಬಹಳ ದುಃಖದಲ್ಲಿದ್ದೇನೆ. ಈ ಬಗ್ಗೆ ಹೆಚ್ಚು ಮಾತನಾಡಲು ಬಯಸುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್ ಭಾವುಕರಾಗಿ ಪ್ರತಿಕ್ರಿಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನೆಯಾದ ತಕ್ಷಣ ನನ್ನ ಸೊಸೆ ಆಸ್ಪತ್ರೆಯಲ್ಲಿದ್ದರೂ ಕೂಡ ಕರೆ ಮಾಡಿ ಅಮಾ ನೀವು ಹೋರಾಟಗಾರ್ತಿ, ನಿಮ್ಮ ಜೊತೆ ನಾವಿದ್ದೇವೆ ಎಂದಿದ್ದಾರೆ. ಮಗ ಬೆಂಗಳೂರಿನಲ್ಲಿದ್ದು, ಆತನೂ ಕರೆ ಮಾಡಿ ತಕ್ಷಣ ಹೊರಟುಬಂದಿದ್ದಾನೆ. ಕ್ಷೇತ್ರದ ಜನ ಕುಟುಂಬಸದಸ್ಯರು ನನ್ನ ಬೆನ್ನಿಗಿದ್ದಾರೆ. ಇದರ ಹೊರತಾಗಿ ನಾನು ಘಟನೆಯ ಬಗ್ಗೆ ಹೆಚ್ಚಿನ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ ಎಂದರು.

ಸಿ.ಟಿ.ರವಿಯವರು ರಾಹುಲ್‌ಗಾಂಧಿಯನ್ನು ಡ್ರಗ್ ಅಡಿಕ್ಟ್ ಎಂದಿದ್ದಕ್ಕೆ ನೀವು ಕೊಲೆಗಾರರು ಎಂದು ನಾನು ಪ್ರತಿಕ್ರಿಯಿಸಿದ್ದೇನೆ. ರಾಜಕಾರಣದಲ್ಲಿ ಪುಟ 2

## ಸಭಾಪತಿಗಳ ನಡೆ ಬೇಸರ ತಂದಿದೆ: ಡಿಸಿಎಂ



ಬೆಳಗಾವಿ: ಸಾಕ್ಷಿಗಳು ಇದ್ದರೆ ಸಭಾಪತಿಗಳು ಕ್ರಮ ಕೈಗೊಳ್ಳಬಹುದಿತ್ತಲ್ಲವೇ ಎಂದು ಕೇಳಿದಾಗ, "ಅವರು ಹಿರಿಯ ನಾಯಕರು. ಅವರ ಬಗ್ಗೆ ನನಗೆ ಗೌರವವಿದೆ. ಆದರೆ ಈ ವಿಚಾರದಲ್ಲಿ ಅವರ ನಡೆ ಬೇಸರ ತಂದಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಆಕ್ರೋಶ ವ್ಯಕ್ತಪರಿಸಿದರು.

ಅವರು ಯಾವುದೇ ಪಕ್ಷದವರಾದರೂ ಸಭಾಪತಿ ಸ್ಥಾನದಲ್ಲಿ ಕೂತಾಗ ಎಲ್ಲರ ರಕ್ಷಣೆ ಮಾಡಬೇಕು. ಈ ವಿಚಾರವಾಗಿ ಅವರು ನಿನ್ನೆ ಚರ್ಚೆಗೆ ಅವಕಾಶ ನೀಡಬೇಕಿತ್ತು. ಅಲ್ಲಿ ಏನಾಗಿದೆ ಎಂದು ಪರಿಶೀಲನೆ ಮಾಡಬೇಕಿತ್ತು. ಒಂದು ವೇಳೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ತಪ್ಪಿದ್ದರೆ ಅವರದ್ದೆ ತಪ್ಪು ಎಂದು ಹೇಳಬೇಕಿತ್ತು. ಅದನ್ನು ಬಿಟ್ಟು ಇಬ್ಬರನ್ನು ಕರೆದುಕೊಂಡು ಹೋಗಿ ಹೇಳಿಕೆ ಬರೆಸಿಕೊಳ್ಳುವುದು ಸರಿಯಲ್ಲ ಎಂದರು.

"ಸಿ.ಟಿ. ರವಿ ಅವರ ಹರಕಲು ಬಾಯಿ ಸಂಸ್ಕೃತಿ ಇದೇ ಮೊದಲಲ್ಲ. ಅವರು ಈ ಹಿಂದೆ ಸಿದ್ದರಾಮಯ್ಯ ಸೇರಿದಂತೆ ಯಾರ ಬಗ್ಗೆ ಏನೆಲ್ಲಾ ಪದ ಪ್ರಯೋಗ ಮಾಡಿದ್ದಾರೆ ಎಂಬುದು ಗೊತ್ತಿದೆ" ಬೆಳಗಾವಿಯ ಸರ್ಕಿಟ್ ಹೌಸ್ ನಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಪ್ರತಿಕ್ರಿಯೆ ನೀಡಿದರು.

ಸಿ.ಟಿ. ರವಿ ಅವರ ಬಂಧನ ವಿಚಾರವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, "ಈ ಹಿಂದೆ ಸಿದ್ದರಾಮಯ್ಯ ಅವರನ್ನು ಸಿದ್ರಾಮುಲ್ಲಾ ಖಾನ್ ಎಂದು ಕರೆದಿದ್ದರು. ಹೀಗೆ ನಮ್ಮ ನಾಯಕರ ವಿರುದ್ಧ ಬಹಳ ಕೀಳು ಮಟ್ಟದ ಪದ ಬಳಕೆ ಮಾಡಿದ್ದಾರೆ. ಪುಟ 2

## ಜಾಮೀನು ಆದೇಶ ಕಾಯ್ದಿರಿಸಿದ ಕೋರ್ಟ್

ಬೆಳಗಾವಿ: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಾನಪರಿಷತ್ ಬಿಜೆಪಿ ಸದಸ್ಯ ಸಿಟಿ ರವಿ ಅವರ ಜಾಮೀನು ಅರ್ಜಿ ಆದೇಶವನ್ನ ಬೆಳಗಾವಿಯ ಜೆಎಂಎಫ್‌ಸಿ ನ್ಯಾಯಾಲಯ ಕಾಯ್ದಿರಿಸಿದೆ.

ಪ್ರಕರಣ ಸಂಬಂಧ ನಿನ್ನೆ ಬೆಳಗಾವಿಯ ಹಿರೇಬಾಗೇವಾಡಿ ಠಾಣೆಯಲ್ಲಿ ಈಖಖ ದಾಖಲಾಗಿತ್ತು. ಬಳಿಕ ಎಂಎಲ್ ಸಿ ಸಿ.ಟಿ ರವಿ ಅವರನ್ನ ಪೊಲೀಸರು ಬಂಧಿಸಿ ಬೆಳಗಾವಿಯ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು.

ಈ ವೇಳೆ ಎಂಎಲ್ ಸ ಸಿಟಿ ರವಿ ಅವರು ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆದಿದ್ದು ಸಿಟಿ ರವಿ ಪರವಾಗಿ ವಕೀಲ ಎಂಬಿ ಜಿರಲಿ ಅವರು ವಾದ ಮಂಡಿಸಿದರು. ವಾದ ಆಲಿಸಿದ ಬಳಿಕ ಜಡ್ಜ್ ಸಿಟಿ ರವಿ ಅವರ ಜಾಮೀನು ಆದೇಶವನ್ನು ಕಾಯ್ದಿರಿಸಿ ಆದೇಶ ಹೊರಡಿಸಿ ವಿಚಾರಣೆ ಮಧ್ಯಾಹ್ನ 3 ಗಂಟೆಗೆ ಮುಂದೂಡಿಕೆ ಮಾಡಿದ್ದಾರೆ. ಮಧ್ಯಾಹ್ನ ಸರ್ಕಾರದ ಪರ ಪುಟ 2

## ಭಯೋತ್ಪಾದಕರಂತೆ ನಡೆಸಿಕೊಂಡರು: ಆಕ್ಷೇಪ



ಬೆಳಗಾವಿ: ಮಾಜಿ ಸಚಿವರೂ ಆದ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ರಾಜ್ಯ ಸರಕಾರದ ಕುಮ್ಮಕ್ಕಿನಿಂದ ಭಯೋತ್ಪಾದಕರಂತೆ ನಡೆಸಿಕೊಂಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.

ಇಂದು ಇಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಇಂಥ ಘಟನೆ ರಾಜ್ಯ ಮಾತ್ರವಲ್ಲ; ಇಡೀ ದೇಶದಲ್ಲಿ ಆಗಿರಲು ಸಾಧ್ಯವಿಲ್ಲ ಎಂದು ವಿಶ್ಲೇಷಿಸಿದರು. ನಾಲ್ಕೈದು ಪೊಲೀಸ್ ಠಾಣೆಗೆ ಕರೆದೊಯ್ದು ಅಲ್ಲಿ ಕೂರಿಸಿದ್ದಾರೆ. ವಿಪಕ್ಷ ನಾಯಕರು, ವಕೀಲರನ್ನೂ ಒಳಕ್ಕೆ ಬಿಟ್ಟಿಲ್ಲ ಎಂದು ಖಂಡಿಸಿದರು.

ಸಿ.ಟಿ.ರವಿ ಅವರ ದೂರನ್ನೂ ರಿಜಿಸ್ಟರ್ ಮಾಡಿಲ್ಲ; ನಮ್ಮೆಲ್ಲ ಕಾರ್ಯಕರ್ತರು ರಾತ್ರಿ ಪೊಲೀಸ್ ಠಾಣೆ ಮುಂದೆ ಕುಳಿತು ಪ್ರತಿಭಟನೆ ಮಾಡಿದ್ದಾರೆ. ಸಿ.ಟಿ.ರವಿ ಅವರಿಗೆ ತಲೆಗೆ ಪೆಟ್ಟು ಬಿದ್ದಿದೆ. ಆಸ್ಪತ್ರೆಗೂ ಕರೆದುಕೊಂಡು ಹೋಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸರಕಾರದ ಕುಮ್ಮಕ್ಕಿನಿಂದ ಅತಿರೇಕದ ವರ್ತನೆ ತೋರಿದ್ದಾರೆ ಎಂದ ಅವರು, ಸಿ.ಟಿ.ರವಿ ಅವರ ಹೇಳಿಕೆ ಕುರಿತು ಸಭಾಪತಿಯವರ ರೂಲಿಂಗ್ ಅನ್ನೂ ಗಮನಿಸಬೇಕಿದೆ. ತದನಂತರ ಸುವರ್ಣಸೌಧಕ್ಕೆ ನುಗ್ಗಿ ಗೂಂಡಾವರ್ತನೆ ಮಾಡಿದ್ದು, ಬಳಿಕ ಸಿ.ಟಿ.ರವಿ ಅವರನ್ನು ಹೊತ್ತಾಕಿಕೊಂಡು ಹೋಗಿದ್ದಾರೆ. ಸಿ.ಟಿ.ರವಿ ಅವರು ವಿಧಾನಪರಿಷತ್ ಸದಸ್ಯರು, ಮಾಜಿ ಸಚಿವರಿದ್ದು, ಅವರೊಬ್ಬ ಸಾಮಾನ್ಯ ವ್ಯಕ್ತಿ ಅಲ್ಲ; ಹಿಂದೆ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡಿದವರು ಎಂದು ಗಮನ ಸೆಳೆದರು. ಪುಟ 2

## ನನಗೇನಾದರೂ ಆದ್ರೆ ಸರ್ಕಾರ ಮತ್ತು ಪೊಲೀಸರೇ ಹೊಣೆ



ಬೆಂಗಳೂರು: ನಿರ್ಜನ ಪ್ರದೇಶದಲ್ಲಿ ವಾಹನ ನಿಲ್ಲಿಸಿ, ಫೋನ್‌ನಲ್ಲಿ ಮಾತುಕತೆ ನಡೆಸುತ್ತಾ ಏನೋ ಷಡ್ಯಂತ್ರ ಮಾಡುತ್ತಿದ್ದಾರೆ. ನನಗಾಗುವ ಯಾವುದೇ ತೊಂದರೆಗೆ ಪೊಲೀಸ್ ಇಲಾಖೆ ಹಾಗೂ ಕಾಂಗ್ರೆಸ್ ಸರ್ಕಾರವೇ ಕಾರಣ ಎಂದು ಬಿಜೆಪಿ ನಾಯಕ ಸಿ.ಟಿ .ರವಿಯವರು ಹೇಳಿದ್ದಾರೆ.

ಸಾಮಾಜಿಕ ಜಾಲತಾಣನಲ್ಲಿ ಸರಣಿ ಪೋಸ್ಟ್ ಮಾಡಿರುವ ಅವರು, ಪೊಲೀಸ್ ಕಸ್ಟಡಿಯಲ್ಲಿ ತಲೆಗೆ ಆದ ಗಾಯಕ್ಕೆ ಪ್ರಥಮ ಚಿಕಿತ್ಸೆ ಕೊಡಿಸಲು 3 ಗಂಟೆ ತೆಗೆದುಕೊಂಡ ಕರ್ನಾಟಕ ಪೊಲೀಸರು. ಈಗ ಕಳೆದ ಐದಾರು ಗಂಟೆಗಳಿಂದ ಪೊಲೀಸ್ ವಾಹನದಲ್ಲಿ ಕೂರಿಸಿಕೊಂಡು ಸುತ್ತಾಡಿಸುತಿದ್ದಾರೆ. ನಿರ್ಜನ ಪ್ರದೇಶದಲ್ಲಿ ವಾಹನ ನಿಲ್ಲಿಸಿ, ಫೋನ್ ನಲ್ಲಿ ಮಾತುಕತೆ ನಡೆಸುತ್ತಾ ಏನೋ ಷಡ್ಯಂತ್ರ ಮಾಡುತ್ತಿದ್ದಾರೆ. ನನಗಾಗುವ ಯಾವುದೇ ತೊಂದರೆಗೆ ಪೊಲೀಸ್ ಇಲಾಖೆ ಹಾಗೂ ಕಾಂಗ್ರೆಸ್ ಸರ್ಕಾರವೇ ಕಾರಣ ಎಂದು ಹೇಳಿದ್ದಾರೆ.ಅಲ್ಲದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧವೂ ವಾಗ್ದಾಳಿ ಪುಟ 2

# ಶಿಕ್ಷಣದಲ್ಲಿ ಮಕ್ಕಳಿಗೆ 3-ಹೆಚ್ ಸೂತ್ರ ಅಳವಡಿಸಿ

**ಮಂಡ್ಯ:** ಇಂದು ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅನೇಕ ಜನ ಶಿಕ್ಷಕರು ಇಲ್ಲಿ ಸೇರಿದ್ದೀರಿ. ಸಂಕಷ್ಟದಲ್ಲಿರುವ ಭಾಷೆಗಳಲ್ಲಿ ಕನ್ನಡವೂ ಒಂದೆಂದು ವಿದ್ವಾಂಸರು ಹೇಳುತ್ತಾರೆ. ಇದಕ್ಕೆ ಕಾರಣಗಳೇನು ಎಂಬುದನ್ನು ಕಂಡುಕೊಳ್ಳಬೇಕಾಗಿದೆ. ನನಗೆ ತಿಳಿದ ಮಟ್ಟಿಗೆ ನಮ್ಮ ಶಿಕ್ಷಣ ವ್ಯವಸ್ಥೆಯಲ್ಲಿ ಕೆಲವು ಸಮಸ್ಯೆಗಳಿವೆ. ಶಿಕ್ಷಣ ವ್ಯವಸ್ಥೆಯಲ್ಲಿ ನಾವು ಮಕ್ಕಳಿಗೆ 3-ಎಚ್ ಸೂತ್ರವನ್ನು ಅಳವಡಿಸಿಕೊಳ್ಳಬೇಕಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಸಕ್ಕರೆ ನಾಡು ಮಂಡ್ಯದಲ್ಲಿ ಇಂದು ಶುಕ್ರವಾರ ಮೂರು ದಿನಗಳ 87ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅದ್ದೂರಿ ಚಾಲನೆ ಸಿಕ್ಕಿದೆ. 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ದೀಪ ಬೆಳಗಿಸುವುದರ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು. ಉದ್ಘಾಟನಾ ಕಾರ್ಯಕ್ರಮದಲ್ಲಿ ನಿರ್ಮಲಾನಂದನಾಥ ಶ್ರೀ, ಗೋ. ರು.ಚನ್ನಬಸಪ್ಪ, ಸಚಿವರಾದ ಚಲುವರಾಯಸ್ವಾಮಿ, ಮಹದೇವಪ್ಪ, ಶಿವರಾಜ್ ತಂಗಡಗಿ, ಸಭಾಧ್ಯಕ್ಷ ಯು.ಟಿ.ಖಾದರ್, ಸಾಹಿತಿ ಚಂದ್ರಶೇಖರ ಕಂಬಾರ, ಶಾಸಕರು ಸೇರಿದಂತೆ ಹಲವರು ಭಾಗಿಯಾಗಿದ್ದರು.



ಸಮ್ಮೇಳನದಲ್ಲಿ ಪ್ರಮುಖವಾಗಿ ಶಿಕ್ಷಣ ಕ್ಷೇತ್ರದಲ್ಲಿನ ಸಮಸ್ಯೆಗಳ ಬಗ್ಗೆ ಮಾತನಾಡಿದ ಅವರು, ಹೆಡ್, ಹಾರ್ಟ್ ಮತ್ತು ಹ್ಯಾಂಡ್ ಎಂದು ಕರೆಯಲಾಗುವ 3-ಹೆಚ್ ಸೂತ್ರಗಳು ಮೆದುಳು, ಕರುಣೆ ಮತ್ತು ಕೌಶಲ್ಯವು ಸೇರಿ ರೂಪುಗೊಂಡ ಶಿಕ್ಷಣ ವ್ಯವಸ್ಥೆ ನಮ್ಮದಾಗಬೇಕಾಗಿದೆ. ಬುದ್ಧ ಇದನ್ನು ಯಶಸ್ವಿಯಾಗಿ ಪ್ರಯೋಗಿಸಿದ್ದ. ಗಾಂಧೀಜಿಯವರೂ ಇದನ್ನೆ ಹೇಳಿದ್ದರು. ಈಗಿನ ಶಿಕ್ಷಣ ವ್ಯವಸ್ಥೆಯು ಹಳೆಯ ವೈದಿಕ ಶಿಕ್ಷಣ ವ್ಯವಸ್ಥೆಯಂತೆಯೆ ಬಾಯಿಪಾಠ ಮಾಡುವ ಉಪಯೋಗವಿಲ್ಲದ ವ್ಯವಸ್ಥೆಯಾಗಿದೆ. ಕನ್ನಡ ಉಳಿಯಬೇಕಾದರೆ ನಮ್ಮ ಶಿಕ್ಷಣ ವ್ಯವಸ್ಥೆಯನ್ನು ಆಮೂಲಾಗ್ರ ಬದಲಾಯಿಸಿ ಮಕ್ಕಳನ್ನು ಕನ್ನಡ ಶಾಲೆಗಳಿಗೆ ಸೆಳೆಯಬೇಕಾಗಿದೆ. ಹೀಗಾದಾಗ ಮಾತ್ರ ಕನ್ನಡದಲ್ಲಿ ಯೋಚಿಸುವ, ಸಂಶೋಧನೆ ಮಾಡುವ, ಉತ್ಪಾದನೆ ಮತ್ತು ಮಾರುಕಟ್ಟೆ ಮಾಡುವ ಭಾಷೆಯಾಗಿ ಕನ್ನಡವು ಬೆಳೆಯುತ್ತದೆ ಎಂದು ಭಾವಿಸುತ್ತಿರುವುದಾಗಿ ಹೇಳಿದರು.

ಮಂಡ್ಯ ಜಿಲ್ಲೆಯು ಅಪ್ಪಟ ಕನ್ನಡಿಗರು ವಾಸಿಸುವ ಜಿಲ್ಲೆ. ಕನ್ನಡ ಭಾಷೆ ಮತ್ತು ಸಂಸ್ಕೃತಿ ವಿಕಾಸಕ್ಕೆ ಈ ಜಿಲ್ಲೆಯ ಕೊಡುಗೆ ಅಪಾರ. ಕ್ರಿ.ಶ 10ನೇ ಶತಮಾನದ ಆತಕೂರಿನ ಶಾಸನ ನಾಡಿನ ಹಳೆಯ ಶಾಸನಗಳಲ್ಲೊಂದು. ನಾಯಿಯೊಂದರ ವೀರ ಮರಣವೂ ಇತಿಹಾಸದಲ್ಲಿ ನೆಲೆ ನಿಲ್ಲುವಂತೆ ಮಾಡಿದ ಶಾಸನ ಮತ್ತು ಅಲ್ಲಿ ಬಳಕೆಯಾದ ಕನ್ನಡವನ್ನು ನಾವು ಮರೆಯಬಾರದು.

ನಮ್ಮ ಭಾಷೆ, ನಮ್ಮ ಸಂಸ್ಕೃತಿ, ಪರಂಪರೆಗಳನ್ನು ಪ್ರತಿನಿಧಿಸುತ್ತದೆ. ವಿಶ್ವವೇ ಜಾಗತಿಕ ಹಳ್ಳಿಯಾಗಿ ಪರಿವರ್ತಿತವಾಗಿರುವ ಈ ಸಂದರ್ಭದಲ್ಲಿ ನಾವು ನಮ್ಮತನವನ್ನು ಉಳಿಸಿಕೊಳ್ಳುವ ಅಗತ್ಯತೆ ಹಿಂದೆಂದಿಗಿಂತಲೂ ಈಗ ಹೆಚ್ಚಿದೆ. "ನುಡಿ ಬಿಟ್ಟರೆ ನಾಡು ಬಿಟ್ಟಂತೆ ಭಾಷೆಗೇಡಿ ದೇಶಗೇಡಿಯೂ ಆಗುತ್ತಾನೆ ಎಂದು ಕುವೆಂಪು ಹೇಳಿದ್ದರು"

ಓದು-ಬರಹ ಭಾಷೆ ಬರವಣಿಗೆ ಎಲ್ಲವೂ ಪರಕೀಯವಾದರೆ ನಮ್ಮ ಮಾತೃಭಾಷೆಗೆ ಅಪಾಯ ತಪ್ಪಿದ್ದಲ್ಲ. ಯಾವುದೇ ಭಾಷೆಯ ಅಳಿವು ಆ ಭಾಷೆ ಸಮುದಾಯದ ಅಳಿವೂ ಆಗಿರುತ್ತದೆ. ಭಾಷೆ ಬೆಳೆಯುವುದು ಉಳಿಯುವುದು ಅದನ್ನು ಬಳಸಿದಾಗ ಮಾತ್ರ. ಬಳಸದೇ ಹೋದರೆ ಭಾಷೆಯ ಅಸ್ತಿತ್ವ ಹಾಗೂ ಬೆಳವಣಿಗೆ ಎರಡಕ್ಕೂ ಅಪಾಯ ತಪ್ಪಿದ್ದಲ್ಲ.

ಕನ್ನಡದ ಕಲೆ, ಜಾನಪದ, ಭಾಷೆ, ಉದ್ಯೋಗದ ಜೊತೆಗೆ ಕನ್ನಡದ ಅಸ್ಮಿತೆಗೆ ಉಂಟಾಗಿರುವ ಸಮಸ್ಯೆಗಳನ್ನು ಗುರುತಿಸಿ ಹಾಗೂ ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಸಾಹಿತ್ಯ ಸಮ್ಮೇಳನಗಳು ಮಹತ್ವದ ಕೊಡುಗೆ ನೀಡುತ್ತಾ ಬಂದಿವೆ. ಈ ಸಮ್ಮೇಳನವೂ ಆ ದಿಕ್ಕಿನಲ್ಲಿ ಕೆಲಸ ಮಾಡಲಿ.

ಕನ್ನಡ ನೆಲದಲ್ಲಿ ಕನ್ನಡ ಭಾಷೆಯೇ ಸಾರ್ವಭೌಮ ಎಂಬುದನ್ನು ನೆನಪಿಟ್ಟುಕೊಳ್ಳಿ. ಅನ್ಯ ಭಾಷಿಕರೊಂದಿಗೆ ಅವರದೇ ಭಾಷೆಯಲ್ಲಿ ಮಾತನಾಡುವುದನ್ನು ಬಿಡಿ. ಅವರಿಗೆ ಕನ್ನಡ ಕಲಿಸಿ. ಕನ್ನಡ ಉಳಿಸಿ ಬೆಳೆಸಬೇಕಾಗಿದೆ.

ಇದು ನಿನ್ನ ಭಾಷೆ, ಇದು ದೇಶಭಾಷೆ, ಇದು ಸಾವಿರಾರು ವರ್ಷಗಳ ಸುಪುಷ್ಟ ಸಾಹಿತ್ಯ ಭಾಷೆ, ಇದು ಮಹಾಕವಿಗಳನ್ನೂ ಶಿಲ್ಪಿಗಳನ್ನೂ, ರಾಜಾಧಿರಾಜರನ್ನೂ, ವೀರಾಧಿವೀರರನ್ನೂ ರಸಋಷಿ ದಾರ್ಶನಿಕರನ್ನು ಹಡೆದಿರುವ ಭಾಷೆ ಎಂದು ಕುವೆಂಪು ಹೇಳಿದರು.

ಕಾವೇರಿ ಕಣಿವೆಯಲ್ಲಿರುವ ಮಂಡ್ಯ ಜಿಲ್ಲೆಯಲ್ಲಿ ಕಾವೇರಿ, ಹೇಮಾವತಿ, ಶಿಂಷಾ, ಲೋಕಪಾವನಿ ಮುಂತಾದ ಜೀವನದಿಗಳು ಹರಿಯುತ್ತಿವೆ. ಕನ್ನಡ ಸಾಹಿತ್ಯ ಪರಂಪರೆಯನ್ನು ಸದಾಕಾಲಕ್ಕೂ ಮೆರೆಸಿರುವ ಮಂಡ್ಯ ಜಿಲ್ಲೆ, ಅಪ್ಪಟ ಕನ್ನಡದ ನೆಲ. ಭತ್ತದ ಕಣಜ, ಸಕ್ಕರೆ ನಾಡು ಎಂದೇ ಜನಜನಿತ. ಜಗತ್ತಿನ ಯಾವ ಮೂಲೆಯ ಭಾಷಿಕರೆ ಬಂದರೂ ಅವರಿಗೆ ಒಂದೇ ತಿಂಗಳಲ್ಲಿ ಕನ್ನಡವನ್ನು ಕಲಿಸುತ್ತೇವೆ ಎಂಬ ಭಾಷಾಭಿಮಾನ ಮತ್ತು ದಿಟ್ಟತನ ಮಂಡ್ಯದ ಜನರದ್ದು ಎಂದು ಸಿಎಂ ಹೇಳಿದರು.

## ಕಾಂಗ್ರೆಸ್ ಪಕ್ಷದ ಮುಖಂಡ ಬಿಬಿಎಂಪಿ ಮಾಜಿ ಸದಸ್ಯ ಎಸ್.ಕೇಶವಮೂರ್ತಿ ಹುಟ್ಟುಹಬ್ಬ ಸಂಭ್ರಮಾಚರಣೆ

**ಬೆಂಗಳೂರು :** ಮಹಾಲಕ್ಷ್ಮೀಲೇಔಟ್: ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಎಸ್.ಕೇಶವಮೂರ್ತಿರವರ ಹುಟ್ಟುಹಬ್ಬ ಅಚರಣೆಯನ್ನು ಅಭಿಮಾನಿಗಳು, ಸ್ನೇಹಿತರು ಅದ್ದೂರಿಯಾಗಿ ಅಚರಿಸಿದರು.

ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಎಸ್.ಕೇಶವಮೂರ್ತಿ ಕೇಕ್ ಕತ್ತರಿಸಿ, ಸರ್ಕಾರಿ ಶಾಲೆಯ ಮಕ್ಕಳಿಗೆ ನೋಟ್ ಪುಸ್ತಕಗಳನ್ನು ವಿತರಿಸಿದರು. ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮಹಿಳಾ ಮುಖಂಡೆ ಚೇತನಾ ಕೇಶವಮೂರ್ತಿ, ಆಡಳಿತ ಪಕ್ಷದ ನಾಯಕ ಮಾಜಿ ಎಮ್.ಶಿವರಾಜು, ಕಾಂಗ್ರೆಸ್ ಪಕ್ಷದ ಮುಖಂಡರುಗಳಾದ ಹೆಚ್.ಎಸ್. ಮಂಜುನಾಥ್ ಗೌಡ, ಸುಧೀಂದ್ರ, ಜನಾರ್ಧನ್ ಕುಮಾರೇಗೌಡ, ಶಂಶೀರ್ ಬೇಗ್, ಪರಿಸರ ರಾಮಕೃಷ್ಣ ಭಾಗವಹಿಸಿದ್ದರು.



ಮಹಾಲಕ್ಷ್ಮಿಪುರಂ ವಾರ್ಡ್ ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಎಸ್. ಕೇಶವಮೂರ್ತಿರವರು ಕೆ.ಎಲ್.ಇ.ಕಾಲೇಜಿನಲ್ಲಿ ವಿದ್ಯಾರ್ಥಿಗಳ ಪರ ಹೋರಾಟದ ಮೂಲಕ ಸಾಮಾಜಿಕ ಸೇವೆಗೆ ಮುನ್ನುಡಿ ಬರೆದರು.

ಡೊನೇಷನ್ ಹಾವಳಿ ಮತ್ತು ಬಸ್ ಪಾಸ್ ಸಮಸ್ಯೆ ಕುರಿತು ಅಂದು ಸಾವಿರಾರು ವಿದ್ಯಾರ್ಥಿಗಳ ಜೊತೆಗೂಡಿ ದೊಡ್ಡ ಹೋರಾಟ ಮಾಡಿದ್ದರು.ಅಂದಿನ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿಗಳಾದ ಆರ್.ಗುಂಡೂರಾವ್ ರವರ ನಿಕಟಸಂಪರ್ಕ ಲಭಿಸಿತು.

ಕೆ.ಎಲ್.ಇ.ಕಾಲೇಜು ವಿದ್ಯಾರ್ಥಿ ಸಂಘಟನೆಯ ಅಧ್ಯಕ್ಷರಾಗಿ ಉತ್ತಮ ಸೇವೆ ಮಾಡಿದ ಪ್ರತಿಫಲ ವಿದ್ಯಾರ್ಥಿ ನಾಯಕರಾಗಿ ಎಸ್.ಕೇಶವಮೂರ್ತಿರವರು ಬೆಳದರು. ಕಾಂಗ್ರೆಸ್ ಪಕ್ಷ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಖರ್ಗೆ, ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಮತ್ತು ಕೆಪಿಸಿಸಿ ಅಧ್ಯಕ್ಷರು, ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರರವರ ಕಳೆದ 40ವರ್ಷಗಳಿಂದ ಉತ್ತಮ ಒಡನಾಟವಿದೆ. ಕಾಂಗ್ರೆಸ್ ಪಕ್ಷದಲ್ಲಿ ಯುವ ಕಾಂಗ್ರೆಸ್ , ಜಿಲ್ಲಾ ಕಾಂಗ್ರೆಸ್ ವಿಭಾಗದಲ್ಲಿ ವಿವಿಧ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ.

ಕಾಂಗ್ರೆಸ್ ಪಕ್ಷ ಹೈಕಮಾಂಡ್ ಇವರ ಹೋರಾಟವನ್ನು ಗಮನಿಸಿ ಬಿಬಿಎಂಪಿ ಚುನಾವಣೆಯಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಿದರು.ಎಸ್. ಕೇಶವಮೂರ್ತಿರವರು ಮಹಾಲಕ್ಷ್ಮಿಪುರಂ ವಾರ್ಡ್ ಮೊದಲನೇಯ ಬಾರಿಗೆ ಬಿಬಿಎಂಪಿ ಸದಸ್ಯರಾಗಿ ಆಯ್ಕೆಯಾದರು ನಂತರ ಐದು ವರ್ಷಗಳ ಜನಪರ ಕೆಲಸ ಮೆಚ್ಚಿದ ಜನರು ಎರಡನೇಯ ಬಾರಿಗೆ ಅತ್ಯಧಿಕ ಮತಗಳಿಂದ ಗೆಲ್ಲಿಸುತ್ತಾರೆ.ಎಸ್.ಕೇಶವಮೂರ್ತಿರವರು 10ವರ್ಷ ಮಹಾನಗರ ಪಾಲಿಕೆ ಸದಸ್ಯರಾಗಿ ಜನಪರ ಕಾರ್ಯಗಳನ್ನು ಮಾಡಿದ್ದಾರೆ.

ಉತ್ತಮ ರಸ್ತೆಗಳು, ಶುದ್ದ ಕುಡಿಯುವ ನೀರಿನ ಘಟಕ ಮತ್ತು ಉತ್ತಮ ಪಾರ್ಕ್ ಗಳು ಜನರಿಗೆ ಒದಗಿಸಿ ಉತ್ತಮ ಜನಪ್ರತಿನಿಧಿ ಎಂದು ಹೆಸರು ಗಳಿಸಿದ್ದಾರೆ.

## ಅಪರಾಧ ತಡೆ ಕುರಿತ ಅರಿವು

**ಬೆಂಗಳೂರು:** ಬೆಂಗಳೂರು ನಗರ ಪೊಲೀಸ್ ಆಯೋಜಿಸಿರುವ ಅಪರಾಧ ತಡೆ ಮಾಸಾಚರಣೆ ಪ್ರಯುಕ್ತವಾಗಿ ಪೂರ್ವ ವಿಭಾಗ, ಮಾರತಹಳ್ಳಿ ಉಪವಿಭಾಗದ ಬೆಳ್ಳಂದೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆಟೋ ಚಾಲಕರು ಹಾಗೂ ಸಾರ್ವಜನಿಕರಿಗೆ ಅಪರಾಧ ತಡೆಯ ಬಗ್ಗೆ ಅರಿವು ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಠಾಣಾಧಿಕಾರಿ ರಮೇಶ್ ಎಸ್.ಆರ್. ಸಬ್ ಇನ್ಸ್ಪೆಕ್ಟರ್ ರೇವಣ್ಣ ಸಿದ್ದಪ್ಪ ಜಿ.ಜೀರಂಕಲಗಿ, ವಕೀಲರಾದ ಅನಿಲ್ ರೆಡ್ಡಿ, ಅಪರಾಧ ವಿಭಾಗದ ಸಿಬ್ಬಂದಿಗಳಾದ ಸಂತೋಷ್ ಅಮಾತ್ಯ, ಮಂಜುನಾಥ್ ಲಮಾಣಿ, ಬಸವರಾಜು, ಜಗದೀಶ್ ಮತ್ತು ಪವನ್ ಉಪಸ್ಥಿತರಿದ್ದರು.



## ರಾಜ್ಯದಲ್ಲಿ ಪೊಲೀಸ್ ದುರ್ಬಳಕೆ ಹೆಚ್ಚಾಗುತ್ತಿದೆ: ಬಸವರಾಜ ಬೊಮ್ಮಾಯಿ

**ನವದೆಹಲಿ:** ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿಯವರು ಸದನದಲ್ಲಿ ಅವಾಚ್ಯವಾಗಿ ಹೇಳಿಕೆ ನೀಡಿದ್ದಾರೊ ಇಲ್ಲವೊ ಎಂಬುದರ ಸತ್ಯಶೋಧನೆ ಆಗಬೇಕು. ಸರ್ಕಾರ ಅವರಿಗೆ ಚಿತ್ರಹಿಂಸೆ ಕೊಟ್ಟು ಅಮಾನವೀಯವಾಗಿ ನಡೆಸಿಕೊಂಡಿದೆ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸರ ನಡವಳಿಕೆಯನ್ನು ನಾವು ಸಮರ್ಥಿಸಿಕೊಳ್ಳುವುದಕ್ಕೆ ಸಾಧ್ಯವಿಲ್ಲ. ಹಿಂದೆ ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಅಂದವರಿಗೆ ಈ ಸರ್ಕಾರ ಯಾವುದೇ ಶಿಕ್ಷೆ ವಿಧಿಸಲಿಲ್ಲ. ಸಿ.ಟಿ.ರವಿಯವರು ತಾವು ಆ ರೀತಿ ಹೇಳಿಕೆ ನೀಡಲಿಲ್ಲ ಎಂದು ಬಹಳ ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ನಾವು ನ್ಯಾಯಸಮರ್ಥವಾಗಿ ಮಾತನಾಡುತ್ತಿದ್ದೇವೆ. ನಾವೇನೂ ತನಿಖೆ ಬೇಡ ಎಂದು ಹೇಳಿಲ್ಲವಲ್ಲ. ಸತ್ಯಶೋಧನೆ ಆಗದೇ ತನಿಖೆಯಾಗದೇ ಯಾವುದೇ ಅಂತಿಮ ನಿರ್ಧಾರಕ್ಕೆ ಬರುವುದು ತಪ್ಪು ಎಂದರು.

ಈ ಹಿಂದೆ ವಿಧಾನಸೌಧದಲ್ಲಿ ಈ ರೀತಿಯ ಪ್ರಕರಣಗಳು ನಡೆದಾಗ ಯಾರೂ ಪೊಲಿಸ್ ಸ್ಟೇಷನ್ ಗೆ ಹೋಗಿರಲಿಲ್ಲ. ವಿಧಾನ ಮಂಡಲದ ಸಮಿತಿ ಮಾಡಿ ಅದರ ವರದಿ ಆಧಾರದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗಿದೆ. ಹಂಗಿರುವಾಗ ಏಕಾಏಕಿ ಬಂಧಿಸಿ, ಪೊಲಿಸ್ ಸ್ಟೇಷನ್ ಗೆ ಕರೆದುಕೊಂಡು ಹೋಗಿ, ರಾತ್ರಿಯೆಲ್ಲ ಊರೆಲ್ಲ ಸುತ್ತಿಸುವುದು ಯಾವ ಕಾನೂನಿನಲ್ಲಿ ಬರೆದಿದೆ ಎಂದು ಪ್ರಶ್ನಿಸಿದರು.

ಮೊದಲ ಪುಟದಿಂದ

### ಹರಿದು ಬಂದ ಜನ ಸಾಗರ

ಸಮ್ಮೇಳನದ ಹಿನ್ನೆಲೆಯಲ್ಲಿ ಎಲ್ಲವೂ ಕನ್ನಡಮಯವಾಗಿದೆ. ಎಲ್ಲೆಡೆ ಕನ್ನಡ ಬಾವುಟಗಳು ರಾರಾಜಿಸುತ್ತಿವೆ.

ಸ್ವಾಗತ ಕಮಾನುಗಳು, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಭಾವಚಿತ್ರಗಳನ್ನು ಹಾಕಿ ಸಿಂಗಾರಗೊಳಿಸಲಾಗಿದೆ. ರಾಜಮಾತೆ ಕೆಂಪನಂಜಮಣಿ ಮತ್ತು ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಧಾನ ವೇದಿಕೆ, ಸರ್. ಎಂ.ವಿಶ್ವೇಶ್ವರಯ್ಯ ಮತ್ತು ಸರ್.ಮಿರ್ಜಾಯಿ ಇಸಾಯಿಲ್ ಮಹಾಮಂಟಪ, ಯಕ್ಷಕವಿ ಕೆಂಪಣ್ಣ ಗೌಡ ಮತ್ತು ಉಭಯ ಕವಿತವಿಶಾರದ ಷಡಕ್ಷರ ದೇವ ಮಹಾದ್ವಾರ, ಶ್ರೇಷ್ಠ ರಾಜಕೀಯ ಮುತ್ಸದ್ಧಿ ಎಸ್.ಎಂ.ಕೃಷ್ಣ ಮತ್ತು ಜಗದ್ಗುರು ಶ್ರೀ ಡಾ.ಬಾಲಗಂಗಾಧರನಾಥ ಮಹಾಸ್ವಾಮೀಜಿ ಪ್ರವೇಶದ್ವಾರ, ಎಲ್ಲೆಡೆ ಕನ್ನಡ ಬಾವುಟಗಳು ರಾರಾಜಿಸುತ್ತಿವೆ.

**ಅಕ್ಷರ ಜಾತ್ರೆಗೆ ಹರಿದು ಬಂದ ಜನಸಾಗರ:** ಸಕ್ಕರೆ ನಗರಿ ಮಂಡ್ಯದಲ್ಲಿ ನಡೆಯುತ್ತಿರುವ 87 ನೆ ಅಖಿಲ ಭಾರತ ಸಾಹಿತ್ಯ ಸಮ್ಮೇಳನಕ್ಕೆ ನಿರೀಕ್ಷೆಗೂ ಮೀರಿ ಜನ ಸಾಗರ ಹರಿದು ಬಂತು.

ಬೆಳಗ್ಗೆ 8 ಗಂಟೆಯಿಂದಲೇ ಸ್ಥಳೀಯ ನಾಗರಿಕರು, ಮಹಿಳೆಯರು, ವಿದ್ಯಾರ್ಥಿಗಳು ಸಾಹಿತ್ಯ ಸಮ್ಮೇಳನವನ್ನು ಕಣ್ಮನ ತುಂಬಿಕೊಳ್ಳಲು ತಂಡೋಪ ತಂಡವಾಗಿ ಆಗಮಿಸಿದರು. ರಾಜ್ಯದ ನಾನಾ ಜಿಲ್ಲೆಗಳಿಂದ ಕನ್ನಡಾಭಿಮಾನಿಗಳು, ಸಾಹಿತಿಗಳು, ಸಾಹಿತ್ಯಾಸಕ್ತರು ಗುರುವಾರವೇ ನಗರಕ್ಕೆ ಆಗಮಿಸಿದರು.

ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸಿದ ಪ್ರತಿನಿಧಿಗಳಿಗೆ ಅಚ್ಚುಕಟ್ಟಾಗಿ ವ್ಯವಸ್ಥೆಯನ್ನು ಜಿಲ್ಲಾಡಳಿತ ಮಾಡಿದ್ದು, ಸಮ್ಮೇಳನದ ಬಗ್ಗೆ ಜನರು ಮೆಚ್ಚುಗೆ ವ್ಯಕ್ತಪಡಿಸಿದರು.

ಮೆರವಣಿಗೆಯಲ್ಲಿ ಹಾಗೂ ಮುಖ್ಯವೇದಿಕೆಯಲ್ಲಿ ಜನಸಾಗರ ಜಮಾಯಿಸಿದ್ದ ಕಾರಣ ಹಾಗೂ ಯಾವುದೇ ಅಹಿತಕರ ಘಟನೆ ನಡೆಯಬಾರದೆಂಬ ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲಾ ಪೊಲೀಸ್ ಇಲಾಖೆ ಭಾರೀ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿತ್ತು. ಒಟ್ಟು 3,200 ಪೊಲೀಸ್ ಸಿಬ್ಬಂದಿಯನ್ನು ಸಾಹಿತ್ಯ ಸಮ್ಮೇಳನಕ್ಕೆ ನಿಯೋಜಿಸಲಾಗಿದೆ.

ಮಂಡ್ಯ ನಗರದಲ್ಲಿ ನಗರ ಸಾರಿಗೆ ಬಸ್ ಉಚಿತವಾಗಿ ಬಿಟ್ಟಿರುವುದರಿಂದ ನಗರದ ಜನತೆಯೂ ಸಹಸ್ರಾರು ಸಂಖ್ಯೆಯಲ್ಲಿ ಭಾಗವ ಹಿಸಿದರು.

ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಿದ ಹಿನ್ನೆಲೆಯಲ್ಲಿ ನಗರ ಸೇರಿದಂತೆ ಜಿಲ್ಲೆಯ ಬಹುತೇಕ ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಸಮ್ಮೇಳನದ ಸರ್ವಾಧ್ಯಕ್ಷರು ವೇದಿಕೆಗೆ ಆಗಮಿಸುತ್ತಿದ್ದಂತೆ ಅಭೂತಪೂರ್ವ ಸ್ವಾಗತ ಕೋರಲಾಯಿತು.

### ರೆಕಾರ್ಡ್ ಆಗಿಲ್ಲ

ಅವರ ವಿರುದ್ದ ಪ್ರತಿಭಟನೆಗೆ ಮುಂದಾದರು. ಈ ವೇಳೆ ಗಲಾಟೆ ಆಯ್ತು, ಗಲಾಟೆ ಹಿನ್ನೆಲೆ ಕಲಾಪ ಮುಂದೂಡಿದ್ವಿ. ಅವಾಗ

ಇದೆಲ್ಲ ಗಲಾಟೆ ಆಗಿದೆ. ಸಂಜೆ 6 ಗಂಟೆಗೆ ಸಿಟಿ ರವಿ ಬಂಧನವಾಗಿರುವ ಬಗ್ಗೆ ಮಾಹಿತಿ ಬಂತು ಎಂದರು.

ನಾನು ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಸಿಟಿ ರವಿ ಅವರನ್ನು ಕರೆದು ಮಾತನಾಡಿದೆ. ಇದನ್ನು ಇಲ್ಲಿಗೆ ಮುಗಿಸೋಣ ಅಂತ ಸಲಹೆ ನೀಡಿದೆ. ಈ ರೀತಿ ಆಗಿರುವುದು ಮೊದಲ ಸಲ. 45 ವರ್ಷಗಳ ರಾಜಕೀಯ ಇತಿಹಾಸದಲ್ಲಿ ಇಂತಹ ಘಟನೆ ಆಗಿರಲಿಲ್ಲ. ಒಂದೊಂದು ಸಲ ಯಾಕಾದರೂ ಅಲ್ಲಿ ಕೂತಿದ್ದೇನೆ ಅನ್ನತ್ತೆ ಎಂದು ಬಸವರಾಜ ಹೊರಟ್ಟಿ ಬೇಸರ ಹೊರಹಾಕಿದರು.

ನಾನು ಯಾರ ಪರವೂ ಇಲ್ಲ, ಎರಡು ಕಡೆ ಯೋಚನೆ ಮಾಡಿದ್ದೇನೆ. ಇದು ಕಡ್ಡಿ ಹೋಗಿ ಗುಡ್ಡ ಆಯ್ತು. ಬೇಲಿಯೇ ಎದ್ದು ಹೊಲ ಮೇಯ್ದರೆ ಏನಾಗತ್ತೆ. ಜನ ನಮ್ಮನ್ನು ನೋಡುತ್ತಾರೆ. ಶಾಸಕರು ನಡವಳಿಕೆ ತಿದ್ದುಕೊಳ್ಳಬೇಕು ಎಂದು ಸೂಚನೆ ನೀಡಿದರು.

### ಪ್ರತಿಭಟನೆ ನಡೆಸಿದರೆ ಕ್ರಮ

ತೋರಿದೆ ಎಂದು ಆರೋಪಿಸಿ ಪ್ರತಿಭಟನೆ ನಡೆಸಿದೆ. ಸಂಸತ್ ಚಳಿಗಾಲ ಅಧಿವೇನದ ಕಡೆಯ ದಿನದ ಅಧಿವೇಶನದಲ್ಲಿ ಆಡಳಿತ ಮತ್ತು ವಿಪಕ್ಷಗಳು ಪ್ರತಿಭಟನೆ ಮುಂದುವರೆಸಿರುವ ನಡೆಗೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಆಕ್ಷೇಪ ವ್ಯಕ್ತಪಡಿಸಿದ್ದು, ಸಂಸತ್ ಆವರಣದೊಳಗೆ ಪ್ರತಿಭಟನೆ ಮತ್ತು ಪ್ರದರ್ಶನ ನಡೆಸಿದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಸದಸ್ಯರಿಗೆ ಎಚ್ಚರಿಕೆ ನೀಡಿದ್ದಾರೆ.

ಗುರುವಾರ ಆಡಳಿತ ಮತ್ತು ವಿಪಕ್ಷಗಳು ನಡೆಸಿದ ಪ್ರತಿಭಟನೆ ಸಂದರ್ಭದಲ್ಲಿ ಇಬ್ಬರು ಸಂಸದರು ಗಾಯಗೊಂಡಿದ್ದರು. ಉಭಯ ಸಂಸದರ ನಡುವೆ ತಳ್ಳಾಟ, ನೂಕಾಟ ನಡೆದಿತ್ತು. ಘಟನೆಯಲ್ಲಿ ಬಿಜೆಪಿ ಇಬ್ಬರು ಹಿರಿಯ ಸಂಸದರಾದ ಪ್ರತಾಪ್ ಚಂದ್ರ ಸಾರಂಗಿ ಮತ್ತು ಮುಖೇಶ್ ರಜಪೂತ್ ಕೆಳಗೆ ಬಿದ್ದು ಗಾಯಗೊಂಡಿದ್ದರು.

### ತುಂಬಾ ದುಃಖವಾಗಿದೆ

ರೋಷಾವೇಷದ ಭಾಷಣ ಸಹಜ. ಆದರೆ ನಾನು ಹುಟ್ಟಿದಾಗಿನಿಂದಲೂ ಒಂದು ಇರುವೆಗೂ ತೊಂದರೆ ಕೊಟ್ಟಿಲ್ಲ. ಕೆಟ್ಟವರನ್ನು ಕಂಡರೆ ದೂರ ಇರುತ್ತೇನೆ ಎಂದು ಹೇಳಿದರು.

ರಾಜಕಾರಣದಲ್ಲಿದ್ದಾಗ ಧೈರ್ಯವಾಗಿರುವ ಅಗತ್ಯವಿದೆ. ವಿಧಾನಪರಿಷತ್ ಹಿರಿಯ ಮನೆ, ಚಿಂತಕರ ಚಾವಡಿ ಎಂದೆಲ್ಲಾ ಹೇಳಲಾಗುತ್ತದೆ. ಬುದ್ಧಿವಂತರ ವೇದಿಕೆಯಲ್ಲಿ ಸಿ.ಟಿ.ರವಿ ಇಂತಹ ಪದ ಬಳಸಿದಾಗ ಯಾರೊಬ್ಬರೂ ಖಂಡಿಸಲಿಲ್ಲ. ಅದನ್ನು ಕೇಳಿಸಿಕೊಂಡ ಬಿಜೆಪಿ ಸದಸ್ಯರು ನನ್ನ ಬಳಿ ಬಂದು ಕ್ಷಮೆ ಕೇಳಿದ್ದರು. ಆದರೆ ಖಂಡಿಸಲಿಲ್ಲ ಎಂದು ಅಳಲು ತೋಡಿಕೊಂಡರು. ಈಗಲೂ ಕೆಲವರು ಸಿ.ಟಿ.ರವಿ ಅವರನ್ನೇ ಸಮರ್ಥಿಸಿಕೊಳ್ಳುತ್ತಿರುವುದು ಆಶ್ಚರ್ಯಕರ.

ಅವಹೇಳನಕಾರಿ ಪದ ಬಳಸಿರುವುದಕ್ಕೆ ಸ್ಪಷ್ಟ ಸಾಕ್ಷ್ಯಗಳಿವೆ. ಇಂತಹ ನಡವಳಿಕೆಯನ್ನು ಸಮರ್ಥಿಸಿಕೊಳ್ಳುವುದು ಅಚ್ಚರಿಯ ವಿಚಾರ. ಸಿ.ಟಿ.ರವಿ ನಾನು ಆ ರೀತಿ ಹೇಳಿಲ್ಲ ಎಂದು ಈಗ ನುಣುಚಿಕೊಳ್ಳುತ್ತಿದ್ದಾರೆ. ಬಿಜೆಪಿ ನಾಯಕರೇ ಸಿ.ಟಿ.ರವಿ ಮಾತುಗಳನ್ನು ಕೇಳಿಸಿಕೊಂಡು ಕ್ಷಮೆ ಕೇಳುತ್ತಿರುವಾಗ ಇನ್ನಾವ ಸಾಕ್ಷ್ಯ ಬೇಕು? ಎಂದು ಪ್ರಶ್ನಿಸಿದರು.

ನಾನು ಒಬ್ಬ ತಾಯಿ. ಹೆಣ್ಣುಮಕ್ಕಳನ್ನು ಈ ರೀತಿ ಅಪಮಾನಿಸುವ ಸಂಸ್ಕೃತಿ ಕುರಿತು ಚರ್ಚೆಯಾಗಬೇಕಿದೆ. ಮಹಿಳೆಯರು ರಾಜಕಾರಣದಲ್ಲಿ ಶಾಸಕರು ಸಂಸದರಾಗಲು ಅವಕಾಶ ಕಲ್ಪಿಸಿದ್ದು ಬಾಬಾ ಸಾಹೇಬ್ ಅಂಬೇಡ್ಕರ್. ಅವರ ವಿಚಾರವಾಗಿ ಅಪಮಾನವಾದಾಗ ನಾವು ಪ್ರತಿಕ್ರಿಯಿಸುವುದು ಅತ್ಯಗತ್ಯವಾಗಿದೆ ಎಂದರು.

ರಾಜಕಾರಣದಲ್ಲಿ ನಾನು ಸಾಮಾನ್ಯ ಕಾರ್ಯಕರ್ತರಾಗಿ ಸಚಿವರಾಗುವ ಮಟ್ಟಕ್ಕೆ ಬೆಳೆದುಬಂದಿದ್ದೇನೆ. ಸಾಕಷ್ಟು ದೃಢವಾಗಿ ನಿಂತಿದ್ದೇನೆ. ಇಂತಹ ಟೀಕೆಗಳಿಗೆ ಹೆದರುವುದಿಲ್ಲ. ಆದರೂ ಒಬ್ಬ ತಾಯಿಯಾಗಿ, ಅತ್ತೆಯಾಗಿ, ಅಕ್ಕನಾಗಿ ಅನುಭವಿಸುವ ಯಾತನೆ ಟೀಕೆ ಮಾಡುವವರಿಗೆ ಅರ್ಥವಾಗಬೇಕು ಎಂದು ಹೇಳಿದರು.

### ರೌಡಿಗಳ ಗೂಂಡಾ ಸರ್ಕಾರ

ಸಮರ್ಥನೆ ಮಾಡಿಕೊಂಡು, ಸುದ್ದಿ ಬಿತ್ತರಿಸಿದ ಮಾಧ್ಯಮಗಳ ಮೇಲೆ ಹೌಹಾರಿದವರು ಇನ್ನೂ ರಾಜಾರೋಷವಾಗಿ ಮಂತ್ರಿಗಳಾಗಿ ಗೂಟದ ಕಾರಿನಲ್ಲಿ ಓಡಾಡುತ್ತಿದ್ದಾರೆ ಎಂದು ಅಶೋಕ್ ವಾಗ್ದಾಳಿ ನಡೆಸಿದರು.

### ಪ್ರಕಾಶ್ ಚೌಟಾಲಾ ನಿಧನ

ಮೊದಲ ಬಾರಿಗೆ ಸಿಎಂ ಪದವಿಗೇರಿದರು.ಚೌಟಾಲಾ ಅವರು ದೀರ್ಘಾವಧಿ ಅನಾರೋಗ್ಯಕ್ಕೆ ಒಳಗಾಗಿದ್ದರು. ಎಲ್ಲಾ ಪ್ರಯತ್ನಗಳ ಹೊರತಾಗಿ ಇಂದು ಅವರ ಆರೋಗ್ಯವೂ ಕ್ಷೀಣಿಸಿದ್ದು, ಅವರನ್ನು ಉಳಿಸಿಕೊಳ್ಳಲು ಸಾಧ್ಯವಾಗಿಲ್ಲ ಎಂದು ಪಕ್ಷದ ಕಾರ್ಯಕರ್ತರು ತಿಳಿಸಿದ್ದಾರೆ.

### ಬೇಸರ ತಂದಿದೆ: ಡಿಸಿಎಂ

ಇದು ಚಿಕ್ಕಮಗಳೂರು ಸಂಸ್ಕೃತಿಯೇ? ಭಾರತದ ಸಂಸ್ಕೃತಿಯೇ? ಬಿಜೆಪಿ ಸಂಸ್ಕೃತಿಯೇ? ಚಿಕ್ಕಮಗಳೂರಿನಲ್ಲಿ ಇಂತಹ ಸಂಸ್ಕೃತಿಯನ್ನು ನಾನು ಈವರೆಗೂ ನೋಡಿಲ್ಲ. ಇಡೀ ಚಿಕ್ಕಮಗಳೂರಿನಲ್ಲಿ ಇವನೊಬ್ಬನೇ ಇಷ್ಟು ಕೀಳು ಮಟ್ಟದ ಸಂಸ್ಕೃತಿ ಹೊಂದಿರುವ ವ್ಯಕ್ತಿ" ಎಂದು ಕಿಡಿಕಾರಿದರು.

"ಸದನದಲ್ಲಿ ಅಂಬೇಡ್ಕರ್ ಅವರಿಗೆ ಕೇಂದ್ರ ಗೃಹಸಚಿವರು ಅಪಮಾನ ಮಾಡಿದ ಬಗ್ಗೆ ಚರ್ಚೆ ನಡೆಯುತ್ತಿತ್ತು. ಆ ಸಂದರ್ಭದಲ್ಲಿ ಈತ ರಾಹುಲ್ ಗಾಂಧಿ ಅವರನ್ನು ಮಾದಕ ವ್ಯಸನಿ ಎಂದು ನಿಂದಿಸಿದ್ದರು. ಹೀಗಾಗಿ ಲಕ್ಷ್ಮಿ ಹೆಬ್ಬಾಳ್ಕರ್ ಅವರು ತಮ್ಮ ಪಕ್ಷದ ನಾಯಕನ ಸಮರ್ಥನೆಗೆ ಮುಂದಾದಾಗ, ಆತ ನಮ್ಮ ಸಚಿವರನ್ನು ಹಲವು ಬಾರಿ ಪ್ರೋಸ್ಟಿ** ಎಂದು ಕರೆದಿದ್ದಾನೆ. ಬಿಜೆಪಿಯವರು ತಮ್ಮ ನಾಯಕನನ್ನು ಹೇಗೆ ಸಮರ್ಥನೆ ಮಾಡಿಕೊಂಡರೋ ಅದೇ ರೀತಿ ನಮ್ಮ ಸಚಿವರು ನಮ್ಮ ನಾಯಕರನ್ನು ಸಮರ್ಥನೆ ಮಾಡಿಕೊಳ್ಳುವುದು ತಪ್ಪೇ? ಅದಕ್ಕಾಗಿ ಇಂತಹ ಪದ ಬಳಸುವುದೇ? ಎಂದು ಪ್ರಶ್ನಿಸಿದರು.

"ಒಟ್ಟು 12 ಬಾರಿ ಈ ಅವಾಚ್ಯ ಪದ ಬಳಸಿ ನಿಂದಿಸಿದ್ದಾರೆ. ಮಾಧ್ಯಮಗಳು ಈ ಎಲ್ಲಾ ಅಂಶಗಳನ್ನು ಸೇರಿ ಸುದ್ದಿ ಪ್ರಕಟಿಸಬೇಕು. ನಿಮ್ಮ ಬಳಿ ದಾಖಲೆ ಇಲ್ಲವಾದರೆ ಹೇಳಿ ನಾನು ನೀಡುತ್ತೇನೆ" ಎಂದು ತಿಳಿಸಿದರು.

"ಪರಿಷತ್ತಿನಲ್ಲಿ ಗುರುವಾರದಂದು ನನ್ನ ಇಲಾಖೆಗಳಿಗೆ ಸಂಬಂಧಿಸಿದ 12 ಪ್ರಶ್ನೆಗಳಿದ್ದವು. ಅವುಗಳಿಗೆ ಉತ್ತರ ನೀಡಿ ನಾನು ವಿಧಾನಸಭೆಗೆ ಬಂದಾಗ ಈ ಘಟನೆ ನಡೆದಿದೆ" ಎಂದರು.

ಪೊಲೀಸರು ರಾತ್ರಿ ಪೂರ್ತಿ ತಿರುಗಾಡಿಸಿದ್ದಾರೆ ಎಂಬ ಆರೋಪದ ಬಗ್ಗೆ ಕೇಳಿದಾಗ, "ಪೊಲೀಸರು ಏನು ಮಾಡಿದ್ದಾರೆ ಗೊತ್ತಿಲ್ಲ. ಸುಮ್ಮನೆ ಆರೋಪ ಮಾಡುತ್ತಾರೆ. ಪೊಲೀಸರು ಬೇರೆಯವರಿಗಿಂತ ಹೆಚ್ಚು ಸೌಜನ್ಯ ತೋರಿದ್ದಾರೆ. ಪೊಲೀಸ್ ಠಾಣೆಯಲ್ಲಿ ಅವರ ಮನೆಯವರಿಗೆ ಅವಕಾಶ ನೀಡಲಿ. ಅದನ್ನು ಬಿಟ್ಟು ಖಾನಾಪುರ ಪೊಲೀಸ್ ಠಾಣೆಯಲ್ಲಿ ಬಿಜೆಪಿ ನಾಯಕರನ್ನು ಬಿಟ್ಟುಕೊಂಡು ಬಿಜೆಪಿ ಸಭೆ ಮಾಡುವುದು ಎಷ್ಟು ಸರಿ? ಈ ವಿಚಾರದಲ್ಲಿ ಪೊಲೀಸರ ನಡೆ ಸರಿಯಿಲ್ಲ. ನಾವು ಪೊಲೀಸರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡುತ್ತಿಲ್ಲ. ಲಕ್ಷ್ಮಿ ಹೆಬ್ಬಾಳ್ಕರ್ ಕ್ಷೇತ್ರದಲ್ಲಿದ್ದರೂ ಅವರಿಗೆ ಯಾವುದೇ ತೊಂದರೆ ಆಗಲು ಅವಕಾಶ ನೀಡಿಲ್ಲ. ತಮ್ಮ ಶಾಸಕಿಗೆ ಅಪಮಾನ ಮಾಡಿದರೆ ಕ್ಷೇತ್ರದ ಜನ ರೊಚ್ಚಿಗೇಳುವುದು ಸಹಜ" ಎಂದು ಅಸಮಾಧಾನ ವ್ಯಕ್ತಪಡಿಸಿದರು.

### ಕಾಯ್ದಿರಿಸಿದ ಕೋರ್ಟ್

ವಕೀರಲು ವಾದ ಮಂಡನೆ ಮಾಡುವ ಸಾಧ್ಯತೆ ಇದೆ.

### ಭಯೋತ್ಪಾದಕರಂತೆ ನಡೆಸಿಕೊಂಡರು

ನಿನ್ನೆ ಪೊಲೀಸ್ ಠಾಣೆಗೆ ಹೊತ್ತಾಕಿಕೊಂಡು ಹೋಗಿ ಗದಗ, ರಾಮದುರ್ಗ ಸೇರಿ ಬೇರೆಬೇರೆ ಕಡೆ ಅಲೆದಾಡಿಸಿ ಒಂದು ರೀತಿ ಟೆರರಿಸ್ಟ್ ಅಂದುಕೊಳ್ಳುವಂತೆ ಮಾಡಿದ್ದಾರೆ. ಟೆರರಿಸ್ಟ್ ಅನ್ನು ಪೊಲೀಸರು ಕರೆದೊಯ್ದಿದ್ದಾರೆಂಬ ಭಾವನೆ ಬರುತ್ತಿದೆ. ಸರಕಾರದ ಕುಮ್ಮಕ್ಕಿನಿಂದ ಆ ರೀತಿ ವರ್ತನೆ ನಡೆದಿದೆ ಎಂದು ಖಂಡಿಸಿದರು.

ರವಿ ಅವರನ್ನು ಸುಮಾರು 450 ಕಿಮೀನಿಂದ 500 ಕಿಮೀ ಸುತ್ತಾಡಿಸಿದ್ದಾರೆ. ಇವರೇನು ಮಾಡಲು ಹೊರಟಿದ್ದಾರೆ? ಒಬ್ಬ ಜನಪ್ರತಿನಿಧಿಯನ್ನು ನಡೆಸಿಕೊಳ್ಳುವ ರೀತಿಯೇ ಇದು? ಪೊಲೀಸರ ಮೇಲೆ ಒತ್ತಾಯ, ಒತ್ತಡ ಹೇರಿ ದೌರ್ಜನ್ಯ ನಡೆಸುತ್ತಿದ್ದು, ಇದನ್ನು ಬಿಜೆಪಿ ತೀವ್ರವಾಗಿ ಖಂಡಿಸುತ್ತದೆ. ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಇವತ್ತು ಪ್ರತಿಭಟನೆ ಆಯೋಜಿಸಿದ್ದೇವೆ ಎಂದು ತಿಳಿಸಿದರು.

### ಸರ್ಕಾರ ಮತ್ತು ಪೊಲೀಸರೇ ಹೊಣೆ

ನಡೆಸಿರುವ ಅವರು, ಯಾವುದೇ ಪರಿಶೀಲನೆ ನಡೆಸದೆ, ತಾನು ಕಾನೂನು ತಜ್ಞ ಎಂದು ಕರೆಸಿಕೊಳ್ಳುವ ಸನಾನ್ಯ ಮುಖ್ಯಮಂತ್ರಿಗಳೇ, ತಾವು ಈ ರೀತಿಯಾಗಿ ಸುಳ್ಳು ಸುದ್ದಿ ಹಬ್ಬಿಸುವುದು ಹಾಗು ರಾಜಕೀಯ ತೇಜೋವಧೆ ನಡೆಸುವುದು ನಿಮಗೂ, ನೀವಿರುವ ಸ್ಥಾನಕ್ಕೂ ಗೌರವ ತರುವಂತದ್ದಲ್ಲ. ವಿಧಾನ ಸಭೆ, ವಿಧಾನ ಪರಿಷತ್ತಿನಲ್ಲಿ ಪ್ರತಿಯೊಂದು ಸಂಗತಿಗಳ ಆಡಿಯೋ ಹಾಗು ವಿಡಿಯೋ ದಾಖಲಾತಿ ಇರುತ್ತದೆ. ಅದ್ಯಾವುದನ್ನೂ ನೋಡದೆ ನನ್ನ ಬಗ್ಗೆ ಸುಳ್ಳು ಆಪಾದನೆ ಮಾಡುತ್ತಿರುವುದು ನಿಮಗೆ ಶೋಭೆಯೇ? ಎಂದು ಕೇಳಿದ್ದಾರೆ.

ಕಾಂಗ್ರೆಸ್, ಪಾರ್ಲಿಮೆಂಟಿನಲ್ಲಿ ಕೇಂದ್ರ ಸಚಿವ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಯನ್ನು ತಿರುಚಿ ಗೊಂದಲ ಎಬ್ಬಿಸಿದಂತೆ ಇಲ್ಲೂ ಕೂಡ ನಾನು ಹೇಳಿರದ ಮಾತನ್ನು ನನ್ನದು ಎನ್ನುವಂತೆ ಬಿಂಬಿಸುವ ನಿಮ ಪ್ರಯತ್ನ ನಾಚಿಗೆಗೇಡು ಹಾಗೂ ನೀವು ಕುಳಿತಿರುವ ಸ್ಥಾನಕ್ಕೆ ನೀವು ಮಾಡುತ್ತಿರುವ ಅವಮಾನ ಮುಖ್ಯಮಂತ್ರಿಗಳೇ ಎಂದು ತಿಳಿಸಿದ್ದಾರೆ.

ಕರ್ನಾಟಕದ ಕಾನೂನು ಸುವ್ಯವಸ್ಥೆಯನ್ನು ರೌಡಿ ಎಲಿಮೆಂಟ್‌ಗಳ ಕೈಗೆ ಕೊಟ್ಟು ಗೂಂಡಾ ರಾಜ್ಯವನ್ನಾಗಿ ಮಾಡಿದ್ದೀರಿ. ನ್ಯಾಯಯುತ ಹೋರಾಟ ಮಾಡುತ್ತಿದ್ದ ಪಂಚಮಶಾಲಿ ಹೋರಾಟಗಾರರ ಮೇಲೆ ಲಾಠಿ ಚಾರ್ಜ್ ಮಾಡಲಾಯಿತು. ಬೆಳಗಾವಿಯ ಸುವರ್ಣ ಸೌಧದ ಒಳಗೆ ನಿಮ ಪಕ್ಷದ ಗೂಂಡಾಗಳನ್ನು ಬಿಟ್ಟು ನನ್ನ ಮೇಲೆ ಹಲ್ಲೆ ನಡೆಸಲು ಪ್ರಯತ್ನ ನಡೆಸಿದಿರಿ. ಒಬ್ಬ ಜನ ಪ್ರತಿನಿಧಿಗೆ ರಕ್ಷಣೆ ಕೊಡಲಾಗದ ನಿಮ ಸರ್ಕಾರ ಇನ್ನು ಜನ ಸಾಮಾನ್ಯರನ್ನು ಹೇಗೆ ಕಾಪಾಡೀತು? ಎಂದು ಪ್ರಶ್ನಿಸಿದ್ದಾರೆ.


ಸುವರ್ಣ ಸೌಧದ ಹೊರಗಡೆ ಶಾಂತಿಯುತ ಹಾಗು ನ್ಯಾಯಯುತ ಹೋರಾಟ ಮಾಡುವವರಿಗೆ ಲಾಠಿಯೇಟು, ರೌಡಿಗಳಿಗೆ ಸುವರ್ಣ ಸೌಧದ ಒಳಗೆ ಪ್ರವೇಶ, ಅಬ್ಬಾ ನಿಮ ಸದಾಡಳಿತದ ಲಕ್ಷಣವೇ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎನ್ನುವುದಕ್ಕೆ ಇದಕ್ಕಿಂತ ಉದಾಹರಣೆ ಬೇಕೇ? ಎಂದು ಪ್ರಶ್ನಿಸಿದ್ದಾರೆ.

# ಡಿ.23 ರಂದು ಮೈಸೂರಿನಲ್ಲಿ ರಾಜ್ಯ ಮಟ್ಟದ ರೈತ ಸಮಾವೇಶ

**ಮೈಸೂರು:** ಡಿಸೆಂಬರ್ 23 ರಂದು ವಿಶ್ವ ರೈತ ದಿನಾಚರಣೆ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ರೈತರ ಹಬ್ಬ , ರಾಜ್ಯಮಟ್ಟದ ರೈತ ಸಮಾವೇಶ ಆಯೋಜಿಸಲಾಗಿದೆ ಎಂದು ರಾಜ್ಯ ರೈತ ಸಂಘಟನೆಗಳು ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕುರುಬೂರು ಶಾಂತಕುಮಾರ್, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಾರ್ಮಿಕರ, ಶಿಕ್ಷಕರ, ವೈದ್ಯರ, ಪತ್ರಕರ್ತರ ದಿನಗಳನ್ನು ಆಚರಿಸುತ್ತಾರೆ. ವಿವಿಧ ಜಾತಿಗಳ ಸಂದೇಶ ಸಾರುವ ಮಹನೀಯರ ದಿನಾಚರಣೆಗಳನ್ನು ಆಚರಿಸುತ್ತಾರೆ. ಆದರೆ ದೇಶದ 145 ಕೋಟಿ ಜನರಿಗೆ ಆಹಾರ ಬೆಳೆದು ಕೊಡುವ ಶ್ರಮಜೀವಿ ಕಾಯಕಯೋಗಿ ರೈತರನ್ನ ನೆನೆಯುವ ದಿನ ಡಿಸೆಂಬರ್ 23 ವಿಶ್ವ ರೈತ ದಿನ. ಈ ದಿನವನ್ನು ವಿಶೇಷವಾಗಿ ಆಚರಿಸಲು ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಮುಂದಾಗಿದ್ದೇವೆ.

ಡಿಸೆಂಬರ್ 23 ವಿಶ್ವ ರೈತ ದಿನಾಚರಣೆ ಹಿನ್ನೆಲೆಯಲ್ಲಿ ಅಂದು ಮೈಸೂರಿನ ಮುಕ್ತ ವಿಶ್ವವಿದ್ಯಾಲಯದ ಘಟಿಕೋತ್ಸವ ಭವನದಲ್ಲಿ ರಾಜ್ಯ ಮಟ್ಟದ ರೈತ ಸಮಾವೇಶ ನಡೆಸಲಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಮಾಡಲಿದ್ದಾರೆ ಎಂದು ತಿಳಿಸಿದರು.



ಹಾಗೆಯೇ ಕೇಂದ್ರ ಸಚಿವ ವಿ ಸೋಮಣ್ಣ ಸಮಾರೋಪ ಮಾಡಲಿದ್ದಾರೆ. ವಿಶ್ವ ಪರಿಸರ ವಿಜ್ಞಾನಿ ಚಂದ್ರಶೇಖರ್ ಬಿರದಾರ್, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿ ಶರಣಪ್ಪ ಹಲಸೆ, ಸಾವಯುವ ಪ್ರಗತಿಪರ ಕೃಷಿಕ ಕಲ್ಮೇಶ ಯಲ್ಲದಗಿ, ತಮಿಳುನಾಡಿನ ರೈತ ಮುಖಂಡರಾದ ಪಿ ಆರ್ ಪಾಂಡ್ಯನ್, ರಾಮನಗೌಂಡರ್, ತೆಲಂಗಾಣದ ವೆಂಕಟೇಶ್ವರ ರಾವ್, ಕೇರಳದ ಕೆ ವಿ ಬಿಜು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳ ಪ್ರಗತಿಪರ ಸಾಧಕ ರೈತರು, ಕೃಷಿ ಕಾರ್ಮಿಕ ಮಹಿಳೆಗೆ ಸಮಾವೇಶದಲ್ಲಿ ಪುರಸ್ಕಾರ ನೀಡಲಾಗುವುದು ಎಂದರು.

ಬೆಳಿಗ್ಗೆ 10:00 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳಿಂದ ಆರಂಭವಾಗಿ 11ಗಂಟೆಗೆ ಕಾರ್ಯಕ್ರಮ ಉದ್ಘಾಟನೆ ಮಾಡಲಾಗುವುದು. ರಾಜ್ಯದ ಎಲ್ಲ ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ರೈತರು ಪಾಲ್ಗೊಳ್ಳಲಿದ್ದಾರೆ. ರೈತರು ಸ್ವಾಭಿಮಾನಿ, ಸ್ವಾವಲಂಬಿಗಳಾಗಿ ಸ್ವಯಂ ಪ್ರೇರಿತರಾಗಿ ಸಮಾವೇಶದಲ್ಲಿ ಭಾಗವಹಿಸಬೇಕೆಂದು ಮನವಿ ಮಾಡುತ್ತೇನೆ ಎಂದು ಕುರುಬೂರು ಶಾಂತಕುಮಾರ್ ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಹತ್ತಳ್ಳಿ ದೇವರಾಜ್. ಜಿಲ್ಲಾ ಕಾರ್ಯದರ್ಶಿ ಬರಡನಪುರ ನಾಗರಾಜ್. ಪೈಲ್ವಾನ್ ವೆಂಕಟೇಶ.ಸುನಿಲ್. ಸೂರಿ ಉಪಸ್ಥಿತರಿದ್ದರು.

# ಕರ್ನಾಟಕದಲ್ಲಿ ಪ್ರಜಾಪ್ರಭುತ್ವ ಕೊನೆಯುಸಿರೆಳೆಯುತ್ತಿದೆ



**ಬೆಂಗಳೂರು:** 'ಕರ್ನಾಟಕದಲ್ಲಿ ಪ್ರಜಾಪ್ರಭುತ್ವ ಕೊನೆಯುಸಿರೆಳೆಯುತ್ತಿದೆಯೇ ಎನ್ನುವುದು ನನ್ನ ಅನುಮಾನ' ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಎಕ್ಸ್ ಪೋಸ್ಟ್ ಮಾಡಿರುವ ಅವರು, "ಪ್ರತಿಪಕ್ಷ ನಾಯಕರಿಗೆ ರಕ್ಷಣೆ ಇಲ್ಲ ಎಂದ ಮೇಲೆ ವಿಧಾನಮಂಡಲದಲ್ಲಿ ಯಾರ ಭಾವಚಿತ್ರ ಹಿಡಿದರೇನು ಫಲ? ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮೇಲೆ ಸುವರ್ಣಸೌಧದಲ್ಲಿಯೇ ಹಲ್ಲೆ ಯತ್ನ ನಡೆದಿರುವುದು ಖಂಡನೀಯ. ಸಚಿವೆ ಬಗ್ಗೆ ಸಿ.ಟಿ.ರವಿ ಅವರು ಅವಾಚ್ಯ ಪದ ಬಳಸಿದ್ದರೆ ಅದನ್ನು ನಾನು ಸಮರ್ಥಿಸುವುದಿಲ್ಲ. ಅದಕ್ಕೆ ಪ್ರತಿಯಾಗಿ ಸಚಿವೆ ವರ್ತಿಸಿದ ರೀತಿ, ಅವರ ಬೆಂಬಲಿಗರ ಗೂಂಡಾಗಿರಿ ಅತಿರೇಖದ್ದು ಎಂದು ಟೀಕಿಸಿದ್ದಾರೆ".

"ಎಲ್ಲದ್ದಕ್ಕೂ ಡಾ.ಅಂಬೇಡ್ಕರ್ ಅವರ ಸಂವಿಧಾನದಡಿ ರೂಪಿತವಾದ ಕಾನೂನಿದೆ. ಸಭಾಪತಿಗಳೂ ರೂಲಿಂಗ್ ನೀಡಿದ್ದಾರೆ. ಆ ನಂತರವೂ ನಡೆಯುತ್ತಿರುವ ಘಟನಾವಳಿಗಳು, ಸಭಾಪತಿಗಳನ್ನೇ ನಿಂದಿಸುವ ಕೆಟ್ಟ ನಡವಳಿಕೆಗಳು ಆಘಾತಕಾರಿ. ಸರಕಾರದಲ್ಲಿರುವ ಕೆಲವರು ಈ ಘಟನೆಗೆ ಜ್ವಾಲೆ ಸ್ವರೂಪ ನೀಡಿ ಪ್ರಚೋದಿಸುತ್ತಿರುವುದು ಕಳವಳಕಾರಿ" ಎಂದು ತಿಳಿಸಿದ್ದಾರೆ.

"ಮೀಸಲಾತಿಗಾಗಿ ಪಂಚಮಸಾಲಿ ಮುಖಂಡರು ಸುವರ್ಣಸೌಧದ ಮುಂದೆ ಪ್ರತಿಭಟಿಸಿದ್ದಕ್ಕೆ ಪೊಲೀಸರಿಂದ ಲಾಠಿಚಾರ್ಜ್ ಮಾಡಿಸಿ ಪೌರುಷ ಮೆರೆದಿತ್ತು ರಾಜ್ಯ ಸರ್ಕಾರ. ಅಂದು ಪೊಲೀಸರ ಪ್ರತಾಪ ಹೇಳತೀರದು. ಗೇಟಿನಲ್ಲಿಯೇ ತಡೆದು ಆ ಪಂಚಮಸಾಲಿ ಜನರಿಗೆ ರಕ್ತ ಬರುವಂತೆ ಲಾಠಿ ಬೀಸಿದ ಪೊಲೀಸರೇ.., ಈ ಗೂಂಡಾಗಳು ಸುವರ್ಣಸೌಧದೊಳಕ್ಕೆ ಹೇಗೆ ಬಂದರು? ಅಥವಾ... ಅವರೇ ನಿಮ್ಮ ಕಣ್ತಪ್ಪಿಸಿ ಒಳ ನುಸಳಿದರೋ ಅಥವಾ ಸರಕಾರವೇ ಷಡ್ಯಂತ್ರ ಮಾಡಿ ಒಳ ನುಗ್ಗಿಸಿತೋ? ಇಲ್ಲವೇ ಯಾವುದಾದರೂ ಕಲ್ಲು ಬಂಡೆಯ ಕರಾಮತ್ತು, ಕುಮ್ಮಕ್ಕು ಇದೆಯಾ" ಎಂದು ಪ್ರಶ್ನಿಸಿದ್ದಾರೆ.

"ಸದನದ ಕಾರಿಡಾರಿನಲ್ಲಿಯೇ ಆ ಗೂಂಡಾಗಳು ಶಾಸಕರನ್ನು ಅಟ್ಟಾಡಿಸುತ್ತಾರೆ. ಕೊಲೆಗೆತ್ನಿಸುತ್ತಾರೆ, ಮಾರ್ಷಲ್‌ಗಳನ್ನು ಕೆಳಕ್ಕೆ ಕೆಡವಿ ಕ್ರಿಮಿನಲ್ ಪ್ರವೃತ್ತಿ ಮೆರೆಯುತ್ತಾರೆ ಎಂದರೆ ಬಂಡೆ ಬೆಂಬಲವಿದೆ ಎಂದೇ ಅರ್ಥ. ಆ ಗೌರವಾನ್ವಿತ ಸಚಿವೆಯ ಆಪ್ತ ಸಹಾಯಕ ಶಾಸಕರ ಮೇಲೇರಿ ಹೋಗುವ, ಕಾರಿಡಾರಿನ ಕಬ್ಬಿಣದ ಬಾಗಿಲನ್ನೇ ಮುರಿಯಲೆತ್ನಿಸಿ ಹಲ್ಲೆಗೆ ಯತ್ನಿಸುವ ದೃಶ್ಯಗಳು ದೃಶ್ಯ ಮಾಧ್ಯಮಗಳಲ್ಲಿ ಪ್ರಸಾರವಾಗಿವೆ. ರಾಜ್ಯದಲ್ಲಿ ಆಡಳಿತ ಸುರಕ್ಷಿತ ಕೈಗಳಲ್ಲಿ ಇಲ್ಲ ಎನ್ನುವುದಕ್ಕೆ ಆ ದೃಶ್ಯಗಳೇ ಸಾಕ್ಷಿ" ಎಂದಿದ್ದಾರೆ.

"ಸುವರ್ಣಸೌಧಕ್ಕೆ ನುಗ್ಗಿದ ಗೂಂಡಾಗಳನ್ನು ಕೂಡಲೇ ಬಂಧಿಸಿ, ಅವರ ವಿರುದ್ಧ ರೌಡಿಪಟ್ಟಿ ತೆರೆಯಬೇಕು. ಸಮಾಜದ ಶಾಂತಿಗೆ ಬೆದರಿಕೆಯಾಗಿರುವ ಆ ಕಿಡಿಗೇಡಿಗಳನ್ನು ಸುವರ್ಣಸೌಧ, ವಿಧಾನಸೌಧದಿಂದ ಶಾಶ್ವತವಾಗಿ ನಿರ್ಬಂಧಿಸಬೇಕು. ಪೊಲೀಸರೇ ಇಡೀ ಪ್ರಕರಣದ ಬಗ್ಗೆ ನೀವು ಉತ್ತರಿಸಬೇಕಾಗುತ್ತದೆ. ಇಡೀ ರಾತ್ರಿ ಸಿ.ಟಿ.ರವಿ ಅವರನ್ನು ಪೊಲೀಸ್ ಜೀಪಿನಲ್ಲಿ ಸುತ್ತಿಸುತ್ತೀರಿ ಎಂದರೆ, ಇದಕ್ಕೆ ಯಾರ ಫರ್ಮಾನು ಕಾರಣ?. ಈ ಗೂಂಡಾಗಳ ಗ್ಯಾಂಗ್ ಲೀಡರ್ ಯಾರು?. ನಿಮಗೆ ಎಲ್ಲಾ ಮಾಹಿತಿ ಇರುತ್ತದೆ, ನೀವೂ ಸತ್ಯ ಹೇಳಬೇಕಾಗುತ್ತದೆ" ಎಂದು ಒತ್ತಾಯಿಸಿದ್ದಾರೆ.

# ಅಲ್ ಖಲಂ ಶಾಲೆಯಲ್ಲಿ ಆಹಾರ ಮೇಳ ಆಯೋಜನೆ ವಿದ್ಯಾರ್ಥಿಗಳಿಂದ ಬಗೆ ಬಗೆಯ ತಿನಿಸುಗಳ ತಯಾರಿಕೆ



**ಚಿಕ್ಕಬಳ್ಳಾಪುರ:** ನಗರದಲ್ಲಿರುವ ಅಲ್ ಖಲಂ ಆಂಗ್ಲ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಂದ ಇಂದು ಆಹಾರ ಮೇಳ ಹಮ್ಮಿಕೊಂಡಿದ್ದು, ಪೋಷಕರಿಗೆ ಖುಷಿ ಪಟ್ಟರು.

ಶಾಲೆಯ ಆಡಳಿತ ಮಂಡಳಿ ವರ್ಷಕ್ಕೊಮ್ಮೆ ಶಾಲೆಯ ವಿದ್ಯಾರ್ಥಿಗಳಿಂದ ಆಹಾರ ಮೇಳ ಆಯೋಜಿಸಿ ಮಕ್ಕಳಿಗೆ ವ್ಯಾವಹಾರಿಕ ಜ್ಞಾನ ಕಲಿಸುವ ನಿಟ್ಟಿನಲ್ಲಿ ಪ್ರಯತ್ನಿಸುತ್ತಿರುವುದಾಗಿ ಶಾಲೆಯ ಮುಖ್ಯ ಶಿಕ್ಷಕಿ ನಸೀಮ ಮೌಲಾ ತಿಳಿಸಿದರು.ಶಾಲೆಯಲ್ಲಿ ಮಕ್ಕಳಿಗೆ ಶಿಕ್ಷಣ ಜೊತೆಗೆ ಅವರಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ತರುವ ಎಲ್ಲ ಪ್ರಯತ್ನ ಮಾಡುತ್ತಿದ್ದು ಆಹಾರ ಮೇಳ ಸಾಂಸ್ಕೃತಿಕ ಕಾರ್ಯಕ್ರಮಗಳು ಕೂಡ ಹಮ್ಮಿಕೊಳ್ಳಲಾಗುತ್ತಿದೆ. ಮುಖ್ಯವಾಗಿ ಮಕ್ಕಳ ಕೌಶಲ್ಯಾಭಿರದ್ದಿ ಕಡೆ ಹೆಚ್ಚಿನ ಗಮನ ಹರಿಸಲಾಗುತ್ತಿದೆ ಎಂದರು.

ಶಾಲೆಯ ಅಧ್ಯಕ್ಷ ಸೈಯದ್ ಅಸ್ಗರ್ ಮಾತನಾಡಿ ವಿದ್ಯಾರ್ಥಿಗಳು ವರ್ಷ ಪೂರ್ತಿ ಶೈಕ್ಷಣಿಕ ಪಾಠ ಪ್ರವಚನಗಳಲ್ಲಿ ಬ್ಯುಸಿ ಆಗಿರುತ್ತಾರೆ,

ಮಕ್ಕಳಿಗೆ ಪಠ್ಯೇತರ ಚಟುವಟಿಕೆಗಳನ್ನು ಆಯೋಜನೆ ಮಾಡುವುದು ಬಹುಮುಖ್ಯ,ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ಆಯೋಜಿಸಬೇಕಿದೆ. ಈ ನಿಟ್ಟಿನಲ್ಲಿ ಶಾಲೆಯ ವತಿಯಿಂದ ಹಲವಾರು ಕಾರ್ಯಕ್ರಮಗಳೂ ಹಮ್ಮಿಕೊಳ್ಳುತ್ತಾ ಬಂದಿದ್ದು ಇಂದು ಆಹಾರ ಮೇಳ ಆಯೋಜಿಸಿ ಮಕ್ಕಳಿಗೆ ವ್ಯಾವಹಾರಿಕ ಜ್ಞಾನ ಕಲಿಸಲಾಗುತ್ತಿದೆ ಎಂದರು.

ಇನ್ನು ಆಹಾರ ಮೇಳದಲ್ಲಿ ವಿದ್ಯಾರ್ಥಿಗಳು ವಿವಿಧ ರೀತಿಯ ತಿನಿಸುಗಳನ್ನು ತಯಾರಿಸಿ ಶಾಲಾ ಅಂಗಳದಲ್ಲಿ ಫುಡ್ ಸ್ಟಾಲ್ ತೆರೆದು ವ್ಯಾಪಾರ ವಹಿವಾಟು ನಡೆಸುವ ಮೂಲಕ ವ್ಯವಹಾರದ ಜ್ಞಾನ ಬಗ್ಗೆ ತಿಳಿದುಕೊಂಡರು.ಆಹಾರ ಮೇಳದಲ್ಲಿ ಬಿರಿಯಾನಿ,ಮೊಟ್ಟೆ ಬೋಂಡ,ಪಾನಿಪುರಿ,ಗುಲಾಬ್ ಜಾಮುನ್,ಗೋಬಿ–ಮಂಚೂರಿ, ನಿಪ್ಪಟ್ ಮಸಾಲೆ,ವಿವಿಧ ಸಿಹಿ ಪದಾರ್ಥಗಳು ಸೇರಿ ಬಗೆಬಗೆಯ ತಿನಿಸುಗಳನ್ನು ಮಾಡಿದ್ದು ಮೇಳಕ್ಕೆ ಆಗಮಿಸಿದ್ದವರ ಗಮನ ಸೆಳೆಯಿತು,

ರುಚಿ ರುಚಿಯಾದ ತಯಾರಿಸಿದ್ದ ತಿನಸು ಸವಿದವರು ಮಕ್ಕಳಿಂದ ಇಂತಹ ಪ್ರಯತ್ನಕ್ಕೆ ಶ್ಲಾಘಿಸಿದರು.ಶಾಲೆಯ ಮ್ಯಾನೇಜಿಂಗ್ ಟ್ರಸ್ಟಿ ಮ್ಯಾಕ್ಸನ್ ರಫೀಕ್,ಅಡ್ಮಿನಿಸ್ಟ್ರೇಟರ್ ಸೈಯದ್ ಹುಸೇನ್,ಸೈಯದ್ ಸುಹೇಲ್, ಮಹಮ್ಮದ್ ಜುಹೇಬ್, ತಾಹೇರ್,ಶಾಲೆಯ ಶಿಕ್ಷಕರಾದ ಧರ್ಮ ಶ್ರೀ,ಕವಿತ,ನಜೀಮ್ ಉನ್ನೀಸ,ನುರ್ ಮಹಮ್ಮದಿ, ಮಹೀನ್,ಸಾನೀಯ ಸಬಾ, ಜವೇರಿಯ ಬಾನು,ಆಯಿಶಾ ಮತ್ತು ಇತರರು ಇದ್ದರು.

## ರಾಹುಲ್ ಗಾಂಧಿಗೂ ಸಿ.ಟಿ.ರವಿ ಡ್ರಗ್ ಅಡಿಕ್ಟ್ ಅಂದಿದ್ದಾರೆ, ಅದನ್ನೂ ಪರಿಶೀಲಿಸುತ್ತೇವೆ

**ಬೆಂಗಳೂರು:** ಸಿ.ಟಿ.ರವಿ ಅವರು ರಾಹುಲ್ ಗಾಂಧಿಗೂ ಡ್ರಗ್ ಅಡಿಕ್ಟ್ ಅಂದಿದ್ದಾರೆ, ಅದನ್ನೂ ಪರಿಶೀಲಿಸ್ತೇವೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಸಿ.ಟಿ.ರವಿ ಅವಾಚ್ಯ ಪದ ಬಳಕೆ ಆರೋಪ ಸಂಬಂಧ ಅವರು ಪ್ರತಿಕ್ರಿಯಿಸಿದರು.

ಸದಾಶಿವನಗರ ನಿವಾಸದ ಬಳಿ ಮಾತನಾಡಿದ ಅವರು, "ಮೂಲತಃ ಇದು ಅವರು ಬೈದಿದ್ದಕ್ಕೆ ಶುರುವಾಯ್ತು. ಹಿರಿಯ ಜನಪ್ರತಿನಿಧಿ ಆಗಿ ಅವರು ಬೈದಿದ್ದು ಸರಿಯಲ್ಲ. ಅವರು ಏಕೆ ಬೈಯಬೇಕಿತ್ತು? ಸಿ.ಟಿ.ರವಿ ಆ ಪದ ಹೇಳಿದ್ದಾರೆ" ಎಂದು ಟೀಕಿಸಿದರು.

ಪೊಲೀಸರು ಎಲ್ಲವನ್ನೂ ಕೇಳಿ ಮಾಡಲ್ಲ: "ಸಿ.ಟಿ.ರವಿಯನ್ನು ರಾತ್ರಿ ಎಲ್ಲ ಸುತ್ತಾಡಿಸಿರುವುದು ನಮಗೆ ಗೊತ್ತಿಲ್ಲ. ಬಂಧಿಸಿರುವುದು ಗೊತ್ತು. ಪೊಲೀಸರು ಕೆಲವೊಂದನ್ನು ಅವರ ಮಿತಿಯಲ್ಲೇ ಮಾಡುತ್ತಾರೆ. ಪೊಲೀಸರು ಎಲ್ಲವನ್ನೂ ಕೇಳಿ ಮಾಡಲ್ಲ. ಇವತ್ತು ಕೋರ್ಟ್‌ಗೆ ಹಾಜರುಪಡಿಸ್ತಾರೆ. ಆ ಸಂದರ್ಭಕ್ಕೆ ಏನು ಮಾಡಬೇಕೋ ಅದನ್ನು ಪೊಲೀಸರು ಮಾಡುತ್ತಾರೆ. ಸಿ.ಟಿ.ರವಿ ತಲೆಗೆ ಪೆಟ್ಟು ಬಿದ್ದಿರುವುದು ಗೊತ್ತಿಲ್ಲ. ಪೊಲೀಸ್ ಮಾಹಿತಿಗಳು ರಹಸ್ಯ, ಬಯಲು ಮಾಡಲು ಆಗಲ್ಲ. ಕೆಲವು ವಿಚಾರ ನಿಮಗೆ ಹೇಳಲು ಆಗಲ್ಲ" ಎಂದರು.

"ಬಿಜೆಪಿಯಿಂದ ಪ್ರತಿಭಟನೆ ಆಗುವ ರೀತಿ ನಮ್ಮವರಿಂದಲೂ ಪ್ರತಿಭಟನೆ ಆಗುತ್ತಿದೆ. ನಮ್ಮ ಕಾರ್ಯಕರ್ತರೂ ಇವತ್ತು ಪ್ರತಿಭಟನೆ ಮಾಡುತ್ತಿದ್ದಾರೆ. ನಾವು ಯಾರೂ ಪೊಲೀಸರಿಗೆ ಏನೂ ಸೂಚನೆ ಕೊಟ್ಟಿಲ್ಲ. ಪೊಲೀಸರಿಗೆ ಏನು ಸರಿ ಅನ್ನಿಸಿದೆಯೋ ಅದನ್ನು ಮಾಡಿದ್ದಾರೆ. ಸಿಎಂ, ಗೃಹ ಸಚಿವರು ನಾವು ಎಲ್ಲಾ ಹಿಂಗೆ ಮಾಡಿ ಎಂದು ಪೊಲೀಸರಿಗೆ ಹೇಳಲ್ಲ" ಎಂದು ತಿಳಿಸಿದರು.

ಕಾನೂನಾತ್ಮಕವಾಗಿಯೇ ಪ್ರಕ್ರಿಯೆ: ಚಿಕ್ಕಮಗಳೂರು ಬಂದ್‌ಗೆ ಕರೆ ವಿಚಾರವಾಗಿ ಪ್ರತಿಕ್ರಿಯಿಸಿ, "ಅಂಬೇಡ್ಕರ್ ಕುರಿತು, ಲಕ್ಷ್ಮೀ ವಿರುದ್ಧ ಮಾತಾಡಿದ್ದಕ್ಕೂ ಪ್ರತಿಭಟನೆ ಮಾಡಬೇಕು" ಎಂದರು. "ಸಿ.ಟಿ.ರವಿ ಅವರ ಪ್ರತಿ ದೂರನ್ನೂ ಪರಿಶೀಲಿಸುತ್ತೇವೆ. ಪೊಲೀಸರು ಪ್ರಕ್ರಿಯೆ ಪ್ರಕಾರ ನೋಡಿಕೊಳ್ಳಲಿದ್ದಾರೆ. ಸಿ.ಟಿ.ರವಿ ಅವರನ್ನು ಬಂಧಿಸಿದಾಗಿನಿಂದ ಇಲ್ಲಿಯವರೆಗೆ ಕಾನೂನಾತ್ಮಕವಾಗಿಯೇ ಪ್ರಕ್ರಿಯೆ ನಡೆಯುತ್ತಿದೆ" ಎಂದು ಹೇಳಿದರು. ತಮ್ಮ ಕೊಲೆಗೆ ಸಂಚು, ಪ್ರಾಣಕ್ಕೆ ಅಪಾಯ ಎಂಬ ಸಿ.ಟಿ.ರವಿ ಹೇಳಿಕೆ ವಿಚಾರವಾಗಿ ಮಾತನಾಡಿ, "ಇದರ ಬಗ್ಗೆ ನಾನು ಕಾಮೆಂಟ್ ಮಾಡಲ್ಲ. ಅವರ ಹೇಳಿಕೆ ನನಗೆ ಗೊತ್ತಿಲ್ಲ" ಎಂದು ತಿಳಿಸಿದರು.

ಪರಿಸ್ಥಿತಿ ಕೈ ಮೀರಿಲ್ಲ, ಎಲ್ಲವೂ ಹತೋಟಿಯಲ್ಲಿದೆ: ಬೆಳಗಾವಿಯಲ್ಲಿ ಸಿ.ಟಿ.ರವಿ ಮೇಲೆ ಕಾಂಗ್ರೆಸ್ ಕಾರ್ಯಕರ್ತರ ಹಲ್ಲೆ ಪ್ರಯತ್ನ ವಿಚಾರವಾಗಿ ಪ್ರತಿಕ್ರಿಯಿಸಿ, "ಎಲ್ಲವೂ ಕಂಟ್ರೋಲ್ ಇದೆ. ಸದನ ವೀಕ್ಷಣೆ ಮಾಡಲು ಸ್ಪೀಕರ್ ಅವಕಾಶ ನೀಡಿದ್ದಾರೆ. ಅವರ ಕ್ಷೇತ್ರ ಅಂತ ಜನ ಬಂದಿರಬಹುದು. ಯಾವುದೇ ಪರಿಸ್ಥಿತಿ ಕೈ ಮೀರಿಲ್ಲ. ಎಲ್ಲವೂ ಹತೋಟಿಯಲ್ಲಿದೆ" ಎಂದು ಸಮರ್ಥಿಸಿಕೊಂಡರು.

"ಸಿ.ಟಿ.ರವಿಯನ್ನು ಬೆಳಗಾವಿಯಲ್ಲಿ ಕೋರ್ಟ್‌ಗೆ ಹಾಜರುಪಡಿಸುತ್ತಾರೆ. ಅಲ್ಲಿನ ಕೋರ್ಟ್ ಯಾವ ನಿರ್ದೇಶನ ನೀಡಲಿದೆ ಎಂಬುದನ್ನು ನೋಡಬೇಕು. ಕೋರ್ಟ್ ಸೂಚನೆ ಮೇರೆಗೆ ಮುಂದಿನ ಕ್ರಮ ಕೈಗೊಳ್ಳಲಾಗುವುದು" ಎಂದರು.

# ಸಿ.ಟಿ.ರವಿ ಬಂಧನ ಖಂಡಿಸಿ ಬಿಜೆಪಿ ಪ್ರತಿಭಟನೆ: ಎಂಎಲ್‌ಸಿ ವಿರುದ್ಧ ಕಾಂಗ್ರೆಸ್‌ನಿಂದಲೂ ಆಕ್ರೋಶ

**ಬೆಂಗಳೂರು:** ವಿಧಾನಪರಿಷತ್ ಕಲಾಪದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಅವಾಚ್ಯ ಪದ ಬಳಸಿ ನಿಂದಿಸಿದ ಆರೋಪದಡಿ ಬಿಜೆಪಿ ನಾಯಕ ಸಿ.ಟಿ. ರವಿ ಅವರ ಬಂಧನ ಖಂಡಿಸಿ ನಗರದ ಫ್ರೀಡಂ ಪಾರ್ಕ್‌ನಲ್ಲಿ ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದರು.

ಮೇಲ್ಮನೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕರಾದ ಭೈರತಿ ಬಸವರಾಜ್, ಅಶ್ವತ್ಥನಾರಾಯಣ, ಹರೀಶ್ ಪೂಂಜಾ, ಧೀರಜ್ ಮುನಿರಾಜ್, ಮಾಜಿ ಉಪ ಮೇಯರ್ ಹರೀಶ್ ಸೇರಿದಂತೆ ಹಲವು ಬಿಜೆಪಿ ಶಾಸಕರು, ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ, "ಸಿ.ಟಿ.ರವಿಯವರು ಏನು ಮಾತನಾಡಿಲ್ಲ ಎಂದು ಸಭಾಪತಿಗಳೇ ಹೇಳಿದ್ದಾರೆ. ಸದನದ ಒಳಗೆ ನಡೆದಿರುವುದಕ್ಕೆ ಸಭಾನಾಯಕರೇ ತೀರ್ಮಾನ ತೆಗೆದು ಕೊಳ್ಳಬೇಕು. ಆದರೆ, ಸಭಾನಾಯಕರ ಅನುಮತಿಯಿಲ್ಲದೆ, ಪೊಲೀಸರು ಸಿ.ಟಿ.ರವಿ ಅವರನ್ನು ಬಂಧಿಸಿದ್ದಾರೆ. ಮೂಲಕ ಕಾಂಗ್ರೆಸ್ ಸರ್ಕಾರ ಪೊಲೀಸ್ ಇಲಾಖೆಯನ್ನು ದುರ್ಬಳಕೆ ಮಾಡಿಕೊಂಡಿದೆ'' ಎಂದು ಆರೋಪಿಸಿದರು.

ರಾಜ್ಯದಲ್ಲಿ ನಾಲಾಯಕ್ ಸರ್ಕಾರ ಇದೆ: ಪಕ್ಷದ ನಾಯಕ ಸಿ.ಟಿ.ರವಿ ಅವರನ್ನು ಏಕಾಏಕಿ ಬಂಧಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಶಾಸಕ ಅಶ್ವತ್ಥನಾರಾಯಣ, "ಆರೋಪದ ಕುರಿತು ವಿಧಾಮ ಪರಿಷತ್ತಿನಲ್ಲಿ ಸಭಾಪತಿಗಳೇ ಸ್ಪಷ್ಟನೆ ಕೊಟ್ಟಿದ್ದಾರೆ. ಆದರೂ ಕೂಡಾ ಕಾಂಗ್ರೆಸ್‌ನವರು ದ್ವೇಷದ ಹಿನ್ನೆಲೆಯಲ್ಲಿ ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ. ದೂರು ಪಡೆದ ಮೇಲೆ ತನಿಖೆ ಮಾಡಬೇಕಿತ್ತು. ಅಲ್ಲದೇ ಸಿ.ಟಿ.ರವಿಯವರು ಕೊಟ್ಟ ಪ್ರತಿದೂರನ್ನು ಪರಿಗಣಿಸಿಲ್ಲ. ಕೇವಲ ಪೋಸ್ಟಿಂಗ್‌ಗಾಗಿ ಪೊಲೀಸರು ಕೆಲಸ ಮಾಡುತ್ತಿದ್ದಾರೆ. ರಾಜ್ಯದಲ್ಲಿ ನಾಲಾಯಕ್ ಸರ್ಕಾರ ಇದೆ. ಸುವರ್ಣಸೌಧದಲ್ಲಿ ರೌಡಿಗಳು ಬಂದು ಸಿ.ಟಿ.ರವಿಯವರ ಮೇಲೆ ಹಲ್ಲೆ ಮಾಡಿದ್ದಾರೆ ಎಂದರೆ ಸುವರ್ಣಸೌಧಕ್ಕೆ ಭದ್ರತೆ ಕೊಡುವ ಯೋಗ್ಯತೆ ಕಾಂಗ್ರೆಸ್‌ನವರಿಗಿಲ್ಲ, ಇನ್ನು ಇಡೀ ರಾಜ್ಯಕ್ಕೆ ಭದ್ರತೆ ಹೇಗೆ ಕೊಡುತ್ತಾರೆ" ಎಂದು ಪ್ರಶ್ನಿಸಿದರು.



ಮಹಿಳಾ ಕಾಂಗ್ರೆಸ್ ಪ್ರತಿಭಟನೆ: ಮತ್ತೊಂದೆಡೆ, ಸಿ.ಟಿ.ರವಿ ವಿರುದ್ಧ ಬೆಂಗಳೂರಿನಲ್ಲಿ ಮಹಿಳಾ ಕಾಂಗ್ರೆಸ್ ಸಹ ಪ್ರತಿಭಟನೆ ನಡೆಸಿದೆ. ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸೌಮ್ಯಾ ರೆಡ್ಡಿ ನೇತೃತ್ವದಲ್ಲಿ ಹಲವು ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಮಲ್ಲೇಶ್ವರಂನ ಬಿಜೆಪಿ ರಾಜ್ಯ ಕಚೇರಿ ಬಳಿ ಪ್ರತಿಭಟಿಸಿದರು. ಸಿ.ಟಿ.ರವಿ ಅವರನ್ನು ಪರಿಷತ್ ಸ್ಥಾನದಿಂದ ವಜಾಗೊಳಿಸುವಂತೆ ಆಗ್ರಹಿಸಿದ ಕಾಂಗ್ರೆಸ್‌ನ ಮಹಿಳಾ ಕಾರ್ಯಕರ್ತೆಯರು ಬಿಜೆಪಿ ಕಚೇರಿಯತ್ತ ಮುನ್ನುಗ್ಗುತ್ತಿದ್ದಂತೆ ತಡೆದ ಪೊಲೀಸರು, ಅವರನ್ನು ವಶಕ್ಕೆ ಪಡೆದರು.

ಹುಬ್ಬಳ್ಳಿಯಲ್ಲಿ ಕಾಂಗ್ರೆಸ್ ಪ್ರತಿಭಟನೆ: ಅವಾಚ್ಯ ಪದ ಬಳಕೆ ಖಂಡಿಸಿ ಲಕ್ಷ್ಮೀ ಹೆಬ್ಬಾಳ್ಕರ್ ಅಭಿಮಾನಿ ಬಳಗ ಹಾಗೂ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಸಿ.ಟಿ.ರವಿ ವಿರುದ್ಧ ಹುಬ್ಬಳ್ಳಿಯಲ್ಲಿ ಪ್ರತಿಭಟನೆ ನಡೆಸಿದರು. ನಗರದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಕೇಶ್ವಾಪೂರ ಸರ್ಕಲ್‌ನಲ್ಲಿ ಅಭಿಮಾನಿ ಬಳಗದಿಂದ ಪ್ರತಿಭಟನೆ ನಡೆಸಲಾಯಿತು. ಲಕ್ಷ್ಮೀ ಹೆಬ್ಬಾಳ್ಕರ್ ಪರ ಭಿತ್ತಿ ಪತ್ರಗಳೊಂದಿಗೆ ರಸ್ತೆ ತಡೆದು, ಘೋಷಣೆ ಕೂಗಿ ಪ್ರತಿಕೃತಿ ದಹಿಸಿ ಆಕ್ರೋಶ ಹೊರ ಹಾಕಿದರು.

ಮತ್ತೊಂದೆಡೆ, ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಕಾಂಗ್ರೆಸ್ ಮಹಿಳಾ ಕಾರ್ಯಕರ್ತರು ವಿನೂತನ ಪ್ರತಿಭಟನೆ ನಡೆಸಿದರು. ಸಿ.ಟಿ.ರವಿ ಅವರ ಭಾವಚಿತ್ರಕ್ಕೆ ಹೂ ಹಾಕಿ, ಬಾಳೆಹಣ್ಣು, ನಿಂಬೆಹಣ್ಣು ಇಟ್ಟು ಪೂಜೆ ಸಲ್ಲಿಸಿ ಧಿಕ್ಕಾರ ಕೂಗಿದರು.

## ಸುದ್ದಿ ಸಂಜೆ

### ಪೊಲೀಸರು ಅಮಾನುಷವಾಗಿ ವರ್ತಿಸಿದ್ದಾರೆ

**ಬೆಂಗಳೂರು:** ಮಾಜಿ ಸಚಿವರೂ ಆದ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ಬಂಧಿಸಿ ರಾತ್ರಿ ಬೇರೆ ಬೇರೆ ಠಾಣೆಗಳಿಗೆ ಕರೆದೊಯ್ದು ಪೊಲೀಸರು ಅಮಾನುಷವಾಗಿ ವರ್ತಿಸಿದ್ದಾರೆ. ಅವರ ಮೇಲಿನ ಪೊಲೀಸ್ ದೌರ್ಜನ್ಯ ಖಂಡನೀಯ ಎಂದು ಬಿಜೆಪಿ ರಾಜ್ಯ ಸಹ ಉಸ್ತುವಾರಿ ಸುಧಾಕರ ರೆಡ್ಡಿ ಅವರು ತಿಳಿಸಿದ್ದಾರೆ.

ಸಿ.ಟಿ.ರವಿ ಅವರು ಶಾಸಕರಾಗಿ, ಸಚಿವರಾಗಿ, ಪಕ್ಷದ ಹಿಂದಿನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡಿದ್ದಾರೆ. ಅವರನ್ನು ಈ ರೀತಿ ನಡೆಸಿಕೊಂಡದ್ದು ಸರಿಯಲ್ಲ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ಖಂಡಿಸಿದ್ದಾರೆ.

ಪೊಲೀಸ್ ಇಲಾಖೆ ಸರಕಾರದ ಕೈಗೊಂಬೆಯಾಗಿ ಕೆಲಸ ಮಾಡುತ್ತಿದೆ. ಇದನ್ನು ನಾನು ಖಂಡಿಸುತ್ತೇನೆ. ಈ ರೀತಿ ವರ್ತಿಸುವುದು ಸರಿಯಲ್ಲ. ಘಟನೆಯನ್ನು ತಿಳಿದುಕೊಂಡು ಕಾನೂನಿನಂತೆ ಕ್ರಮ ಕೈಗೊಳ್ಳಬೇಕಿತ್ತು ಎಂದು ಅವರು ಒತ್ತಾಯಿಸಿದ್ದಾರೆ.

### ಪತ್ರಿಕಾ ವಿತರಕರಿಗೆ ಟ್ರ್ಯಾಕ್ ಪ್ಯಾಂಟ್, ಟಿ-ಶರ್ಟ್ ವಿತರಿಸಿದ ನವೀನ್ ಕಿರಣ್



ಚಿಕ್ಕಬಳ್ಳಾಪುರ: ಬ್ಯಾಚ್ ಆಫ್ ಸೋಶಿಯಲ್ ಸರ್ವಿಸ್ ಬ್ಯಾಚಿನವರು ಬುಧವಾರ ಪಂಚಗಿರಿ ಬೋಧನಾ ಪ್ರೌಢಶಾಲೆಯಲ್ಲಿ ಟ್ರಾಕ್ ಡ್ರೆಸ್ ಮತ್ತು ಟಿ ಶರ್ಟ್ ಅನ್ನು ಬಾಸ್ ಬ್ಯಾಚಿನ ಅಧ್ಯಕ್ಷ ಕೆ.ವಿ.ನವೀನ್ ಕಿರಣ್ ರಾಕ್ ಡ್ರೆಸ್ ಮತ್ತು ಟೀ ಶರ್ಟ್ ಅನ್ನು ವಿತರಿಸಿದರು.

ನಗರದ ಪಂಚಗಿರಿ ಬೋಧನಾ ಪ್ರೌಢಶಾಲೆಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಪತ್ರಿಕಾವಿತರಕರಿಗೆ ರಾಕ್ ಡ್ರೆಸ್ ಮತ್ತು ಟೀ ಶರ್ಟ್ ವಿತರಿಸಿ ಮಾತನಾಡಿದರು.

ಪತ್ರಿಕಾ ವಿತರಕರ ಕಾರ್ಯ ಯೋಧರ ಕಾರ್ಯವಿದ್ದಂತೆ . ಪ್ರತಿದಿನ ಬೆಳಿಗ್ಗೆ ನಾಲ್ಕು ರಿಂದ ಐದು ಗಂಟೆಗೆ ಎದ್ದು ಮನೆ ಮನೆಗೆ ಹೋಗಿ ಪತ್ರಿಕೆಗಳನ್ನು ಹಂಚುತ್ತಿರುವ ಹುಡುಗರಿಗೆ ಟ್ರಾಕ್ ಡ್ರೆಸ್ ಮತ್ತು ಟೀ ಶರ್ಟ್ ವಿತರಣೆ ಮಾಡುತ್ತಿರುವುದು ಒಳ್ಳೆಯ ಕೆಲಸವಾಗಿದೆ. 2021 ರಲ್ಲಿ ಪ್ರಾರಂಭವಾದ ಈ ಸಂಸ್ಥೆ ಅನೇಕ ಸಮಾಜಮುಖಿ ಕೆಲಸಗಳನ್ನು ಮಾಡುತ್ತಾ ಬಂದಿದ್ದರೂ ಪ್ರಚಾರದಿಂದ ದೂರವಿದ್ದವು. ಪತ್ರಿಕೆಯನ್ನು ಹಂಚುತ್ತಿರುವ ಹುಡುಗರಿಗೆ ಇದೇ ಮೊದಲ ಬಾರಿಗೆ ಬಟ್ಟೆ ವಿತರಿಸಲು ಮುಂದಾಗಿದ್ದು ಬಹಳ ಒಳ್ಳೆಯ ಕೆಲಸವಾಗಿದೆ ಎಂದರು.

ಈ ವೇಳೆ ಮಾತನಾಡಿದ ಅವರು, ಹುಟ್ಟು-ಸಾವು ಸಹಜ. ಇದರ ಮಧ್ಯೆ ಸಮಾಜಕ್ಕೆ ಒಂದಿಷ್ಟು ಕೊಡುಗೆ ಕೊಡುವುದು ಪ್ರತಿಯೊಬ್ಬರ ಕರ್ತವ್ಯ. 2021ರಲ್ಲಿ ಪ್ರಾರಂಭವಾದ ಬಾಸ್ ಸಂಸ್ಥೆ ಅನೇಕ ಸಮಾಜಮುಖಿ ಕೆಲಸಗಳನ್ನು ಮಾಡುತ್ತಾ ಬಂದಿದೆ. ಅವಶ್ಯಕತೆ ಇರುವ ಸಾಕಷ್ಟು ಮಂದಿಗೆ ಈಗಾಗಲೇ ದಿನಸಿ, ಔಷಧ ವಿತರಣೆ ಹೀಗೆ ಹಲವಾರು ಕೆಲಸಗಳನ್ನು ಮಾಡಿದೆ. ಈಗ ಮುಂಜಾನೆ ಚಳಿ, ಗಾಳಿ ಎನ್ನದೇ ಪತ್ರಿಕೆ ಹಾಕುವ ಹುಡುಗರಿಗೆ ಟ್ರ್ಯಾಕ್ ಪ್ಯಾಂಟ್ ಮತ್ತು ಟಿ-ಶರ್ಟ್ ಅನ್ನು ವಿತರಿಸುತ್ತಿದ್ದೇವೆ ಎಂದರು.

ಬಾಸ್ ತಂಡದ ಎಲ್ಲ ಸದಸ್ಯರು ಪ್ರತಿ ತಿಂಗಳು 600 ರೂ.ನಂತೆ ಬ್ಯಾಂಕ್ ಖಾತೆಗೆ ಜಮೆ ಮಾಡುತ್ತಾರೆ. ಪ್ರತಿ ವರ್ಷ ಶೇ. 20ರಷ್ಟು ಹೆಚ್ಚಿಸಲಾಗುತ್ತದೆ. ಎಲ್ಲ ವ್ಯವಹಾರಗಳು ಬ್ಯಾಂಕುಗಳ ಮೂಲಕವೇ ನಡೆಯುತ್ತವೆ. ಮುಂದಿನ ದಿನಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಕಣ್ಣು, ದಂತ ತಪಾಸಣೆ ಕಾರ್ಯಕ್ರಮ ಮಾಡುತ್ತೇವೆ ಎಂದರು.

ಬಾಸ್ ತಂಡದಲ್ಲಿ ಬಿ.ಮಹೇಶ್, ಪ್ರವೀಣ್,ವೆಂಕಟೇಶ್,ಸುಜಾತಾ ನವೀನ್ ಕಿರಣ್, ಸುಬ್ರಮಣ್ಯಂ, ನಾಯ್ಡು, ನಾಗಮೋಹನ್, ಮಹಾಂತೇಶ್, ಚಂದ್ರಕಾತ್, ಹರೀಶ್,ಸುಬ್ಬುಸ್ವಾಮಿ, ಸುಜಾತಾ ನವೀನ್ ಕಿರಣ್, ದೀಪ್ತಿ ಪ್ರಿಯ, ಅಸ್ಲಾಂ ಪಾಷಾ, ಮಧು, ಸಿಬ್ಬು, ಸೌಮ್ಯ ಸದಸ್ಯರಾಗಿದ್ದಾರೆಂದು ನವೀನ್ ಕಿರಣ್ ಹೇಳಿದರು.

# ಸಭೆ ಕರೆದ ಸಿಎಂ: ಪಂಚಮಸಾಲಿ ಲಿಂಗಾಯತ ಪ್ರತಿಭಟನೆ ತಾತ್ಕಾಲಿಕ ಅಂತ್ಯ

**ಬೆಳಗಾವಿ:** 'ಪಂಚಮಸಾಲಿ ಸಮಾಜಕ್ಕೆ ಪ್ರವರ್ಗ '2ಎ' ಮೀಸಲಾತಿ ನೀಡಬೇಕು ಮತ್ತು ಹೋರಾಟಗಾರರ ಮೇಲೆ ಲಾಠಿಚಾರ್ಜ್ ಮಾಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ಷಮೆ ಕೇಳಬೇಕು' ಎಂದು ಆಗ್ರಹಿಸಿ ಕೂಡಲಸಂಗಮದ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಆರಂಭಿಸಲಾಗಿದ್ದ ಧರಣಿಯನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಗಿದೆ.

ಬೆಳಗಾವಿಯ ಅಂಬೇಡ್ಕರ್ ಗಾರ್ಡನ್‌ನಲ್ಲಿ ಈ ಪ್ರತಿಭಟನೆ ನಡೆಯುತ್ತಿತ್ತು. ಸ್ಥಳಕ್ಕೆ ತೆರಳಿದ ಮಾಜಿ ಸಚಿವ ಸಿ.ಸಿ.ಪಾಟೀಲ್, ಶಾಸಕರಾದ ಡಾ.ವಿ.ಐ.ಪಾಟೀಲ್, ಹೆಚ್.ಎಸ್.ಶಿವಶಂಕರ್ ಅವರು, ಪ್ರತಿಭಟನಾನಿರತ ಮನವೊಲಿಸುವಲ್ಲಿ ಯಶಸ್ವಿಯಾಗಿದ್ದಾರೆ.




ಶಾಸಕ ವಿಜಯಾನಂದ ಕಾಶಪ್ಪನವರ್ ಮಾತನಾಡಿ, ಪ್ರತಿಭಟನೆ ಆರಂಭವಾದ ದಿನ ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆಗಿದ್ದೆ. ಪ್ರತಿಭಟನಾಕಾರರು ತಮ್ಮ ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳುವಂತೆ ಮನವೊಲಿಸಲು ಮೂವರು ಮಂತ್ರಿಗಳನ್ನು ಕಳುಹಿಸಿದರೂ, ಸ್ವಾಮೀಜಿಗಳು ಮತ್ತು ಅವರ ಬೆಂಬಲಿಗರು ನಿರಾಕರಿಸಿದ್ದರು. ಇದು ಸರ್ಕಾರ ಲಿಂಗಾಯತ ವಿರೋಧಿ ಎಂಬ ಸಂದೇಶವನ್ನು ರವಾನಿಸಿತ್ತು. ಇದೀಗ ಸಿದ್ದರಾಮಯ್ಯ ಅವರು ಡಿಸೆಂಬರ್ 21 ಸಂದು ಸರ್ವಪಕ್ಷಗಳ ಪಂಚಮಸಾಲಿ ಲಿಂಗಾಯತ ಶಾಸಕರ ಸಭೆ ಕರೆದಿದ್ದಾರೆಂದು ಹೇಳಿದರು.

ಮೀಸಲಾತಿ ಬೇಡಿಕೆಯನ್ನು ಇದ್ದಕ್ಕಿದಂತೆಯೇ ಬಗೆಹರಿಸಲು ಸಾಧ್ಯವಿಲ್ಲ. ಪ್ರಕರಣ ಇನ್ನೂ ನ್ಯಾಯಾಲಯದ ಅಂಗಳದಲ್ಲಿದೆ. ಈ ಹಂತದಲ್ಲಿ ಸಮುದಾಯದ ಬೇಡಿಕೆಯನ್ನು ಈಡೇರಿಸಲು ಸರ್ಕಾರಕ್ಕೆ ಅಸಾಧ್ಯ ಎಂದು ತಿಳಿಸಿದರು.

ಬಸವಜಯ ಮೃತ್ಯುಂಜಯ ಸ್ವಾಮೀಜಿ ಮಾತನಾಡಿ, ಮೀಸಲಾತಿ ವಿಷಯದಲ್ಲಿ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿಸೆಂಬರ್ 21ರಂದು ಬೆಂಗಳೂರಿನಲ್ಲಿ ಸಭೆ ಕರೆದಿದ್ದಾರೆ. ಹೀಗಾಗಿ ನಮ್ಮ ಹೋರಾಟವನ್ನು ತಾತ್ಕಾಲಿಕವಾಗಿ ಹಿಂಪಡೆದಿದ್ದೇವೆ. ಸಭೆಯಲ್ಲಿ ಕೈಗೊಳ್ಳುವ ನಿರ್ಣಯ ಆಧರಿಸಿ ಮುಂದಿನ ಹೆಜ್ಜೆ ಇರಿಸುತ್ತೇವೆಂದು ಹೇಳಿದ್ದಾರೆ.

# ಗಾಣಿಗ ಅಭಿವೃದ್ಧಿ ನಿಗಮ ಸ್ಥಾಪನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಆಗ್ರಹ

**ಮುಳಬಾಗಲು:** ಗಾಣಿಗರ ಅಭಿವೃದ್ಧಿ ನಿಗಮ ಸ್ಥಾಪನೆಗೆ ಅಧಿಕೃತ ಆದೇಶ ಹೊರಡಿಸಿ, ಹೆಚ್ಚಿನ ಅನುದಾನವನ್ನು ಬಿಡುಗಡೆ ಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ರವರನ್ನು ಶ್ರೀ ಕ್ಷೇತ್ರ ತೈಲೇಶ್ವರ ಗಾಣಿಗರ ಮಹಾ ಸಂಸ್ಥಾನ ಮಠಾದೀಶ ಶ್ರೀ ಪೂರ್ಣಾನಂದಪುರಿ ಮಹಾ ಸ್ವಾಮಿಗಳು ಒತ್ತಾಯಿಸಿದ್ದಾರೆ.

ಅವರು ತಾಲೂಕಿನ ಕುರುಡುಮಲೆ ವಿನಾಯಕ ದೇವರಿಗೆ ವಿಶೇ? ಪೂಜೆ ಸಲ್ಲಿಸಿದ ನಂತರ 2025ರ ಜನವರಿ 11 ರಂದು ನಡೆಯಲಿರುವ ಗಾಣಿಗರ ಹಬ್ಬ ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು ಬಿ.ಎಸ್. ಯಡಿಯೂರಪ್ಪ, ಬಸವರಾಜು ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಗಾಣಿಗರ ಅಭಿವೃದ್ಧಿ ನಿಗಮ ಸ್ಥಾಪನೆಗೆ ಘೋ?ಣೆಯಾಗಿತ್ತು. ಅದರೆ ಕೆಲ ಕಾರಣಗಳಿಂದ ಸ್ಥಗಿತಗೊಂಡಿರುವ ಹಿನ್ನಲೆಯಲ್ಲಿ ಮುಖ್ಯಮಂತ್ರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ ನಿಗಮ ಸ್ಥಾಪನೆಗೆ ತ್ವರಿತವಾಗಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಿದರು. ಗಾಣಿಗರ ಸಮುದಾಯದ ಏಕತೆ ಹಾಗೂ ಸಂಘಟನಾ ಶಕ್ತಿಯನ್ನು ಪ್ರದರ್ಶನ ಮಾಡುವ ಉದ್ದೇಶದಿಂದ ಹಾಗೂ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಹಕ್ಕೋತ್ತಾಯ ಮಾಡಲು ಗಾಣಿಗರ ಹಬ್ಬವನ್ನು ಅತ್ಯಂತ ವೈಭವದಿಂದ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಗಾಣಿಗ ಸಮುದಾಯದವರು ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಈ ಸಭೆಗೆ 50 ಸಾವಿರ ಮಂದಿ ಆಗಮಿಸುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ಈ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಮಾಡಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಎಂ. ವೀರಪ್ಪಮೊಯ್ಲಿ, ಸಚಿವರಾದ ಹೆಚ್.ಕೆ. ಪಾಟೀಲ್, ಹೆಚ್.ಸಿ. ಮಹದೇವಪ್ಪ, ದಿನೇಶ್‌ಗುಂಡೂರಾವ್, ಶಿವರಾಜ್ ತಂಗಡಗಿ, ಸರಕಾರದ ಗ್ಯಾರಂಟಿ ಯೋಜನೆಯ ಅಧ್ಯಕ್ಷ ಹೆಚ್.ಎಂ. ರೇವಣ್ಣ, ಸ್ವಾಗತಸಮಿತಿ ಅಧ್ಯಕ್ಷ ಜಿ.ಎನ್. ವೇಣುಗೋಪಾಲ್ ಸೇರಿದಂತೆ ಶಾಸಕರು, ಸಂಸದರು ಸಮುದಾಯದ ಹಿರಿಯ ಮುಖಂಡರು ಹಾಜರಾಗಲಿದ್ದಾರೆ ಎಂದು ತಿಳಿಸಿದರು. ಕಾರ್ಯಕ್ರಮದ ನಡೆಯುವ ದಿನದದಂದು ಗುರುಗಳಿಗೆ ವಂದನೆ ಮತ್ತು ವಿಚಾರ ಸಂಕಿರಣ ಏರ್ಪಡಿಸಲಾಗಿದೆ. ಶ್ರೀ ಕೈಲಾಸ ಆಶ್ರಮ ಮಹಾ ಸಂಸ್ಥಾನದ ಪೀಠಾಧಿಪತಿಗಳಾದ ಶ್ರೀ ಜಯೇಂದ್ರ ಪುರಿ ಮಹಾ ಸ್ವಾಮಿಗಳು ಮತ್ತು ಇನ್ನಿತರ ಸ್ವಾಮಿಗಳಿಂದ ಮಹಾ ಸ್ವಾಮಿಗಳಿಗೆ ದ್ವಿತೀಯ ಪೀಠಾರೋಹಣ ಸಮಾರಂಭ ನಡೆಯಲಿದೆ. ಇದೇ ದಿವಸ ನೂತನ ಶಾಲಾ ಕಟ್ಟಡ ಹಾಗೂ ಪ್ರಸಾದ ಮನೆಯ ಕಟ್ಟಡಗಳ ಉದ್ಘಾಟನೆ ನಡೆಯಲಿದೆ ಎಂದು ತಿಳಿಸಿದರು.

ನಾನು ಪೂರ್ವಾಶ್ರಮದಲ್ಲಿ ಶಾಸಕರಾಗಿ, ಸಚಿವರಾಗಿ ಹಾಗೂ ಯೋಜನಾ ಆಯೋಗದ ಉಪಾಧ್ಯಕ್ಷರಾಗಿ ಸೇವೆ ಮಾಡಿದಾಗ ಸಮುದಾಯದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದೇನೆ ಜತಗೆ 2ಎ ಮೀಸಲಾತಿ ಸಿಗಲು ಸಾಕ?ಷ್ಟು ಶ್ರಮಿಸಿದ್ದೇನೆ ಎಂದು ತಿಳಿಸಿದರು. ಗಾಣಿಗ ಸಮುದಾಯ ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ ಪ್ರಗತಿಯಾಗಬೇಕೆಂಬ ಮಹದಾಸೆ ನನ್ನದಾಗಿದೆ ಎಂದು ತಿಳಿಸಿದರು.



ಮುಳಬಾಗಲು ತಾಲೂಕಿನ ಕುರುಡುಮಲೆ ಗ್ರಾಮದಲ್ಲಿರುವ ಶ್ರೀ ವಿನಾಯಕ ದೇವಾಲಯ ಆವರಣದಲ್ಲಿ ಗಾಣಿಗರ ಹಬ್ಬದ ಆಹ್ವಾನ ಪತ್ರಿಕೆಗಳನ್ನು ಶ್ರೀ ಪೂರ್ಣಾನಂದಪುರಿ ಮಹಾ ಸ್ವಾಮಿಗಳು ಬಿಡುಗಡೆಗೊಳಿಸಿದರು.

ಬೆಂಗಳೂರಿನಲ್ಲಿ ಗಾಣಿಗ ಹಾಗೂ ಇತರೆ ಸಮುದಾಯದ ಬಡ ವಿದ್ಯಾರ್ಥಿಗಳಿಗೆ ಐಸಿಎಸ್‌ಸಿ ಪಠ್ಯಕ್ರಮದ ಶಾಲೆ ಹಾಗೂ ವಿದ್ಯಾರ್ಥಿ ನಿಲಯವನ್ನು ಸ್ಥಾಪನೆ ಮಾಡಿದ್ದು ಜತೆಗೆ ಕಲ್ಯಾಣ ಮಂಟಪ ನಿರ್ಮಿಸಲಾಗಿದ್ದು ಶುಭಸಮಾರಂಭಗಳಿಗೆ ರಿಯಾಯಿತಿ ದರದಲ್ಲಿ ಬಾಡಿಗೆಗೆ ನೀಡಲಾಗುತ್ತಿದೆ ಎಂದು ತಿಳಿಸಿದರು. ಮೊದಲನೇ ಪೀಠಾಧಿಪತಿಯಾಗಿ ಜನಾಂಗದ ಯುವಕರಿಗೆ ಶಾಶ್ವತ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದೇನೆ ಮುಂದೆ ನನ್ನ ಜೀವಮಾನ ಇರುವವರೆಗೂ ಜನಾಂಗ ಬೆಂಬಲ ನೀಡಿದರೆ ಮತ್ತ?ಷ್ಟು ಅಭಿವೃದ್ಧಿ ಪಡಿಸಲು ಸಾದ್ಯವಾಗುತ್ತದೆ ಎಂದು ತಿಳಿಸಿದರು. ನಾನು ಸಹಕಾರ ಸಚಿವನಾಗಿದ್ದಾಗ ನಮ್ಮ ಜನಾಂಗದ ಹಲವರಿಗೆ ರಾಜ್ಯಮಟ್ಟದ ಸಮಿತಿಗಳಲ್ಲಿ ಪ್ರಾತಿನಿಧ್ಯ ದೊರಕಿಸಿಕೊಟ್ಟಿದ್ದೇನೆ ಎಂದು ತಿಳಿಸಿದರು. ಗಾಣಿಗ ಸಮುದಾಯದವರು ಶ್ರೀ ಮಠದ ಅಭಿವೃದ್ದಿಯ ಬಗ್ಗೆ ಆಸಕ್ತಿ ತೋರಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡಬಹುದಾಗಿದೆ ಎಂದು ತಿಳಿಸಿದರು. ಗಾಣಿಗ ಸಮುದಾಯ ಯಾವುದೇ ರೀತಿಯ ಭಿನ್ನಾಭಿಪ್ರಾಯ ಇದ್ದರೂ ಸಹ ಅದನ್ನು ಬದಿಗೊತ್ತಿ ಸಂಘಟಿತರಾಗಬೇಕು ಸರಕಾರದ ಸೌಲತ್ತುಗಳು ಸಿಗದೇ ಇದ್ದಾಗ ಒಗ್ಗಟ್ಟಿನ ಪ್ರದರ್ಶನಮಾಡುವ ಮೂಲಕ ಹೋರಾಟ ಮಾಡಬೇಕೆಂದು ತಿಳಿಸಿದರು.

ಶ್ರೀ ಪೂರ್ಣಾನಂದಪುರಿ ಮಹಾ ಸ್ವಾಮಿಗಳು ಜ್ಞಾನಜ್ಯೋತಿ ವಿದ್ಯಾಸಂಸ್ಥೆಗೆ ಭೇಟಿ ನೀಡಿ ಇಲ್ಲಿನ ಶೈಕ್ಷಣಿಕ ಅಭಿವೃದ್ಧಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಸಮುದಾಯದ ಮುಖಂಡರು ಸ್ವಾಮೀಜಿ ರವರನ್ನು ಅದ್ದೂರಿಯಾಗಿ ಸ್ವಾಗತಿಸಿ ಸನ್ಮಾನಿಸಿದರು.

ಮಠದ ಟ್ರಸ್ಟಿ ಪಿ.ಜಿ. ವಿಜಯ್ ಕುಮಾರ್ ಗಾಣಿಗ, ಮಾದವಿ ವಿಜಯ್ ಕುಮಾರ್, ಉಪಾಧ್ಯಕ್ಷ ರಂಗರಾಜನ್, ಮುಖಂಡರಾದ ನರಸಾಪುರ ಅಮರ್‌ನಾಥ್, ಟಿ.ಎಂ. ಅಶೋಕ್, ರಾಜಶೇಖರ್, ಕೆ.ವಿ. ರಮೇಶ್, ವೇಣುಗೋಪಾಲ್, ಜ್ಞಾನಜ್ಯೋತಿ ವಿದ್ಯಾಸಂಸ್ಥೆಯ ಚಂದ್ರಶೇಖರ್, ಮಂಜುಳ, ಎಸ್‌ಡಿಸಿ ಕಾಲೇಜಿನ ಪ್ರಿನ್ಸಿಪಾಲ್ ಮುರಳಿಕೃ?, ಶ್ರೀ ಶಾರದ ವಿದ್ಯಾಸಂಸ್ಥೆಯ ಅಧ್ಯಕ್ಷ ಎಂ.ಸಿ. ದೇವರಾಜ್, ಕಾರ್ಯದರ್ಶಿ ಟಿ.ಎಸ್. ರಮೇಶ್, ನಿರ್ದೇಶಕ ಗೋವಿಂದರಾವ್, ಹಿರಿಯರಾದ ಎಸ್.ಎನ್. ಲಕ್ಷ್ಮಿಪತಿ, ನಾಗರಾಜ್, ಎಸ್‌ಎಲ್‌ಎನ್ ಚಾರಿಟೀಸ್ ನಿರ್ದೇಶಕ ಎಂ.ಜಿ. ವಿನೋದ್, ಆವಣಿ ಬಾಬು, ಸತ್ಯನಾರಾಯಣ, ಗೌನಿಪಲ್ಲಿ ಪ್ರಸಾದ್, ಶಿವಕುಮಾರ್, ನಾರಾಯಣ್, ಬ್ರಾಹ್ಮಿಣಿ ಶಾಲೆಯ ನಾಗೇಶ್, ಪ್ರಚಾರ ಸಮಿತಿ ಉಪಾಧ್ಯಕ್ಷ ಪ್ರಕಾಶ್, ಪ್ರಧಾನ ಕಾರ್ಯದರ್ಶಿ ವಿ. ರಾಮಕೃ?, ಜಂಟಿ ಕಾರ್ಯದರ್ಶಿ ನಾರಾಯಣಸ್ವಾಮಿ, ಮಾಲೂರು ಗಾಣಿಗ ಸಂಘದ ಪ್ರಧಾನ ಕಾರ್ಯದರ್ಶಿ ಸುರೇಶ್, ಮುರಳಿಕೃ?, ನಂಗಲಿ ನಾಗರಾಜ್, ಕುಮಾರಸ್ವಾಮಿ, ಡಿಶ್ ಶ್ರೀನಿವಾಸ್, ಮತ್ತಿತರರು ಇದ್ದರು.

## ಶಾ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ



**ಚಾಮರಾಜನಗರ:** ರಾಜ್ಯಸಭೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಅವಮಾನಿಸುವಂತಹ ಹೇಳಿಕೆ ನೀಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಚಾಮರಾಜನಗರದಲ್ಲಿ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಭುವನೇಶ್ವರಿ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾ ರರು ಬಿಜೆಪಿ ಸರ್ಕಾರ ಹಾಗೂ ಅಮಿತ್ ಶಾ ವಿರುದ್ಧ ಘೋ?ಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯಸಭೆಯಲ್ಲಿ ಅಮಿತ್ ಶಾ ಅವರು ಅಂಬೇಡ್ಕರ್ ಅವರ ಹೆಸರು ಹೇಳುವುದು ಒಂದು ಫ್ಯಾಶನ್ ಆಗಿದೆ ಎಂದು ಟೀಕಿಸಿದ್ದಾರೆ.

ಇದು ದೇಶದ ದಲಿತರು ಮತ್ತು ಬಾಬಾ ಸಾಹೇಬರಿಗೆ ಮಾಡಿದ ಅವಮಾನವಾಗಿದೆ. ಬಿಜೆಪಿ ನಾಯಕರಿಗೆ ಯಾವ ರೀತಿಯ ಚಿಂತನೆ ಇದೆ ಎಂದು ಅಮಿತ್ ಶಾ ಇಡೀ ದೇಶಕ್ಕೆ ತೋರಿಸಿದ್ದಾರೆ. ಕೂಡಲೇ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಅಂಬೇಡ್ಕರ್ ಅವರನ್ನು ಅವಮಾನಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಜೊತೆಗೆ ರಾ?ದ ಜನತೆಯಲ್ಲಿ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ರಾಜ್ಯ ಬಂದ್ ಕರೆ ನೀಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ದಲಿತ ಸಂಘ? ಸಮಿತಿ ಜಿಲ್ಲಾ ಸಂಚಾಲಕ ಯರಿಯೂರು ರಾಜಣ್ಣ, ದಲಿತ ಸಂಘ? ಸಮಿತಿ ಡಿ.ಜಿ.ಸಾಗರ್ ಬಣದ ಜಿಲ್ಲಾ ಸಂಯೋಜಕ ಸಿ.ಎಂ.ಶಿವಣ್ಣ, ಸಾಹಿತಿ ಸೋಮಶೇಖರ್ ಬಿಸಲ್ವಾಡಿ, ರಾಮಸಮುದ್ರ ಸುರೇಶ್, ಗೂಳೀಪುರ ಅನಿಲ್, ಹೊನ್ನೂರು ಕೃ?ಮೂರ್ತಿ, ಮಂಜೇಶ್ ಗೀಜರ್, ಆಟೋ ಉಮೇಶ್, ಕಂದಹಳ್ಳಿ ನಾರಾಯಣ, ಆಲೂರು ನಾಗೇಂದ್ರ, ನಂಜುಂಡಸ್ವಾಮಿ, ರಂಗಸ್ವಾಮಿ ಮಾಡ್ರಹಳ್ಳಿ, ರವಿಕುಮಾರ್, ಆಟೋ ಕೆಂಪರಾಜು, ರಂಗಸ್ವಾಮಿ ಸೇರಿದಂತೆ ಇತರರು ಭಾಗವಹಿಸಿದ್ದರು.

## ಅಕ್ರಮ ಮತದಾನ; ತನಿಖೆ ನಡೆಸುವಂತೆ ಒತ್ತಾಯ

**ಶಿಡ್ಲಘಟ್ಟ :** ತಾಲ್ಲೂಕಿನ ಭಕ್ತರಹಳ್ಳಿಯ ಮತಗಟ್ಟೆ-2 ರಲ್ಲಿ ನಡೆದ ಅಕ್ರಮ ಮತದಾನಕ್ಕೆ ಮತಗಟ್ಟೆ ಅಧಿಕಾರಿಯೆ ನೇರ ಹೊಣೆ ಎಂದು ಶಿಡ್ಲಘಟ್ಟ ವಿದಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ಆರೋಪಿಸಿ, ಈ ಬಗ್ಗೆ ತನಿಖೆ ನಡೆಸುವಂತೆ ಚುನಾವಣಾ ಆಯೋಗವನ್ನು ಒತ್ತಾಯಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿ, ಮತದಾನದ ಬ್ಯಾಲೆಟ್ ಪೇಪರನ್ನೆ ನಕಲು ಮಾಡುವುದೆಂದರೆ ಏನು? ನಕಲಿ ಬ್ಯಾಲೆಟ್ ಪೇಪರ್ ಮತಪೆಟ್ಟಿಗೆಗೆ ಹೇಗೆ ಬಂತು ಎಂದು ಅವರು ಪ್ರಶ್ನಿಸಿದರು. ಈ ಹಿಂದೆ ತೆಲಗಿಯು ನಕಲಿ ಛಾಪಾ ಕಾಗದ ಹಗರಣ ನಡೆಸಿದ್ದ ರೀತಿ ಇಲ್ಲಿ ನಕಲಿ ಬ್ಯಾಲೆಟ್ ಪೇಪರ್ ಪ್ರಿಂಟ್ ಮಾಡಿ ಅಕ್ರಮ ಮತದಾನ ಮಾಡಿದ್ದು ಇದಕ್ಕೆ ಮತಗಟ್ಟೆ ಅಧಿಕಾರಿ, ಸಿಬ್ಬಂದಿಯೆ ಕಾರಣರಾಗಿದ್ದು ಅವರು ಈ ಬಗ್ಗೆ ವಿವರ ನೀಡಬೇಕೆಂದು ಒತ್ತಾಯಿಸಿದರು.

ಮತದಾನವಾಗಿದ್ದು 983, ಮತಪೆಟ್ಟಿಗೆಯಲ್ಲಿ ಇದ್ದದ್ದು 980 ಬ್ಯಾಲೆಟ್ ಪೇಪರ್ , ಆ 3 ಬ್ಯಾಲೆಟ್ ಪೇಪರ್ ಏನಾದವು, ಹೆಚ್ಚುವರಿ 18 ನಕಲಿ ಬ್ಯಾಲೆಟ್ ಪೇಪರ್ ಹೇಗೆ ಬಂತು ಎಂಬುದನ್ನು ದಾಖಲೆ ಸಮೇತ ನೀಡುವಂತೆ ಈಗಾಗಲೆ ದೂರು ಸಲ್ಲಿಸಿದ್ದೇವೆ.

ಸೂಕ್ತ ದಾಖಲೆಗಳೊಂದಿಗೆ ಉತ್ತರ ನೀಡದಿದ್ದಲ್ಲಿ ಚುನಾವಣಾ ಆಯೋಗ, ನ್ಯಾಯಾಲಯದ ಮೆಟ್ಟಿಲು ಹತ್ತಿ ಉಗ್ರ ಹೋರಾಟವನ್ನು ರೂಪಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ನಾನು ಇದುವರೆಗೂ ಕಂಡಂತಹ ಚುನಾವಣೆಗಳಲ್ಲಿ ಡೂಪ್ಲಿಕೇಟ್ ಬ್ಯಾಲೆಟ್ ಪೇಪರ್ ಗಳನ್ನು ಮುದ್ರಿಸಿ ಮತಪೆಟ್ಟಿಗೆಗೆ ಹಾಕಿರುವುದು ಇದೆ ಮೊದಲು ಇದು ಚುನಾವಣಾ ವ್ಯವಸ್ಥೆಯನ್ನೆ ಅಣಕಿಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಈಗಾಗಲೆ ಭಕ್ತರಹಳ್ಳಿ ಮತಗಟ್ಟೆ-2ವರ ಪರಾಜಿತ ಅಭ್ಯರ್ಥಿಗಳಿಂದ ಮತಗಟ್ಟೆ ಅಧಕಾರಿಗೆ ಹಾಗೂ ತಹಸೀಲ್ದಾರರಿಗೆ ದೂರು ನೀಡಿದ್ದು ಈ ಸಂಬಂಧ ಸೂಕ್ತ ದಾಖಲೆಗಳೊಂದಿಗೆ ಸಮಜಾಯಿಷಿ ನೀಡಲು ಕೋರಲಾಗಿದೆ ,ನಾನು ಕೂಡ ತಹಸೀಲ್ದಾರ್ ಮತ್ತು ಮತಗಟ್ಟೆ ಅಕಾರಿ ಜತೆ ಮಾತನಾಡಿದ್ದೇನೆ.

ತಹಸೀಲ್ದಾರರು ಇದೆಲ್ಲವೂ ಮತಗಟ್ಟೆ ಅಧಿಕಾರಿಯ ಜವಾಬ್ದಾರಿ ಅವರು ಸೂಕ್ತ ಉತ್ತರ ಮತ್ತು ದಾಖಲೆ ನೀಡಲಿದ್ದು ನಾನು ಕೂಡ ಅವರಿಗೆ ಈ ಬಗ್ಗೆ ಸೂಚಿಸಿದ್ದೇನೆ ಎಂದು ನನಗೆ ತಿಳಿಸಿದ್ದಾರೆ ಎಂದು ಅವರು ಹೇಳಿದರು.

ಈ ವಿ?ಯವನ್ನು ಗಂಭೀರವಾಗಿ ತೆಗೆದುಕೊಂಡು ಕಾನೂನಿನ ಹೋರಾಟವನ್ನು ನಡೆಸಿ ಅಕ್ರಮವನ್ನು ಬಯಲಿಗೆ ಎಳೆಯುವವರೆಗೂ ಬಿಡುವುದಿಲ್ಲ ಎಂದು ತಿಳಿಸಿದರು. ಈ ವೇಳೆ ಹಾಪ್ ಕಾಮ್ಸ್ ಮಾಜಿ ಅಧ್ಯಕ್ಷ ಬಿ.ವಿ.ಮುನೇಗೌಡ, ಪರಾಜಿತ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಚಿದಾನಂದಮೂರ್ತಿ,ಚನ್ನೇಗೌಡ ಮತ್ತಿತರರು ಹಾಜರಿದ್ದರು.

## ವಿದ್ಯಾರ್ಥಿಗಳ ಮನೆಗೆ ಭೇಟಿ ನೀಡಿ ಆರ್ಥಿಕ ಸಹಾಯ ನೀಡಿದ: ವಿ. ಆದಿನಾರಾಯಣ



**ಮುಳಬಾಗಿಲು:** ತಾಲ್ಲೂಕಿನ ಬಾಳಸಂದ್ರ ಮೋರಾರ್ಜಿ ದೇಸಾಯಿ ಶಾಲೆಯ ಮಕ್ಕಳು ಶೈಕ್ಷಣಿಕ ಪ್ರವಾಸದಲ್ಲಿ ಮುರುಡೇಶ್ವರ ಬೀಚ್ ಬಳಿ ಆಟವಾಡುತ್ತಲೇ ಪುಟ್ಟಾಣಿ ಮಕ್ಕಳು ತಮ್ಮ ಜೀವನದ ಅಂತ್ಯವನ್ನು ಕಂಡದ್ದು ತುಂಬ ನೋವಾಗಿದೆಎಂದು ಆದಿನಾರಾಯಣ ಅವರು ಬೇಸರ ವ್ಯಕ್ತಪಡಿಸಿದರು.

ನಂತರ ಮಾತನಾಡಿದ ಆದಿನಾರಾಯಣ ಈ ವಿದ್ಯಾರ್ಥಿಗಳ ಕುಟುಂಬಗಳು ಕಡು ಬಡತನದಿಂದ ಜೀವನ ಮಾಡುತ್ತಿದ್ದು ಇವರಿಗೆ ಕಾಂಗ್ರೆಸ್ ಸರ್ಕಾರದಿಂದ ಬರುವ ವಸತಿ ಸೌಲಭ್ಯ, ಇನ್ನಿತರೆ ಸರ್ಕಾರದಿಂದ ಬರುವ ಸೌಲಭ್ಯಗಳನ್ನು ಒದಗಿಸಿ ಅವರ ಕುಟುಂಬಕ್ಕೆ ನೆರವು ಮಾಡಿಕೊಡುವುದಾಗಿ ಭರವಸೆ ನೀಡಿದರು.

4 ಹೆಣ್ಣು ಮಕ್ಕಳ ಪೋ?ಕರನ್ನು ಮತ್ತು ಕುಟುಂಬವನ್ನು ಭೇಟಿ ಮಾಡಿ ಅಂದರೆ ಹೆಬ್ಬಣಿ ಲಾವಣ್ಯ ರವರ ಮನೆಗೆ ಭೇಟಿ ನೀಡಿ ಸಾಂತ್ವನ ತಿಳಿಸಿ ನನ್ನ ವೈಯುಕ್ತಿಕವಾಗಿ 50 ಸಾವಿರ ರೂಪಾಯಿಗಳನ್ನು ನೀಡಿ ಕಾರ್ಯಕ್ರಮಗಳು ನಡೆಸಲು ಪ್ರಾರ್ಥಿಸಿ ಮುಂದಿನ ದಿನಗಳಲ್ಲಿ ನಿಮ್ಮೊಂದಿಗೆ ನಾವಿರುತ್ತೇವೆಂದು ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ನ ತಾಲೂಕು ಮುಖಂಡರಾದ ಆಲಂಗೂರು ಶಿವಣ್ಣ, ಆವಣಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ನೀಲಕಂಠೇಗೌಡ, ಆರ್. ಆರ್. ರಾಜೇಂದ್ರ ಗೌಡ, ರಾಮಲಿಂಗ ರೆಡ್ಡಿ, ಜಮ್ಮನಹಳ್ಳಿ ಕೃ?ಪ್ಪ, ವೆಂಕಟಾ ಚಲಪತಿ , ಹೆಬ್ಬಣಿ ವೇಣುಗೋಪಾಲ್ ರೆಡ್ಡಿ, ಬೈಯಪ್ಪನಹಳ್ಳಿ ಶಂಕರ್ ರೆಡ್ಡಿ, ವೆಂಕಟ ಕಿ?ರೆಡ್ಡಿ, ಹೆಚ್.ವಿ ವೆಂಕಟೇಶ್, ಭೈರಪ್ಪ, ಹೆಚ್. ಬಿ. ರವಿ, ಹೆಗಡೆ ವೆಂಕಟರಮಣ, ಟೀ ಅಂಗಡಿ ವೆಂಕಟರಾಮಪ್ಪ, ಸುಧಾಕರ ರೆಡ್ಡಿ , ಕೃ?ಚಾರಿ, ಕೋಡಹಳ್ಳಿ ವೆಂಕಟರಮಣ, ಗ್ರಾಮ ಪಂಚಾಯತಿ ಸದಸ್ಯರು, ಊರಿನ ಮುಖಂಡರು, ವಿದ್ಯಾರ್ಥಿ ಪೋ?ಕರು, ಉಪಸ್ಥಿತರಿದ್ದರು.

## ದೈಹಿಕ ಮತ್ತು ಮಾನಸಿಕ ಆರೋಗ್ಯದ ಕಡೆ ಗಮನ ಹರಿಸಿ

ಶಿಡ್ಲಘಟ್ಟ : ತಮ್ಮ ದಿನ ನಿತ್ಯದ ಕೆಲಸ ಕಾರ್ಯ, ಜೀವನದ ಜವಾಬ್ದಾರಿಗಳ ನಡುವೆಯೂ ತಮ್ಮ ವೈಯಕ್ತಿಕವಾದ ದೈಹಿಕ ಮತ್ತು ಮಾನಸಿಕ ಆರೋಗ್ಯದ ಕಡೆ ಗಮನ ಹರಿಸಬೇಕೆಂದು ಕಾಂಗ್ರೆಸ್‌ನ ಯುವ ಮುಖಂಡ ಬಿ.ಎ.ಲಕ್ಷ್ಮೀಪತಿ ಅಪ್ಪಯ್ಯಸ್ವಾಮಿ ಅಭಿಪ್ರಾಯಪಟ್ಟರು.

ತಾಲೂಕಿನ ವೀರಾಪುರ ಗ್ರಾಮದ ಪುರಾಣ ಪ್ರಸಿದ್ದ ಗವಿಗುಟ್ಟ ಗಂಗಾಧರೇಶ್ವರಸ್ವಾಮಿ ದೇವಾಲಯದ ಸುತ್ತಲೂ ನಿರ್ಮಿಸಿರುವ ಪಾದಚಾರಿ ಮಾರ್ಗದ ಬದುಗಳಲ್ಲಿ ಸಸಿಗಳನ್ನು ನೆಡುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು. ಗವಿಗುಟ್ಟ ಗಂಗಾಧರೇಶ್ವರಸ್ವಾಮಿ ದೇವಾಲಯವು ಸಾವಿರಾರು ವ?ಗಳ?ಷ್ಟು ಪುರಾತನವಾಗಿದ್ದು ಪಾಂಡವರು ಅಜ್ಞಾತವಾಸದ ಸಮಯದಲ್ಲಿ ಕೈವಾರಕ್ಕೆ(ಆಗಿನ ಏಕ ಚಕ್ರಪುರ)ಹೋಗುವ ಮಾರ್ಗ ಮದ್ಯೆ ಇಲ್ಲಿನ ಶಿವಲಿಂಗವನ್ನು ಪ್ರತಿ?ಷ್ಠಾಪಿಸಿದರೆಂಬ ಪ್ರತೀತಿ ಇದೆ.

ಶಿಡ್ಲಘಟ್ಟ ನಗರಕ್ಕೆ ಕೇವಲ 2 ಕಿಲೋ ಮೀಟರ್ ಹತ್ತಿರದಲ್ಲಿದ್ದು ಇಲ್ಲಿಗೆ ನಿತ್ಯವೂ ನೂರಾರು ಮಂದಿ ವಾಯು ವಿಹಾರಕ್ಕಾಗಿ ಇಲ್ಲಿಗೆ ಬರುತ್ತಾರೆ,ವಾಯು ವಿಹಾರಕ್ಕೆ ಅನುಕೂಲವಾಗುವಂತೆ ದೇವಾಲಯದ ಸುತ್ತಲೂ ಸಿಮೆಂಟ್ ರಸ್ತೆ ನಿರ್ಮಿಸಿದ್ದು ವಾಯು ವಿಹಾರಕ್ಕೆ ಸೂಕ್ತವಾಗಿದೆ ಎಂದರು.

ಇದೀಗ ಗಿಡಗಳನ್ನು ನೆಡಲಾಗುತ್ತಿದ್ದು ವಾಯು ವಿಹಾರಿಗಳು, ಭಕ್ತರು ಕುಳಿತುಕೊಳ್ಳಲು ಕಲ್ಲು ಬೆಂಚು ಅಳವಡಿಸುವುದು ಸೇರಿ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗುವುದು, ಎಲ್ಲರೂ ಈ ಸತ್ಕಾರ್ಯಕ್ಕೆ ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಇದೀಗ ಗ್ರಾಮದ ಯುವಕರು, ರೈತ ಸಂಘದ ಸದಸ್ಯರು, ದೇವಾಲಯದ ಭಕ್ತರು ಎಲ್ಲರೂ ಸೇರಿ ರಸ್ತೆಯ ಬದುಗಳಲ್ಲಿ ಸಸಿಗಳನ್ನು ನಾಟಿ ಮಾಡುತ್ತಿದ್ದು ಇದರಿಂದ ಇಲ್ಲಿ ಉತ್ತಮ ಪರಿಸರ ನಿರ್ಮಾಣವಾಗಿ ಪಾದಚಾರಿಗಳು ವಾಯು ವಿಹಾರ ಮುಗಿಸಿ ಕೆಲ ಕಾಲ ಕುಳಿತು ಹೋಗುವಂತ ಸ್ವಚ್ಛಂದ ವಾತಾವರಣ ನಿರ್ಮಾಣವಾಗುತ್ತದೆ ಎಂದು ಆಶಿಸಿದರು.

ದೇವಾಲಯದ ಸುತ್ತಲಿನ ಪಾದಚಾರಿ ಮಾರ್ಗದ ಬದುಗಳಲ್ಲಿ 120 ಮಹಾಘನಿ ಸಸಿಗಳನ್ನು ನೆಡಲಾಯಿತು.



ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಮುನಿನಂಜಪ್ಪ, ಸರ್ವೇಯರ್ ವೆಂಕಟೇಶ್, ಗ್ರಾಮಸ್ಥರಾದ ಮುರಳಿ,ಭಗತ್, ಮಂಜುನಾಥ್, ಸುನಿಲ್ ಇನ್ನಿತರರು ಸಸಿಗಳನ್ನು ನೆಡುವ ಕಾರ್ಯದಲ್ಲಿ ಭಾಗಿಯಾಗಿದ್ದರು.

## ಡಿ.27ಕ್ಕೆ ಹಿತರಕ್ಷಣಾ ಸಮಿತಿ ಸಭೆ

**ಚಾಮರಾಜನಗರ:** ಗುಂಡ್ಲುಪೇಟೆ ತಾಲೂಕು ಮಟ್ಟದ ಪರಿಶಿ? ಜಾತಿ ಮತ್ತು ಪರಿಶಿ? ವರ್ಗಗಳ ಹಿತರಕ್ಷಣಾ ಸಮಿತಿ ಸಭೆಯನ್ನು ಡಿ.27 ರ ಬೆಳಿಗ್ಗೆ 11 ಗಂಟೆಗೆ ಗುಂಡ್ಲುಪೇಟೆಯ ತಾಲೂಕು ಕಚೇರಿ ಸಭಾ ಭವನದಲ್ಲಿ ಏರ್ಪಡಿಸಲಾಗಿಸಲಾಗಿದೆ.

ಅಹವಾಲುಗಳನ್ನು ಪರಿಶಿ? ಜಾತಿ, ಪರಿಶಿ? ವರ್ಗಗಳ ಹಿತರಕ್ಷಣಾ ಸಮಿತಿಯ ಸದಸ್ಯರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಡಿಸೆಂಬರ್ 27ರೊಳಗೆ ಸಲ್ಲಿಸುವಂತೆ ಗುಂಡ್ಲುಪೇಟೆ ತಾಲೂಕು ಪ.ಜಾತಿ, ಪ.ವರ್ಗಗಳ ಹಿತರಕ್ಷಣಾ ಸಮಿತಿಯ ಅಧ್ಯಕ್ಷರು ಹಾಗೂ ತಹಶೀಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಚಾಮರಾಜನಗರ, ಹರದನಹಳ್ಳಿ ಹಾಗೂ ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಡಿಸೆಂಬರ್ 21ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಗಾಳಿಪುರ, ಮೆಡಿಕಲ್ ಕಾಲೇಜು, ಮೂಡಲಪುರ, ಮೂಡಲಪುರ ಸಣ್ಣ ಕೈಗಾರಿಕಾ ಇಲಾಖೆ, ಸಿದ್ದಯ್ಯನಪುರ, ಹೊಂಗಲವಾಡಿ, ಕೋಳಿಪಾಳ್ಯ, ಬಂಧಿಗೌಡನಹಳ್ಳಿ, ಅಟ್ಟುಗೂಳಿಪುರ, ಕೊತ್ತಲವಾಡಿ, ಅರಕಲವಾಡಿ, ಯರಗನಹಳ್ಳಿ, ಸುವರ್ಣನಗರ, ಫ್ಯಾಕ್ಟರಿ, ಬಿಸಲವಾಡಿ, ಪುಣಜನೂರು, ಡೊಳ್ಳಿಪುರ, ಚನ್ನಪನಪುರ, ಅಮಚವಾಡಿ, ಮಾದಲವಾಡಿ, ಕಿಲಗೆರೆ, ಮಾದಲವಾಡಿ, ಯನಗುಂಬ, ಯರಗನಹಳ್ಳಿ, ಅಚ್ಚಟ್ಟಿಪುರ, ಯಾನಗಳ್ಳಿ ಮತ್ತು ಹೊನ್ನೂರು, ಕುದೇರು, ಉಮ್ಮತ್ತೂರು, ಸಂತೇಮರಹಳ್ಳಿ, ಕೆಂಪನಪುರ, ನವಿಲೂರು, ದುಗ್ಗಟ್ಟಿ, ಆಲ್ದೂರು, ಅಂಬಳೆ, ಮಂಗಲ ವಾಟರ್ ಸಪ್ಲೈ, ಚುಂಗಡಿಪುರ, ಅವಿತ್ ಗ್ರೀನ್ ಸೋಲಾರ್, ಮೂಡಲ ಅಗ್ರಹಾರ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾ ದೇಶದ ಜನತೆಗೆ ಕ್ಷಮೆ ಯಾಚಿಸಲಿ

**ಶಿಡ್ಲಘಟ್ಟ :** ಸಂಸತ್ತಿನಲ್ಲಿ ಅಮಿತ್ ಶಾ ಅವರು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಅವಮಾನಿಸಿದ ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಇಡೀ ದೇಶಕ್ಕೆ ಮಾಡಿದ ಅವಮಾನವಾಗಿದೆ ಈ ದೇಶದ ಉನ್ನತ ಸ್ಥಾನದಲಿರುವ ಅಮಿತ್ ಶಾ ಕೂಡಲೇ ಈ ದೇಶದ ಜನತೆಗೆ ಕ್ಷಮೆಕೇಳಬೇಕು ಎಂದು ಯುವ ಕಾಂಗ್ರೆಸ್ ಮುಖಂಡ ಕುಂದಲಗುರ್ಕಿ ಮುನೀಂದ್ರ ಅವರು ಆಗ್ರಹಿಸಿದ್ದಾರೆ.

## ವಿಶೇಷಚೇತನರ ಶೇ.5ರ ಮೀಸಲು ಅನುದಾನ ಸಮರ್ಪಕ ಬಳಕೆಗೆ ಸೂಚನೆ

**ಚಾಮರಾಜನಗರ:** ವಿವಿಧ ಇಲಾಖೆಗಳು ಹಾಗೂ ಎಲ್ಲಾ ನಗರ, ಸ್ಥಳೀಯ ಸಂಸ್ಥೆಗಳಲ್ಲಿ ವಿಶೇಷಚೇತನರ ಶ್ರೇಯೋಭಿವೃದ್ಧಿಗಾಗಿ ಮೀಸಲಿರುವ ಶೇ. 5ರಷ್ಟು ಅನುದಾನವನ್ನು ಸಮರ್ಪಕವಾಗಿ ಬಳಸಿ ವಿಶೇಷಚೇತನ ಸ್ನೇಹಿ ವ್ಯವಸ್ಥೆ ಕಲ್ಪಿಸಲು ಮುಂದಾಗುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಜಿಲ್ಲಾಮಟ್ಟದ ವಿಕಲಚೇತನರ ಕುಂದುಕೊರತೆ ಸಭೆಯ ಅಧ್ಯಕ್ಷತೆ ವಹಿಸಿ, ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ವಿಶೇಷಚೇತನರ ಸಮಸ್ಯೆಗಳನ್ನು ಆಲಿಸಿ ಬಳಿಕ ಅವರು ಮಾತನಾಡಿದರು.

ವಿಶೇಷಚೇತನರಿಗೆ ಯುಡಿಐಡಿ ಕಾರ್ಡ್ ಹಾಗೂ ಪಡಿತರ ಚೀಟಿ ಪಡೆಯಲು ಆಧಾರ್ ಅವಶ್ಯವಾಗಿದ್ದು, ಈ ಸಂಬಂಧ ಅಧಿಕಾರಿಗಳು ಗ್ರಾಮ ಪಂಚಾಯಿತಿವಾರು ಮಾಹಿತಿ ಪಡೆದು ಆಧಾರ್ ಕಾರ್ಡ್ ಅಪ್‌ಡೇಟ್ ಆಗಿಲ್ಲದಿರುವುದನ್ನು ಗುರುತಿಸಬೇಕು. ಆಯಾ ಗ್ರಾಮ ಪಂಚಾಯಿತಿಗಳಲ್ಲಿ ಶಿಬಿರಗಳನ್ನು ಏರ್ಪಡಿಸಿ ಪಿ.ಡಿ.ಒ, ಅಂಗನವಾಡಿ, ಆಶಾ ಹಾಗೂ ಆರೋಗ್ಯ ಕಾರ್ಯಕರ್ತೆಯರೊಂದಿಗೆ ಸಮನ್ವಯ ಸಾಧಿಸಿ ಆದ?ಷ್ಟು ಶೀಘ್ರವಾಗಿ ಆಧಾರ್ ಅಪ್‌ಡೇಟ್ ಕಾರ್ಯವನ್ನು ಪೂರ್ಣಗೊಳಿಸುವಂತೆ ಸೂಚಿಸಿದರು.

ಕೆಲ ಗ್ರಾಮ ಪಂಚಾಯಿತಿಗಳಲ್ಲಿ ಶೇ. 5ರ ಮೀಸಲು ಅನುದಾನದಲ್ಲಿ ಶ್ರವಣದೋಷ ಯಂತ್ರ, ವೀಲ್‌ಚೇರ್ ಖರೀದಿಸಿ ಸಮರ್ಪಕವಾಗಿ ವಿತರಣೆಯಾಗಿಲ್ಲದಿರುವ ಬಗ್ಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಯವರು ಕಳೆದ ಐದು ವ?ಗಳಲ್ಲಿ ಶೇ. 5ರ ಅನುದಾನದಲ್ಲಿ ಖರ್ಚು-ವೆಚ್ಚದ ಮಾಹಿತಿ, ಹಣ



ಪಾವತಿ, ಫಲಾನುಭವಿಗಳ ಆಯ್ಕೆ, ಇತರೆ ವಿವರವನ್ನು ತಕ್ಷಣವೇ ಸ್ಥಳೀಯ ಲೆಕ್ಕಪರಿಶೋಧನಾ ಇಲಾಖೆಯಿಂದ ತಪಾಸಣೆ ಮಾಡಿಸಿ ವರದಿ ಸಲ್ಲಿಸಬೇಕು. ಅಲ್ಲದೇ ಕಳೆದ ಸಾಲಿನಲ್ಲಿ ವಿಶೇಷಚೇತನರ ಮಕ್ಕಳಿಗೆ ಮಂಜೂರಾಗಿದ್ದ ವಿದ್ಯಾರ್ಥಿವೇತನ ಸರ್ಕಾರಕ್ಕೆ ವಾಪಸ್ಸು ಹೋಗಿತ್ತು. ಈ ಬಾರಿ ಅದು ಮರುಕಳಿಸದಂತೆ ಎಚ್ಚರ ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಯವರು ತಾಕೀತು ಮಾಡಿದರು.

ಕೆಎಸ್‌ಆರ್‌ಟಿಸಿಗೆ ಸಂಬಂಧಿಸಿದಂತೆ 21 ಬಗೆಯ ವಿಕಲತೆಗಳನ್ನು ಗುರುತಿಸಲಾಗಿದ್ದು, ಎಲ್ಲಾ ವಿಶೇ?ಚೇತನರಿಗೂ ತಾರತಮ್ಯವಿಲ್ಲದೇ ಆದ್ಯತೆ ಮೇರೆಗೆ ಬಸ್‌ಪಾಸ್ ನೀಡಬೇಕು. ಅಶ್ವಮೇಧ ಬಸ್‌ಗಳಲ್ಲಿ ವಿಶೇಷಚೇತನರರಿಗೆ ಆಸನ ಮೀಸಲಿರಿಸಬೇಕು. ಡಿಪೋದಲ್ಲಿ ಬಸ್‌ಪಾಸ್ ವಿಭಾಗ ಸೇರಿದಂತೆ ಎಲ್ಲಾ ಸರ್ಕಾರಿ ಕಚೇರಿಗಳು ಮೇಲಂತಸ್ತಿನಿಂದ ನೆಲಮಹಡಿಗೆ ಸ್ಥಳಾಂತರವಾಗಬೇಕು. ತಪ್ಪಿದಲ್ಲಿ ರ್‍ಯಾಂಪ್, ಲಿಫ್ಟ್ ವ್ಯವಸ್ಥೆ ಮಾಡಬೇಕು. ಎಲ್ಲಾ ಬಸ್ ನಿಲ್ದಾಣಗಳಲ್ಲಿಯೂ ವೀಲ್‌ಚೇರ್ ವ್ಯವಸ್ಥೆ ಇರಬೇಕು. ವಿಶೇ?ಚೇತನರಿಂದ ಯಾವುದೇ ದೂರುಗಳು ಬರದಂತೆ ನಿಗಾ ವಹಿಸಿ ಮುಂದಿನ 15 ದಿನದೊಳಗೆ ಸಮಸ್ಯೆ ಪರಿಹರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವಿಶೇಷಚೇತನರಿಗೆ ಕನಿಷ್ಠ 3 ಸಾವಿರ ಮಾಸಾಶನ ನೀಡಬೇಕು. ವಸತಿ ಯೋಜನೆಯಡಿ ಸಂಬಂಧಪಟ್ಟ ವಿ.ಆರ್.ಡಬ್ಲ್ಯೂ ಅವರಿಂದ ಮಾಹಿತಿ ಪಡೆದು ಪಾರದರ್ಶಕ ಸಮೀಕ್ಷೆ ನಡೆಸಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಮನೆ ಮಂಜೂರಾತಿ ನೀಡಬೇಕು. ವಾಹನ ವಿತರಣೆಯಲ್ಲಿನ ನ್ಯೂನತೆಗಳನ್ನು ಸರಿಪಡಿಸಬೇಕು.

ಯುಡಿಐಡಿ ಕಾರ್ಡ್ಗೆ ಸಹಿ ಪಡೆಯಲು ಕ್ಷೇತ್ರಭೇಟಿಯಲ್ಲಿರುವ ಆರೋಗ್ಯ ಅಧಿಕಾರಿಗೆ ವಾರದಲ್ಲಿ ಒಂದುದಿನ ಕಚೇರಿಯಲ್ಲಿರುವಂತೆ ಸೂಚನೆ ನೀಡಬೇಕು. ರಸ್ತೆಬದಿ ಪುಟ್‌ಪಾತ್‌ನಲ್ಲಿ ವ್ಯಾಪಾರ ಮಾಡಲು ವಿಶೇಷಚೇತನರಿಗೆ ಅವಕಾಶ ಮಾಡಿಕೊಡಬೇಕು. ಬ್ಯಾಂಕ್‌ಗಳಲ್ಲಿ ಪ್ರತ್ಯೇಕ ಕೌಂಟರ್ ವ್ಯವಸ್ಥೆ ಇರಬೇಕೆಂಬ ವಿಶೇಷಚೇತನರ ಮನವಿಗೆ ಸಕಾರಾತ್ಮಕವಾಗಿ ಉತ್ತರಿಸಿದ ಜಿಲ್ಲಾಧಿಕಾರಿಯವರು ಈ ಎಲ್ಲಾ ಸಮಸ್ಯೆಗಳನ್ನು ಆದ?ಷ್ಟು ಬೇಗನೆ ಪರಿಹರಿಸಲು ಕ್ರಮ ವಹಿಸಲಾಗುವುದು ಎಂದರು.

ಶೇ. 5ರ ಅನುದಾನದಲ್ಲಿ ಸ್ಕೂಟರ್ ನೀಡುವುದು ಮಾತ್ರವಲ್ಲ, ಮುಂದಿನ 2025-26ನೇ ಸಾಲಿಗೆ ವಿಶೇಷಚೇತನರಿಗೆ ಅನುಕೂಲವಾಗುವ ಹೊಸ ಹೊಸ ಕ್ರಿಯಾಯೋಜನೆ ರೂಪಿಸಬೇಕು. ಜಿಲ್ಲೆಯಲ್ಲಿ ವಿಶೇಷಚೇತನರ ನಿರುದ್ಯೋಗ ಸಮಸ್ಯೆ ಪರಿಹರಿಸಲು ಕೈಗಾರಿಕೆಗಳಲ್ಲಿ ಉದ್ಯೋಗವಾಕಾಶ ಸೃಷ್ಟಿಸಬೇಕಾಗಿದೆ. ಅಲ್ಲದೆ ಕೌಶಲ್ಯಾಭಿವೃದ್ಧಿ ಪ್ರಮಾಣಪತ್ರ ನೀಡುವಂತೆ ಸಂಬಂಧಪಟ್ಟ ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ. ವ್ಯಾಪಾರಕ್ಕೆ ಅನುಕೂಲ, ಸಾಲಸೌಲಭ್ಯ ಹಾಗೂ 1 ವರ್ಷದಲ್ಲಿ 50 ಮಂದಿ ವಿಶೇಷಚೇತನರಿಗೆ ಖಾಸಗಿ ಉದ್ಯೋಗವಾದರೂ ದೊರಕಿದರೆ ಅವರ ಜೀವನ ಭದ್ರತೆಗೆ ಅನುಕೂಲ ಒದಗಿಸಿದಂತಾಗಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಚಿಡೋ ಚಂಡಮಾರುತ

# 73 ಮಂದಿ ಸಾವು, 500 ಕ್ಕೂ ಹೆಚ್ಚು ಮಂದಿಗೆ ಗಾಯ



**ಮೊಜಾಂಬಿಕ್:** ಮೊಜಾಂಬಿಕದಲ್ಲಿ ಚಿಡೋ ಚಂಡಮಾರುತದಿಂದ ಸಾವನ್ನಪ್ಪಿದವರ ಸಂಖ್ಯೆ 73 ಕ್ಕೆ ಏರಿದೆ ಎಂದು ರಾಷ್ಟ್ರೀಯ ಅಪಾಯ ಮತ್ತು ವಿಪತ್ತು ನಿರ್ವಹಣೆ ಸಂಸ್ಥೆ ತಿಳಿಸಿದೆ.

ಉತ್ತರ ಕ್ಯಾಬೊ ಡೆಲ್ಗಾಡೊ ಪ್ರಾಂತ್ಯದಲ್ಲಿ ಕನಿಷ್ಠ 66 ಸಾವುಗಳು ಸಂಭವಿಸಿವೆ ಎಂದು ವಿಪತ್ತು ಕೇಂದ್ರ ಗುರುವಾರ ಮಾಹಿತಿ ನೀಡಿದೆ. ನಾಂಪುಲಾ ಪ್ರಾಂತ್ಯದಲ್ಲಿ ನಾಲ್ವರು ಮತ್ತು ಒಳನಾಡಿನ ನಿಯಾಸ್ಸಾದಲ್ಲಿ ಮೂವರು ಸಾವನ್ನಪ್ಪಿದ್ದಾರೆ, ಒಬ್ಬ ವ್ಯಕ್ತಿ ಕಾಣೆಯಾಗಿದ್ದಾರೆ ಎಂದು ಅದು ಹೇಳಿದೆ.

ಚಂಡಮಾರುತದಿಂದ 540 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಗಂಟೆಗೆ ಸರಿಸುಮಾರು 260 ಕಿಮೀ ವೇಗದ ಗಾಳಿ ಬೀಸುತ್ತಿದ್ದು, 24 ಗಂಟೆಗಳಲ್ಲಿ ಸುಮಾರು 250 ಮಿಮೀ ಭಾರೀ ಮಳೆಯನ್ನು ಸುರಿಸಿದೆ ಎಂದು ಅಧಿಕಾರಿಗಳನ್ನು ಉಲ್ಲೇಖಿಸಿ ಅಲ್ ಜಜೀರಾ ವರದಿ ಮಾಡಿದೆ.

3 ಲಕ್ಷಕ್ಕೂ ಹೆಚ್ಚು ಮಂದಿಗೆ ಸಂಕಷ್ಟ: ವಿನಾಶಕಾರಿ ಭಾರಿ ಚಂಡಮಾರುತದಿಂದಾಗಿ 39,100 ಕ್ಕೂ ಹೆಚ್ಚು ಮನೆಗಳು ನಾಶವಾಗಿವೆ ಮತ್ತು 13,400 ಕ್ಕೂ ಹೆಚ್ಚು ಮನೆಗಳು ಭಾಗಶಃ ನಾಶವಾಗಿವೆ ಎಂದು ಅಲ್ಲಿನ ಅಧಿಕಾರಿಗಳು ಹೇಳಿದ್ದಾರೆ. 3,29,500 ಕ್ಕೂ ಹೆಚ್ಚು ಜನರು ಚಂಡಮಾರುತದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಮೊಜಾಂಬಿಕ್‌ನ ವಿಪತ್ತು ಕೇಂದ್ರ ತಿಳಿಸಿದೆ. ಉತ್ತರ ಮೊಜಾಂಬಿಕ್‌ನ ಒಂದು ಭಾಗವನ್ನು ಚಿಡೋ ಇನ್ನಿಲ್ಲದಂತೆ ಕಾಡಿದ್ದು, ಇಲ್ಲಿನ ಜನಜೀವನ ತೀವ್ರ ಅಸ್ತವ್ಯಸ್ತಗೊಂಡಿದೆ. ಈ ಪ್ರದೇಶದಲ್ಲಿ ಆಗಾಗ್ಗೆ ಚಂಡಮಾರುತಗಳು ಇಂತಹ ವಿನಾಶವನ್ನು ಮಾಡುತ್ತಲೇ ಇರುತ್ತವೆ.

ಯುನಿಸೆಫ್‌ನ ಮೊಜಾಂಬಿಕದ ವಕ್ತಾರ ಗೈ ಟೇಲರ್ ಮಾತನಾಡಿ, ಉತ್ತರ ಮೊಜಾಂಬಿಕ್‌ನ ದೊಡ್ಡ ಪ್ರದೇಶಗಳಲ್ಲಿನ ಪರಿಸ್ಥಿತಿ ವಿನಾಶಕಾರಿ ಪರಿಣಾಮಗಳನ್ನು ಉಂಟು ಮಾಡಿದೆ ಎಂದು ಹೇಳಿದ್ದಾರೆ. ಇಲ್ಲಿನ ಜನರು ಈಗಾಗಲೇ ಅತ್ಯಂತ ಅನಿಶ್ಚಿತ ಪರಿಸ್ಥಿತಿಗಳಲ್ಲಿ ವಾಸಿಸುತ್ತಿದ್ದಾರೆ. ಇಲ್ಲಿನ 3.4 ಮಿಲಿಯನ್ ಮಕ್ಕಳಿಗೆ ಮಾನವೀಯ ನೆರವಿನ ಅಗತ್ಯವಿದೆ. ಈ ಬಿಕ್ಕಟ್ಟಿನ ಮಧ್ಯೆಯೇ ಮಕ್ಕಳು, ಕುಟುಂಬಗಳು ಸೇರಿದಂತೆ ಅನೇಕ ಜನರು ಎಲ್ಲವನ್ನೂ ಕಳೆದುಕೊಂಡಿದ್ದಾರೆ. ಇಡೀ ಹಳ್ಳಿಗಳು ಸಂಪೂರ್ಣವಾಗಿ ನಾಶವಾಗಿವೆ. ಹೀಗಾಗಿ ಇಲ್ಲಿನ ಜನರಿಗೆ ತುರ್ತಾಗಿ ಆಶ್ರಯ ಬೇಕಿದೆ ಎಂದು ಅವರು ಅಲ್ ಜಜೀರಾಗೆ ತಿಳಿಸಿದ್ದಾರೆ.

ಹಿಂದೂ ಮಹಾಸಾಗರದ ಮಯೊಟ್ಟೆ ದ್ವೀಪದ ಮೂಲಕ ದಾಂಗುಡಿ ಇಟ್ಟ ಚಿಡೋ ಭಾನುವಾರ ಮೊಜಾಂಬಿಕ್‌ನಲ್ಲಿ ಭೂಕುಸಿತವನ್ನುಂಟು ಮಾಡಿತ್ತು. ಫ್ರೆಂಚ್ ಸಾಗರೋತ್ತರ ಪ್ರದೇಶವಾದ ಮಾಯೊಟ್ಟೆಯಲ್ಲಿ ಕನಿಷ್ಠ 31 ಜನರು ಸಾವನ್ನಪ್ಪಿದ್ದರು ಎಂದು ವರದಿಯಾಗಿದೆ. 1,500 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ, ಇದರಲ್ಲಿ 200 ಕ್ಕೂ ಹೆಚ್ಚು ಜನರ ಸ್ಥಿತಿ ಗಂಭೀರವಾಗಿದ್ದಾರೆ

# 'ಪಟಾಕಿ ನಿಷೇಧಿಸಿ'; ಸುಪ್ರೀಂ ಸೂಚನೆ



**ನವದೆಹಲಿ:** ರಾಷ್ಟ್ರ ರಾಜಧಾನಿಯ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ ಪಟಾಕಿಗಳನ್ನು ಸಂಪೂರ್ಣವಾಗಿ ನಿಷೇಧಿಸುವಂತೆ ಸುಪ್ರೀಂ ಕೋರ್ಟ್ ಗುರುವಾರ ಉತ್ತರ ಪ್ರದೇಶ ಮತ್ತು ಹರಿಯಾಣ ಸರಕಾರಗಳಿಗೆ ಸೂಚಿಸಿದೆ.

ದೆಹಲಿ ಮತ್ತು ರಾಜಸ್ಥಾನ ಸರ್ಕಾರಗಳು ಈಗಾಗಲೇ ಪಟಾಕಿ ಸಿಡಿಸುವುದನ್ನು ನಿರ್ಬಂಧಿಸಿದ್ದರೂ, ಉಳಿದ ರಾಜ್ಯಗಳು ಇದೇ ರೀತಿಯ ಕ್ರಮ ಕೈಗೊಂಡರೆ ಮಾತ್ರ ಈ ನಿಷೇಧ ಪರಿಣಾಮಕಾರಿಯಾಗಲಿದೆ ಎಂದು ನ್ಯಾಯಮೂರ್ತಿ ಅಭಯ್ ಎಸ್.ಓಕಾ ನೇತೃತ್ವದ ನ್ಯಾಯಪೀಠ ಹೇಳಿತು.

ದೆಹಲಿ ಮತ್ತು ಎನ್‌ಸಿಆರ್ ಪ್ರದೇಶದಲ್ಲಿ ಮಾಲಿನ್ಯ ನಿಯಂತ್ರಣಕ್ಕೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ನ್ಯಾಯಮೂರ್ತಿ ಎ.ಜಿ. ಮಾಸಿಹ್ ಅವರನ್ನೂ ಒಳಗೊಂಡ ನ್ಯಾಯಪೀಠ ವಿಚಾರಣೆ ನಡೆಸಿತು. ಹರಿಯಾಣದಲ್ಲಿ ಹಸಿರು ಪಟಾಕಿ ಗಳ ಬಳಕೆಗೆ ಅನುಮತಿ ನೀಡಲಾಗಿದ್ದರೆ, ರಾಜಸ್ಥಾನವು ಎನ್‌ಸಿಆರ್ ಪ್ರದೇಶದಲ್ಲಿ ಪಟಾಕಿಗಳ ಮೇಲೆ ಸಂಪೂರ್ಣ ನಿಷೇಧ ಹೇರಿದೆ ಎಂದು ಸುಪ್ರೀಂ ಕೋರ್ಟ್‌ಗೆ ವಿಚಾರಣೆಯ ಸಂದರ್ಭದಲ್ಲಿ ತಿಳಿಸಲಾಯಿತು.

ದೆಹಲಿಯಲ್ಲಿ ಪಟಾಕಿ ನಿಷೇಧಿಸಿದ ನಿಯಮಗಳನ್ನೇ ಅನುಸರಿಸಿ ಉತ್ತರ ಪ್ರದೇಶ ಮತ್ತು ಹರಿಯಾಣಗಳಲ್ಲೂ ಪಟಾಕಿ ನಿಷೇಧಿಸಬೇಕೆಂದು ಎರಡೂ ರಾಜ್ಯ ಸರ್ಕಾರಗಳಿಗೆ ಸೂಚಿಸಿದ ನ್ಯಾಯಾಲಯ, ಮುಂದಿನ ವಿಚಾರಣೆಯನ್ನು ಜನವರಿ 15, 2025 ಕ್ಕೆ ಮುಂದೂಡಿತು. ಅಲ್ಲದೆ, ಶ್ರೇಣೀಕೃತ ಪ್ರತಿಕ್ರಿಯೆ ಕ್ರಿಯಾ ಯೋಜನೆ (ಜಿಆರ್‌ಎಪಿ) –4 ಮಾನದಂಡಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ತಂಡಗಳನ್ನು ರಚಿಸುವಂತೆ ನ್ಯಾಯಾಲಯವು ದೆಹಲಿ ಮತ್ತು ಎನ್‌ಸಿಆರ್ ರಾಜ್ಯಗಳಿಗೆ ನಿರ್ದೇಶನ ನೀಡಿತು.

ಈ ಹಿಂದಿನ ವಿಚಾರಣೆಯಲ್ಲಿ ಪಟಾಕಿಗಳ ಬಳಕೆಯನ್ನು ಶಾಶ್ವತವಾಗಿ ನಿಷೇಧಿಸುವ ಬಗ್ಗೆ ನಿರ್ಧಾರ ಕೈಗೊಳ್ಳುವಂತೆ ಸುಪ್ರೀಂ ಕೋರ್ಟ್ ದೆಹಲಿ ಮತ್ತು ಪಕ್ಕದ ರಾಜ್ಯಗಳ ಸರ್ಕಾರಗಳಿಗೆ ಸೂಚಿಸಿತ್ತು. ಪಟಾಕಿಗಳ ತಯಾರಿಕೆ, ಸಂಗ್ರಹಣೆ, ಮಾರಾಟ ಮತ್ತು ವಿತರಣೆ ಸೇರಿದಂತೆ ಎಲ್ಲಾ ವಿಚಾರಗಳ ಬಗ್ಗೆ ಅಗತ್ಯ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಹೇಳಿತ್ತು.

"ಪಟಾಕಿಗಳ ನಿಷೇಧದಿಂದ ವಾಯುಮಾಲಿನ್ಯ ಮಾತ್ರವಲ್ಲದೆ ಶಬ್ದ ಮಾಲಿನ್ಯವನ್ನು ಸಹ ನಿಯಂತ್ರಿಸಬಹುದು. ಪಟಾಕಿಗಳ ಬಳಕೆಯನ್ನು ನಿಷೇಧಿಸುವ ವಿಷಯದ ಬಗ್ಗೆ ರಾಜ್ಯ ಸರ್ಕಾರಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡುವ ಬಗ್ಗೆ ನಾವು ಪರಿಶೀಲನೆ ಮಾಡಲಿದ್ದೇವೆ" ಎಂದು ಅದು ಹೇಳಿದೆ.

ಇದಕ್ಕೂ ಮುನ್ನ ನವೆಂಬರ್‌ನಲ್ಲಿ ದೀಪಾವಳಿಯ ನಂತರ ರಾಷ್ಟ್ರ ರಾಜಧಾನಿಯಲ್ಲಿ ಪಟಾಕಿ ನಿಷೇಧವನ್ನು ಜಾರಿಗೆ ತರಲಾಗಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿತ್ತು ಮತ್ತು ಪಟಾಕಿ ನಿಷೇಧ ಜಾರಿಗೆ ತರದಿದ್ದಕ್ಕಾಗಿ ದೆಹಲಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿತ್ತು. ನಿಷೇಧ ಜಾರಿಗೊಳಿಸಲು ಕೈಗೊಂಡ ಕ್ರಮಗಳ ಬಗ್ಗೆ ಅಫಿಡವಿಟ್ ಸಲ್ಲಿಸುವಂತೆ ನ್ಯಾಯಾಲಯ ದೆಹಲಿ ಸರ್ಕಾರ ಮತ್ತು ಪೊಲೀಸ್ ಆಯುಕ್ತರಿಗೆ ಸೂಚಿಸಿತ್ತು.

# ರಾಜ್ಯಸಭಾ ಸಭಾಪತಿ ಜಗದೀಪ್ ಧನಕರ್ ವಿರುದ್ಧದ ಅವಿಶ್ವಾಸ ನಿರ್ಣಯ ವಜಾ



**ನವದೆಹಲಿ:** ಉಪರಾಷ್ಟ್ರಪತಿ, ರಾಜ್ಯಸಭಾ ಸಭಾಪತಿ ಜಗದೀಪ್ ಧನಕರ್ ಅವರ ವಿರುದ್ಧ ಮಹಾಭಿಯೋಗ ನಡೆಸಲು ಕೋರಿ ವಿಪಕ್ಷಗಳು ಸಲ್ಲಿಸಿದ್ದ ನೋಟಿಸ್ ವಜಾಗೊಂಡಿದೆ. ನಿಯಮಗಳು ಪಾಲನೆ ಮಾಡಿಲ್ಲ ಎಂದು ರಾಜ್ಯಸಭಾ ಉಪಸಭಾಪತಿ ಹರಿವಂಶ್ ಅವರು ವಿಪಕ್ಷಗಳ ಅವಿಶ್ವಾಸ ನಿರ್ಣಯವನ್ನು ತಿರಸ್ಕರಿಸಿದ್ದಾರೆ.

ತಮ್ಮ ವಿರುದ್ಧ ಪಕ್ಷಪಾತ ಧೋರಣೆ ಮಾಡುತ್ತಿದ್ದಾರೆ. ಅವರನ್ನು ಪದಚ್ಯುತಗೊಳಿಸಬೇಕು ಎಂದು ಕೋರಿ ಕಾಂಗ್ರೆಸ್ ಸೇರಿದಂತೆ ವಿಪಕ್ಷಗಳ 60 ಸದಸ್ಯರು ಡಿಸೆಂಬರ್ 10 ರಂದು ರಾಜ್ಯಸಭಾ ಸಭಾಪತಿ ಧನಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿದ್ದರು.


ನಿರ್ಣಯ ತಿರಸ್ಕರಿಸಿದ ಉಪ ಸಭಾಪತಿ: ಅವಿಶ್ವಾಸ ನಿರ್ಣಯ ಮಂಡಿಸುವ ಮೊದಲು ಪಾಲಿಸಬೇಕಾದ ನಿಯಮಗಳನ್ನು ವಿಪಕ್ಷಗಳು ಅನುಸರಿಸಿಲ್ಲ. ಮಹಾಭಿಯೋಗಕ್ಕೆ 14 ದಿನಗಳ ಮೊದಲು ನೋಟಿಸ್ ನೀಡಬೇಕಿತ್ತು. ಜೊತೆಗೆ ನಿರ್ಣಯದ ನೋಟಿಸ್‌ನಲ್ಲಿ ಜಗದೀಪ್ ಧನಕರ್ ಅವರ ಹೆಸರನ್ನೇ ತಪ್ಪಾಗಿ ಬರೆಯಲಾಗಿದೆ. ಇದು ದೋಷಪೂರಿತವಾಗಿದ್ದು, ನಿರ್ಣಯವನ್ನು ತಿರಸ್ಕರಿಸಲಾಗುತ್ತಿದೆ ಎಂದು ರಾಜ್ಯಸಭಾ ಉಪಸಭಾಪತಿ ಹರಿವಂಶ್ ಅವರು ಹೇಳಿದ್ದಾರೆ.

ಮಹಾಭಿಯೋಗ ನೋಟಿಸ್ ಅನೌಪಚಾರಿಕ ಕೃತ್ಯವಾಗಿದ್ದು, ತೀವ್ರ ದೋಷಪೂರಿತವಾಗಿದೆ. ಸಭಾಪತಿಗಳ ವಿರುದ್ಧ ಆತುರದ ನಿರ್ಧಾರವಾಗಿದೆ. ಉಪರಾಷ್ಟ್ರಪತಿಗಳನ್ನು ನಿಂದಿಸಲು ಕೈಗೊಂಡ ನಿರ್ಣಯವಾಗಿದೆ ಎಂದು ರಾಜ್ಯಸಭೆಯ ಪ್ರಧಾನ ಕಾರ್ಯದರ್ಶಿ ಪಿ.ಸಿ. ಮೋದಿ ಅವರು ತಿಳಿಸಿದ್ದಾಗಿ ಮೂಲಗಳು ಹೇಳಿವೆ.

**ವಿಪಕ್ಷಗಳ ಆರೋಪವೇನು?:** ರಾಜ್ಯಸಭಾ ಸಭಾಪತಿ ಧನಕರ್ ಅವರು ವಿಪಕ್ಷಗಳಿಗೆ ಮಾತನಾಡಲು ಅವಕಾಶವೇ ನೀಡುವುದಿಲ್ಲ. ಶಿಕ್ಷಕರಂತೆ ನೀತಿ ಪಾಠ ಮಾಡುತ್ತಾರೆ. ಅವರು ಕೇಂದ್ರ ಸರ್ಕಾರದ ಪರವಾಗಿ ಮತ್ತು ವಿಪಕ್ಷಗಳ ವಿರುದ್ಧವಾಗಿದ್ದಾರೆ ಎಂದು ಆರೋಪ ಮಾಡಿದ್ದವು.

ಸಂವಿಧಾನದ ಪರಿಚ್ಛೇದ 67(ಬಿ) ಅಡಿಯಲ್ಲಿ ಸಭಾಪತಿಗಳ ಮಹಾಭಿಯೋಗಕ್ಕೆ ನಿರ್ಣಯ ಮಂಡಿಸಲಾಗಿತ್ತು. ಇದಕ್ಕೆ ಸಮಾಜವಾದಿ, ತೃಣಮೂಲ ಕಾಂಗ್ರೆಸ್ ಮತ್ತು ಎಎಪಿ ಬೆಂಬಲ ನೀಡಿದ್ದವು.

# ಬ್ರಿಕ್ಸ್ ಭಾಗವಾಗಲು ಅನೇಕ ರಾಜ್ಯಗಳು ಆಸಕ್ತಿ ಹೊಂದಿವೆ; ಪುಟಿನ್




**ಮಾಸ್ಕೋ (ರಷ್ಯಾ):** ಆರ್ಥಿಕ ಬೆಳವಣಿಗೆ ಮತ್ತು ವಿಶ್ವ ಆರ್ಥಿಕತೆ ರಚನೆ ರೂಪಿಸುವಲ್ಲಿ ಬ್ರಿಕ್ಸ್ ದೇಶಗಳು ಹೊಸ ಸಾಧನವನ್ನು ನಿರಂತರವಾಗಿ ಸೃಷ್ಟಿಸುವ ಕೆಲಸ ಮಾಡುತ್ತವೆ. ಇದು ದೀರ್ಘಕಾಲದ ಮಾನವೀಯತೆ ಪ್ರಗತಿಗೆ ಕೊಡುಗೆ ನೀಡುವ ಜೊತೆಗೆ ಜಾಗತಿಕ ಚಳವಳಿಗಳಲ್ಲಿ ಗುಂಪಿನ ದೇಶಗಳ ಸ್ಥಾನವನ್ನು ಬಲಪಡಿಸುತ್ತದೆ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಘೋಷಿಸಿದ್ದಾರೆ.


ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಸದಸ್ಯ ರಾಷ್ಟ್ರಗಳ ಹಿತಾಸಕ್ತಿಗಳಿಗಾಗಿ ಸಂಘವು ಕಾರ್ಯನಿರ್ವಹಿಸುತ್ತದೆ ಎಂದು ಇದೇ ವೇಳೆ ಸ್ಪಷ್ಟಪಡಿಸಿದ್ದಾರೆ. ಬ್ರಿಕ್ಸ್ ಒಕ್ಕೂಟ ವೇಗವಾಗಿ ಬೆಳೆಯುತ್ತಿದ್ದು, ಅನೇಕ ರಾಷ್ಟ್ರಗಳು ಬ್ರಿಕ್ಸ್ ಕುರಿತು ಆಸಕ್ತಿ ತೋರಿಸುತ್ತಿವೆ. ಕಾರಣ ಇದು ಪರಸ್ಪರ ಹಿತಾಸಕ್ತಿ ಮತ್ತು ಗೌರವದ ನಿರ್ಮಾಣಕ್ಕೆ ಕೆಲಸ ಮಾಡಲಿದೆ. ಎಲ್ಲ ವಿಷಯಗಳನ್ನು ಒಮ್ಮತದಿಂದ ಅಳವಡಿಸಿಕೊಳ್ಳಲಾಗುತ್ತದೆ, ಒಕ್ಕೂಟದ ಬೆಳವಣಿಗೆಗೆ ಇದು ಮುಖ್ಯವಾಗಿದೆ. ಇಲ್ಲಿ ಚಿಕ್ಕ– ದೊಡ್ಡ, ಹೆಚ್ಚು ಅಭಿವೃದ್ಧಿ ಮತ್ತು ಕಡಿಮೆ ಅಭಿವೃದ್ಧಿ ಹೊಂದಿದ ರಾಷ್ಟ್ರಗಳು ಎಂಬ ಭೇದ ಭಾವಗಳಿಲ್ಲ. ಇಲ್ಲಿ ಪರಸ್ಪರ ಹಿತಾಸಕ್ತಿ ಬದಲು ಅಭಿವೃದ್ಧಿಯ ಹಿತಾಸಕ್ತಿ ಇದೆ ಎಂದರು.

ಹೆಚ್ಚು ವಿಶ್ವ ನಾಯಕರನ್ನು ಸೆಳೆಯುವಲ್ಲಿ ಬ್ರಿಕ್ಸ್ ಯಶಸ್ವಿ: ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯು ಗಮನಾರ್ಹ ಸಂಖ್ಯೆಯ ವಿಶ್ವ ನಾಯಕರನ್ನು ಸೆಳೆಯುವಲ್ಲಿ ಯಶಸ್ವಿಯಾಗಿದೆ. ಟಾಟರ್ಸ್ತಾನ್ ರಾಜಧಾನಿ ಇತ್ತೀಚಿನ ವರ್ಷಗಳಲ್ಲಿ ಗಮನಾರ್ಹ ಅಭಿವೃದ್ಧಿ ಕಂಡಿದ್ದು, ಯುರೋಪ್‌ನ ಉತ್ತಮ ನಗರಗಳಲ್ಲಿ ಒಂದಾಗಿದೆ ಎಂದರು. ಇದೆ ವೇಳೆ,. ರಷ್ಯಾ ಮತ್ತು ಚೀನಾದ ಹಿತಾಸಕ್ತಿ ಕುರಿತ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಪರಸ್ಪರ ನಂಬಿಕೆ ಆಧಾರದ ಮೇಲೆ ಕಳೆದೊಂದು ದಶಕದಿಂದ ನಾವು ಉನ್ನತ ಹಂತ ತಲುಪಿದ್ದೇವೆ ಎಂದು ಒತ್ತಿ ಹೇಳಿದರು ಎಂದು ಟಿವಿ ಬ್ರಿಕ್ಸ್ ವರದಿ ಮಾಡಿದೆ.ಆರ್ಥಿಕ ಸಹಕಾರ ಕುರಿತು ಉತ್ತರಿಸಿದ ಅವರು, ವಿವಿಧ ಅಂದಾಜಿನ ಪ್ರಕಾರ ದೇಶಗಳ ವಹಿವಾಟು 220 ರಿಂದ 240 ಬಿಲಿಯನ್ ಡಾಲರ್ ಇರಲಿದೆ. ಹೆಚ್ಚುವರಿಯಾಗಿ, 600ಕ್ಕೂ ಹೆಚ್ಚು ಜಂಟಿ ಹೂಡಿಕೆಯನ್ನು ಅಳವಡಿಸಲಾಗುವುದು ಎಂದರು.ಮಾನವೀಯತೆಯೇ ಈ ಒಕ್ಕೂಟದ ಮೂಲ ಮಂತ್ರ: ಅಂತಿಮವಾಗಿ ನನ್ನ ಅಭಿಪ್ರಾಯದಲ್ಲಿ ಬಹಳ ಮುಖ್ಯ ಅಂಶ ಎಂದರೆ, ಅದು ಮಾನವೀಯತೆ ಭಾಗ. ನಾವು ಅನೇಕ ವರ್ಷಗಳನ್ನು ಹಿಡಿದುಟ್ಟುಕೊಂಡಿದ್ದೇವೆ. ಸಂಸ್ಕೃತಿಯ ವರ್ಷ, ಯುವ ವಿನಿಮಯದ ವರ್ಷ ಜನರಿಗೆ ಬಹಳ ಮುಖ್ಯವಾಗಿದೆ. ಇದು ಆರ್ಥಿಕ ಸಂಬಂಧಗಳು ಮತ್ತು ರಾಜಕೀಯ ಸಂವಹನಗಳ ಅಭಿವೃದ್ಧಿಗೆ ಆಧಾರವಾಗಿದೆ.

ಲ್ಯಾಟಿನ್ ಅಮೆರಿಕ ಇಲ್ಲಿ ಸದಾ ಪ್ರತಿನಿಧಿಸುತ್ತದೆ. ಕಾರಣ ಕ್ಯೂಬಾ, ವೆನಿಜುವೆಲಾ ಮತ್ತು ಇತರ ಪ್ರದೇಶಗಳು ರಷ್ಯಾದ ಜೊತೆಗೆ ಸ್ನೇಹ ಸಂಬಂಧವನ್ನು ಹೊಂದಿದೆ ಎಂದರು.

ಟ್ರಂಪ್ ಜತೆ ಮಾತುಕತೆಗೆ ಸಿದ್ಧ ಎಂದ ಪುಟಿನ್: ಅಮೆರಿಕ ಅಧ್ಯಕ್ಷರಾಗಿ ಚುನಾಯಿತ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಮಾತುಕತೆಗೆ ಸಿದ್ಧ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದ್ದಾರೆ. ವ್ಲಾಡಿಮಿರ್ ಪುಟಿನ್ ಅವರೊಂದಿಗೆ ವರ್ಷದ ಫಲಿತಾಂಶಗಳು ಎಂಬ ಕಾರ್ಯಕ್ರಮದ ಮೂಲಕ ಪತ್ರಿಕಾ ಗೋಷ್ಠಿ ನಡೆಸಲಾಗಿದ್ದು, ದೇಶೀಯ ನೀತಿ ಮತ್ತು ಸಾಮಾಜಿಕ ಕಾರ್ಯಸೂಚಿಯಿಂದ ಅಂತಾರಾಷ್ಟ್ರೀಯ ಸಂಬಂಧಗಳು ಮತ್ತು ವಿದೇಶಿ ಆರ್ಥಿಕ ಚಟುವಟಿಕೆಯವರೆಗಿನ ವಿಷಯಗಳ ಕುರಿತು ಪುಟಿನ್ ಉತ್ತರಿಸಿದರು.

# ಜೈಪುರ–ಅಜ್ಮೀರ್ ಹೈವೇಯಲ್ಲಿ ಗ್ಯಾಸ್ ಟ್ಯಾಂಕರ್ ಸ್ಫೋಟ



**ಜೈಪುರ (ರಾಜಸ್ಥಾನ):** ಇಲ್ಲಿನ ಜೈಪುರ– ಅಜ್ಮೀರ್ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾಸಾಯನಿಕ ಟ್ರಕ್‌ವೊಂದು ಸ್ಫೋಟಗೊಂಡ ಪರಿಣಾಮ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, 5 ಮಂದಿ ಜೀವಂತ ಸಮಾಧಿಯಾಗಿದ್ದು, 37 ಮಂದಿ ಗಾಯಗೊಂಡಿರುವ ಘಟನೆ ಶುಕ್ರವಾರ ಬೆಳಗ್ಗೆ ನಡೆದಿದೆ.

ಘಟನೆಯಲ್ಲಿ ಸುಮಾರು 30 ಟ್ರಕ್ ಮತ್ತು ಇತರ ವಾಹನಗಳು ಬೆಂಕಿಗೆ ಆಹುತಿಯಾಗಿವೆ ಎಂದು ಪೊಲೀಸ್ ಆಯುಕ್ತ ಬಿಜು ಜಾರ್ಜ್ ಜೋಸೆಫ್ ತಿಳಿಸಿದ್ದಾರೆ. ಗಾಯಗೊಂಡವರನ್ನು ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಈ ವಿಷಯ ತಿಳಿಯುತ್ತಿದ್ದಂತೆ ರಾಜಸ್ಥಾನ ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಆಸ್ಪತ್ರೆಗೆ ಭೇಟಿ ನೀಡಿ, ಗಾಯಾಳುಗಳ ಆರೋಗ್ಯ ವಿಚಾರಿಸಿದರು. ವೈದ್ಯರೊಂದಿಗೆ ಈ ಬಗ್ಗೆ ಸಮಾಲೋಚಿಸಿದ ಸಿಎಂ, ಉತ್ತಮ ಚಿಕಿತ್ಸೆ ಭರವಸೆ ನೀಡುವಂತೆ ಸೂಚನೆ ನೀಡಿದರು. ಇದಾದ ಬಳಿಕ ಅವರು ಅಪಘಾತ ನಡೆದ ಸ್ಥಳಕ್ಕೂ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

**ಘಟನೆ ಬಗ್ಗೆ ಕಳವಳ ವ್ಯಕ್ತಪಡಿಸಿದ ಶರ್ಮಾ** : ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಜೈಪುರ– ಅಜ್ಮೀರ ರಾಷ್ಟ್ರೀಯ ಹೆದ್ದಾರಿಯಲ್ಲಿ ಗ್ಯಾಸ್ ಟ್ಯಾಂಕರ್ ಅಗ್ನಿ ಅನಾಹುತದ ಸುದ್ದಿ ಕೇಳಿ ದುಃಖವಾಯಿತು. ಈ ಮಾಹಿತಿ ದೊರೆತ ಕೂಡಲೇ ನಾನು ಎಸ್‌ಎಂಎಸ್ ಆಸ್ಪತ್ರೆಗೆ ಭೇಟಿ ನೀಡಿದ್ದು, ಗಾಯಾಳುಗಳಿಗೆ ತಕ್ಷಣಕ್ಕೆ ಅಗತ್ಯ ವೈದ್ಯಕೀಯ ಸೌಲಭ್ಯ ಮತ್ತು ಆರೈಕೆ ನೀಡುವಂತೆ ವೈದ್ಯರಿಗೆ ಸೂಚಿಸಿದ್ದೇನೆ. ಘಟನಾ ಸ್ಥಳದಲ್ಲಿ ಇನ್ನೂ ರಕ್ಷಣಾ ಕಾರ್ಯ ಸಾಗಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

ವೆಸ್ಟ್ ಡಿಸಿಪಿ ಅಮಿತ್ ಕುಮಾರ್ ಬುಡಾನಿಯಾ ಸೇರಿದಂತೆ ಹಲವು ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳದಲ್ಲಿ ಬೀಡು ಬಿಟ್ಟಿದ್ದಾರೆ. ಈ ಅವಘಡದಲ್ಲಿ 40 ವಾಹನಗಳು ಸುಟ್ಟು ಕರಕಲಾಗಿದ್ದು, 37ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎನ್ನಲಾಗಿದೆ.

**ಸ್ಫೋಟದಿಂದ ಸಿಎನ್‌ಜಿ ಟ್ಯಾಂಕರ್‌ಗೆ ಬೆಂಕಿ:** ಡಿಸಿಪಿ ವೆಸ್ಟ್ ಅಮಿತ್ ಕುಮಾರ್ ಬುಡಾನಿಯಾ ಹೇಳುವ ಪ್ರಕಾರ, ಶುಕ್ರವಾರ ಬೆಳಗ್ಗೆ ಬಂಕ್ರೋಟಾ ಪೊಲೀಸ್ ಠಾಣಾ ವ್ಯಾಪ್ತಿಯ ಅಜ್ಮೀರ್ ಹೆದ್ದಾರಿಯಲ್ಲಿ ರಾಸಾಯನಿಕ ತುಂಬಿದ ಟ್ರಕ್‌ಗೆ ಡಿಕ್ಕಿಯಾದ ನಂತರ ಪೆಟ್ರೋಲ್ ಪಂಪ್ ಬಳಿ ನಿಲ್ಲಿಸಿದ್ದ ಸಿಎನ್‌ಜಿ ಟ್ಯಾಂಕರ್ ಸ್ಫೋಟಗೊಂಡು ಬೆಂಕಿ ಹೊತ್ತಿಕೊಂಡಿದೆ. ಈ ವೇಳೆ ಬೆಂಕಿ ಅಕ್ಕಪಕ್ಕದ ಹತ್ತಾರು ವಾಹನಗಳಿಗೂ ಆವರಿಸಿದೆ. 37ಕ್ಕೂ ಹೆಚ್ಚು ಮಂದಿ ಬೆಂಕಿಗೆ ಆಹುತಿಯಾಗಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಸವಾಯಿ ಮಾನ್ ಸಿಂಗ್ ಆಸ್ಪತ್ರೆಯ ತುರ್ತು ಚಿಕಿತ್ಸಾ ಘಟಕಕ್ಕೆ ದಾಖಲಿಸಲಾಗಿದೆ.

**ಅಕ್ಕಪಕ್ಕದ ಜನರಿಗೆ ಹೊರಗೆ ಬರದಂತೆ ಸೂಚನೆ:** ಬೆಂಕಿಯ ತೀವ್ರತೆ ಹೆಚ್ಚಾಗಿದ್ದು, ಅಕ್ಕಪಕ್ಕದ ಜನರಿಗೆ ಹೊರಗೆ ಬರದಂತೆ ಸೂಚನೆ ನೀಡಲಾಗಿದೆ. ಗ್ಯಾಸ್ ಟ್ಯಾಂಕರ್ ಡಿಕ್ಕಿ ಹೊಡೆದು ಹತ್ತಕ್ಕೂ ಹೆಚ್ಚು ವಾಹನಗಳು ಸುಟ್ಟು ಕರಕಲಾಗಿವೆ. ಪೆಟ್ರೋಲ್ ಪಂಪ್‌ನ ಒಂದು ಭಾಗಕ್ಕೂ ಬೆಂಕಿ ಆವರಿಸಿದೆ. ಭಂಕ್ರೋಟಾ, ಬಿಂದಾಯಕ, ಬಗ್ರು, ಚಿತ್ರಕೂಟ, ವೈಶಾಲಿ ನಗರ, ಕರ್ಣಿ ವಿಹಾರ್, ಕರ್ಧಾನಿ ಮತ್ತಿತರ ಸ್ಥಳಗಳ ಪೊಲೀಸ್ ಸಿಬ್ಬಂದಿಯನ್ನು ಸ್ಥಳದಲ್ಲಿ ನಿಯೋಜಿಸಲಾಗಿದೆ. ಸುಮಾರು ಎರಡು ಡಜನ್ ಅಗ್ನಿಶಾಮಕ ದಳದ ವಾಹನಗಳು ಬೆಂಕಿಯನ್ನು ನಿಯಂತ್ರಿಸಲು ಪ್ರಯತ್ನಿಸುತ್ತಿವೆ.

**ಪ್ರತ್ಯೇಕ ಐಸಿಯು ವಾರ್ಡ್ ಸ್ಥಾಪನೆ:** ಅಪಘಾತದಲ್ಲಿ ಗಾಯಗೊಂಡವರ ಚಿಕಿತ್ಸೆಗೆ ಎಲ್ಲಾ ಸೌಲಭ್ಯಗಳನ್ನು ಒದಗಿಸಬೇಕು ಎಂದು ವೈದ್ಯಕೀಯ ಸಚಿವ ಗಜೇಂದ್ರ ಸಿಂಗ್ ಖಿನ್ವಸರ್ ಸೂಚನೆ ನೀಡಿದ್ದಾರೆ. ಅಷ್ಟೇ ಅಲ್ಲ ಗಾಯಾಳುಗಳಿಗೆ ತಕ್ಷಣ ಚಿಕಿತ್ಸೆಗೆ ಅನುಕೂಲವಾಗುವಂತೆ ಐಸಿಯು ಮತ್ತು ಪ್ರತ್ಯೇಕ ವಾರ್ಡ್ ರಚಿಸುವಂತೆ ಅವರು ಆಸ್ಪತ್ರೆ ಆಡಳಿತಕ್ಕೆ ಸೂಚನೆ ಕೊಟ್ಟಿದ್ದಾರೆ. ಎಸ್‌ಎಂಎಸ್ ಆಸ್ಪತ್ರೆ ಆಡಳಿತದಿಂದ ಬಂದ ಮಾಹಿತಿಯ ಪ್ರಕಾರ, ಆಸ್ಪತ್ರೆಗೆ ತಲುಪಿದ ಎಲ್ಲ ಗಾಯಾಳುಗಳ ಸ್ಥಿತಿ ಚಿಂತಾಜನಕವಾಗಿದೆ.

**40 ವಾಹನಗಳಿಗೆ ತೊಂದರೆ:** ಅಜ್ಮೀರ್‌ನಿಂದ ಜೈಪುರ ಕಡೆಗೆ ಟ್ಯಾಂಕರ್ ಬರುತ್ತಿತ್ತು ಎಂದು ಹೇಳಲಾಗುತ್ತಿದೆ. ಅವರು ದೆಹಲಿ ಪಬ್ಲಿಕ್ ಸ್ಕೂಲ್ ಮುಂಭಾಗದಿಂದ ಅಜ್ಮೀರ್ ಕಡೆಗೆ ಯು–ಟರ್ನ್ ತೆಗೆದುಕೊಳ್ಳಲಾಗುತ್ತಿದೆ. ಇದೇ ವೇಳೆ ಜೈಪುರದಿಂದ ಬರುತ್ತಿದ್ದ ಟ್ರಕ್ ಟ್ಯಾಂಕರ್ ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸದಿಂದಾಗಿ ಗ್ಯಾಸ್ ಟ್ಯಾಂಕರ್ ಗೆ ತಕ್ಷಣ ಬೆಂಕಿ ಹೊತ್ತಿಕೊಂಡಿದೆ. ಈ ಅಪಘಾತದ ನಂತರ, 40 ಕ್ಕೂ ಹೆಚ್ಚು ವಾಹನಗಳು ಬೆಂಕಿಗೆ ಆಹುತಿಯಾಗಿವೆ, ಅವುಗಳಲ್ಲಿ 29 ಟ್ರಕ್‌ಗಳು ಮತ್ತು ಟ್ಯಾಂಕರ್‌ಗಳು ಎಂದು ಹೇಳಲಾಗುತ್ತಿದೆ.

## ಸುದ್ದಿ ಸಂಜೆ

### ಮುಂಬೈ ಕೇಂದ್ರಾಡಳಿತ ಪ್ರದೇಶವಾಗಬೇಕು



**ಮುಂಬೈ:** ವಾಣಿಜ್ಯ ನಗರಿ ಮುಂಬೈ ಕ್ರೇಂದ್ರಾಡಳಿತ ಪ್ರದೇಶವಾಗಬೇಕು ಎಂಬ ಕರ್ನಾಟಕದ ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ವಿರುದ್ಧ ಇಂಡಿಯಾ ಮೈತ್ರಿಕೂಟದ ಶಿವಸೇನಾ (ಯುಬಿಟಿ) ಶಾಸಕ ಆದಿತ್ಯ ಠಾಕ್ರೆ ಕಿಡಿಕಾರಿದ್ದಾರೆ. ಮಹಾರಾಷ್ಟ್ರದ ನಾಯಕರು ಬೆಳಗಾವಿಯನ್ನು ಕೇಂದ್ರಾಡಳಿತ ಪ್ರದೇಶವನ್ನಾಗಿ ಮಾಡಬೇಕು ಎಂದು ಹೇಳಿದ್ದಾರೆ. ಹಾಗಿದ್ದರೆ ಮುಂಬೈಯನ್ನೂ ಕೇಂದ್ರಾಡಳಿತ ಪ್ರದೇಶವನ್ನಾಗಿ ಮಾಡಬೇಕು ಎಂಬ ಸವದಿ ಹೇಳಿಕೆ ಕುರಿತು ಆಕ್ರೋಶ ವ್ಯಕ್ತಪಡಿಸಿದ ಆದಿತ್ಯ ಠಾಕ್ರೆ, ಮುಂಬೈಯನ್ನು ಮಹಾರಾಷ್ಟ್ರದಿಂದ ಬೇರ್ಪಡಿಸುವ ಯಾವುದೇ ಪ್ರಯತ್ನ ಸಹಿಸುವುದಿಲ್ಲ ಎಂದರು. ಸವದಿ ಹೇಳಿಕೆಯನ್ನು ಖಂಡಿಸಿದ ಆದಿತ್ಯ ಠಾಕ್ರೆ, ಕಾಂಗ್ರೆಸ್ ಅಥವಾ ಬಿಜೆಪಿ ಯಾವುದೇ ಪಕ್ಷವಾಗಿರಲಿ, ಮುಂಬೈಯನ್ನು ಮಹಾರಾಷ್ಟ್ರದಿಂದ ಬೇರ್ಪಡಿಸುವ ಪ್ರಯತ್ನವನ್ನು ಶಿವಸೇನಾ (ಯುಬಿಟಿ) ಸಹಿಸುವುದಿಲ್ಲ. ಮುಂಬೈ ನಮ್ಮ ಜನ್ಮಭೂಮಿ. ಮರಾಠರು ಅದನ್ನು ರಕ್ತನೀಡಿ ಕಟ್ಟಿದ್ದಾರೆ. ನಮಗೆ ಮುಂಬೈಯನ್ನೂ ಯಾರೂ ಕೊಟ್ಟಿಲ್ಲ ಎಂದು ಹೇಳಿದರು. ಮಹಾರಾಷ್ಟ್ರದಲ್ಲಿ ಕಾಂಗ್ರೆಸ್, ಶರದ್ ಪವಾರ್ ನೇತೃತ್ವದ ಎನ್ ಸಿಪಿ (ಎಸ್ ಪಿ) ಹಾಗೂ ಶಿವಸೇನಾ (ಯುಬಿಟಿ) ಮಹಾ ವಿಕಾಸ್ ಆಘಾಡಿಯ ಮೈತ್ರಿ ಪಕ್ಷಗಳಾಗಿವೆ.

### ಸಮಾಜವಾದಿ ಪಕ್ಷದ ಸಂಸದನ ವಿರುದ್ಧ ಎಫ್‌ಐಆರ್



**ಸಂಭಾಲ್ (ಯುಪಿ):** ಇಲ್ಲಿನ ದೀಪಾ ಸರಾಯ್ನಲ್ಲಿರು ಸಮಾಜವಾದಿ ಪಕ್ಷದ ಸಂಭಾಲ್ ಕ್ಷೇತ್ರದ ಸಂಸದ ಜಿಯಾವುರ್ ರೆಹಮಾನ್ ಬಾರ್ಕ್ ಅವರು ತಮ ಮನೆಗೆ ಅಕ್ರಮ ಸಂಕರ್ಪ ಪಡೆದ ಹಿನ್ನಲೆಯಲ್ಲಿ ವಿದ್ಯುತ್ ಕಳ್ಳತನದ ಆರೋಪದ ಮೇಲೆ ಉತ್ತರ ಪ್ರದೇಶ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಸಂಸದರ ವಿರುದ್ಧ ವಿದ್ಯುತ್ ಕಾಯ್ದೆ, 2003, (ವಿದ್ಯುತ್ ಕಳ್ಳತನ ಅಥವಾ ಅನಧಿಕೃತ ವಿದ್ಯುತ್ ಬಳಕೆ) ಸೆಕ್ಷನ್ 135 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ವಿದ್ಯುತ್ ಪರೀಕ್ಷಾ ಪ್ರಯೋಗಾಲಯದಿಂದ ಪಡೆದ ಗ್ರಾಹಕರ ಮೀಟರ್ ಪರಿಶೀಲಿಸಿದಾಗ ಮೀಟರ್ ಬೈಪಾಸ್ ಮಾಡಿ ಅಕ್ರಮವಾಗಿ ವಿದ್ಯುತ್ ಬಳಕೆ ಮಾಡಿ ವಿದ್ಯುತ್ ಕಳ್ಳತನ ಮಾಡಿರುವುದು ಸ್ಪಷ್ಟವಾಗಿದೆ ಎಂದು ವಿದ್ಯುತ್ ಇಲಾಖೆ ಅಧಿಕಾರಿಯೊಬ್ಬರು ನೀಡಿದ ದೂರಿನ ಮೇರೆಗೆ ಎಫ್‌ಐಆರ್ ದಾಖಲಿಸಲಾಗಿದೆ. ಭಾರೀ ಭದ್ರತೆಯ ನಡುವೆ ಇಂದು ಬೆಳಗ್ಗೆ ಸಂಸದರ ನಿವಾಸವನ್ನು ಇಲಾಖೆ ಪರಿಶೀಲಿನೆ ಕೂಡ ನಡೆಸಿದೆ. ಕಳೆದ ನವೆಂಬರ್ 24 ರಂದು ನಗರದ ಕೋಟ್ ಗಾರ್ವಿ ಪ್ರದೇಶದಲ್ಲಿರುವ ಶಾಹಿ ಜಾಮಾ ಮಸೀದಿಯನ್ನು ನ್ಯಾಯಾಲಯದ ಆದೇಶದ ಸಮೀಕ್ಷೆಯ ಸಂದರ್ಭದಲ್ಲಿ ಭದ್ರತಾ ಸಿಬ್ಬಂದಿಯೊಂದಿಗೆ ಘರ್ಷಣೆಯಲ್ಲಿ ನಾಲ್ವರು ಸ್ಥಳೀಯರ ಸಾವಿಗೆ ಕಾರಣವಾದ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಪೊಲೀಸರು ದಾಖಲಿಸಿರುವ ಪ್ರಕರಣದಲ್ಲೂ ಬಾರ್ಕ್ ಹೆಸರೂ ಕೂಡ ಇದೆ. ತನ್ನ ಬಂಧನಕ್ಕೆ ತಡೆ ಕೋರಿ ಅಲಹಾಬಾದ್ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿರುವ ಅವರು ತಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿದ್ದಾರೆ. ನವೆಂಬರ್ 24 ರಂದು ಸಂಸದರು ಜನರನ್ನು ಪ್ರಚೋದಿಸಿದ್ದಾರೆ ಎಂದು ಆರೋಪಿಸಲಾಗಿದ್ದು, ಸಮೀಕ್ಷೆಯ ವೇಳೆ ಹಿಂಸಾಚಾರಕ್ಕೆ ಅವರ ಪ್ರಚೋದನಕಾರಿ ಭಾಷಣವೇ ಕಾರಣ ಎಂದು ಪೊಲೀಸರು ಆರೋಪಿಸಿದ್ದಾರೆ.ಈಗ ವಿದ್ಯುತ್ ಕಳ್ಳತನ ಕುರಿತು ಎಫ್‌ಐಆರ್ ದಾಖಲಾಗಿದೆ.

### ಕೇಂದ್ರ ರೈತರೊಂದಿಗೆ ಮಾತುಕತೆಗೆ ಮುಂದಾಗಲಿ

**ಚಂಡೀಗಢ:** ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯ (ಎಂಎಸ್‌ಪಿ) ಕಾನೂನು ಖಾತರಿ ಸೇರಿದಂತೆ ತಮ್ಮ ಬೇಡಿಕೆಗಳಿಗಾಗಿ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿರುವ ರೈತರೊಂದಿಗೆ ತನ್ನ ಹಟಮಾರಿ ಧೋರಣೆಯನ್ನು ಬಿಟ್ಟು ಮಾತುಕತೆ ನಡೆಸುವಂತೆ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಗುರುವಾರ ಕೇಂದ್ರ ಸರಕಾರಕ್ಕೆ ಒತ್ತಾಯಿಸಿದ್ದಾರೆ. ರೈತರೊಂದಿಗೆ ಮಾತನಾಡುವುದು ಕೇಂದ್ರದ ಕರ್ತವ್ಯ ಹಾಗೂ ಯಾವುದೇ ಸಮಸ್ಯೆಯನ್ನು ಮಾತುಕತೆಯ ಮೂಲಕ ಮಾತ್ರ ಪರಿಹರಿಸಬಹುದು ಎಂದು ಅವರು ಹೇಳಿದರು. "ರೈತರೊಂದಿಗೆ ಮಾತನಾಡುವುದು ಕೇಂದ್ರ ಸರ್ಕಾರದ ಕರ್ತವ್ಯ. ಯಾವುದೇ ಸಮಸ್ಯೆಯನ್ನು ಮಾತುಕತೆಯ ಮೂಲಕ ಮಾತ್ರ ಪರಿಹರಿಸಬಹುದು. ಕೇಂದ್ರ ಸರ್ಕಾರ ತನ್ನ ಮೊಂಡುತನವನ್ನು ಬಿಡಬೇಕು" ಎಂದು ಮಾನ್ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಮತ್ತು ಕಿಸಾನ್ ಮಜ್ದೂರ್ ಮೋರ್ಚಾ ಬ್ಯಾನರ್ ಅಡಿಯಲ್ಲಿ ರೈತರು ಫೆಬ್ರವರಿ 13ರಿಂದ ಪಂಜಾಬ್ ಮತ್ತು ಹರಿಯಾಣ ನಡುವಿನ ಶಂಭು ಮತ್ತು ಖನೌರಿ ಗಡಿ ಸ್ಥಳಗಳಲ್ಲಿ ಕ್ಯಾಂಪ್ ಹೂಡಿದ್ದಾರೆ. ರೈತರ ಬೇಡಿಕೆಗಳನ್ನು ಈಡೇರಿಸುವಂತೆ ಕೇಂದ್ರಕ್ಕೆ ಒತ್ತಾಯಿಸಲು ಪಂಜಾಬ್ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ್ ನವೆಂಬರ್ 26 ರಿಂದ ಪಂಜಾಬ್ ಮತ್ತು ಹರಿಯಾಣ ನಡುವಿನ ಖನೌರಿ ಗಡಿಯಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದಾರೆ. ಡಿಸೆಂಬರ್ 6 ಮತ್ತು 14 ರ ನಡುವೆ 101 ರೈತರ ಜಾಥಾ (ಗುಂಪು) ಮೂರು ಬಾರಿ ಕಾಲ್ನಡಿಗೆಯಲ್ಲಿ ದೆಹಲಿಗೆ ಮೆರವಣಿಗೆ ಮಾಡಲು ಪ್ರಯತ್ನಿಸಿದರೂ, ಹರಿಯಾಣದಲ್ಲಿ ಪೊಲೀಸರು ಅವರನ್ನು ತಡೆದಿದ್ದಾರೆ. ಪಂಜಾಬ್ ನ ಎಎಪಿ ಸರ್ಕಾರವು ರಾಜ್ಯದ ರೈತರೊಂದಿಗೆ ಮಾತುಕತೆ ನಡೆಸಿ, ಅವರ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಹೇಳಿದ್ದರು. "ಪಂಜಾಬ್ ಸರ್ಕಾರವು ರೈತರಿಂದ ಎಂಎಸ್‌ಪಿ ದರದಲ್ಲಿ ಬೆಳೆ ಖರೀದಿಸುವುದನ್ನು ಆರಂಭಿಸಬೇಕು. ಈ ವಿಷಯದಲ್ಲಿ ಅವರಿಗೆ ಯಾವುದೇ ತೊಂದರೆ ಆಗಬಾರದು. ಪಂಜಾಬ್ ರೈತರು ಈಗ ಸಮಸ್ಯೆಯಲ್ಲಿರುವುದರಿಂದ ಪಂಜಾಬ್ ಸರ್ಕಾರವು ಮುಂದೆ ಬಂದು ರೈತರಿಂದ ಎಲ್ಲಾ ಬೆಳೆಗಳನ್ನು ಎಂಎಸ್‌ಪಿ ದರದಲ್ಲಿ ಖರೀದಿಸುವುದಾಗಿ ಘೋಷಿಸಬೇಕು" ಎಂದು ಸೈನಿ ಹೇಳಿದರು.

# ಆಕ್ಷನ್ ಪಾತ್ರಗಳು ಸಾಕಾಗಿದೆ



**ನಾನು ಬೇರೆ ರೀತಿಯ ಪಾತ್ರಗಳನ್ನು ಆಯ್ಕೆ ಮಾಡಿಕೊಳ್ಳುವ ಸಮಯ ಬಂದಿದೆ. ಹೆಚ್ಚಾಗಿ ಮಾಹಿಳಾ ಪ್ರಧಾನ ಪಾತ್ರ ಅಥವಾ ಆಕ್ಷನ್ ಪಾತ್ರಗಳು ಬರುತ್ತಿದೆ. ಏನಾದರೂ ವಿಭಿನ್ನ ಪಾತ್ರವನ್ನು ಕೊಡಿ**

250ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸಿರುವ ಕನಸಿನ ರಾಣಿ ಮಾಲಾಶ್ರೀ ಕೊಂಚ ವಿಭಿನ್ನ ಪಾತ್ರಗಳನ್ನು ಹುಡುಕುತ್ತಿದ್ದಾರೆ. ಡ್ರೀಮ್ ಗರ್ಲ್, ಬಬ್ಲಿ ಗರ್ಲ್, ಲವರ್ ಗರ್ಲ್ ಆಗಿ ಜನರಿಗೆ ಹತ್ತಿರವಾದ ಮಾಲಾಶ್ರೀ ಈಗ ಆಕ್ಷನ್ ಕ್ವೀನ್, ಮಾಸ್ ಕ್ವೀನ್ ಎಂಬ ಬಿರುದು ಪಡೆಯುತ್ತಿದ್ದಾರೆ. ಆಕ್ಷನ್ ಅಥವಾ ಪೊಲೀಸ್ ಆಫೀಸರ್ ಪಾತ್ರಗಳಲ್ಲಿ ಕಾಣಿಸಿಕೊಳ್ಳುತ್ತಿರುವ ನಾಯಕಿ ಇದೀಗ ಕೊಂಚ ಚೇಂಜ್ ಬೇಕು ಎನ್ನುತ್ತಿದ್ದಾರೆ.

ನನ್ನ ಅಭಿಮಾನಿಗಳು ಈಗಲೂ ನನ್ನನ್ನು ಇಷ್ಟ ಪಡುತ್ತಾರೆ. ಈಗಲೂ ನಿರ್ದೇಶಕರು ಕಥೆಯೊಂದಿಗೆ ನನ್ನನ್ನು ಸಂಪರ್ಕ ಮಾಡುತ್ತಿರುವುದಕ್ಕೆ ತುಂಬಾ ಖುಷಿ ಇದೆ. ಈಗ ನಾನು ಬೇರೆ ರೀತಿಯ ಪಾತ್ರಗಳನ್ನು ಆಯ್ಕೆ ಮಾಡಿಕೊಳ್ಳುವ ಸಮಯ ಬಂದಿದೆ. ಹೆಚ್ಚಾಗಿ ಮಾಹಿಳಾ ಪ್ರಧಾನ ಪಾತ್ರ ಅಥವಾ ಆಕ್ಷನ್ ಪಾತ್ರಗಳು ಬರುತ್ತಿದೆ. ಏನಾದರೂ ವಿಭಿನ್ನ ಪಾತ್ರವನ್ನು ಕೊಡಿ ಎಂದು ಕೇಳಿದಾಗ ಸರಿ ನಿಮ್ಮನ್ನು ಈ ಸಲಸಿಐಡಿ ಮಾಡೋಣ ಎನ್ನುತ್ತಾರೆ.

ಇನ್ನೂ ವಿಭಿನ್ನ ಪಾತ್ರಗಳನ್ನು ನಿರ್ದೇಶಕರು ಕೊಡುವ ಮೂಲಕ ಈ ಮಿಥ್‌ಗೆ ಬ್ರೇಕ್ ಹಾಕಬೇಕು. ಗೆಸ್ ಅಪೀಯರೆನ್ಸ್ ಆಗಿದ್ದರೂ ವೀಕ್ಷಕರೊಟ್ಟಿಗೆ ಎಮೋಷನಲ್ ಆಗಿ ಕನೆಕ್ಟ್ ಆಗಬೇಕು. ಅವರ ಸಮಯ ಮತ್ತು ನನ್ನ ಸಮಯಕ್ಕೆ ಬೆಲೆ ಸಿಗಬೇಕು ಅಷ್ಟೇ ಎಂದು ಟೈಮ್ಸ್ ಸಂದರ್ಶನದಲ್ಲಿ ಮಾಲಾಶ್ರೀ ಮಾತನಾಡಿದ್ದಾರೆ.

'ಓಟಿಟಿಯಲ್ಲಿ ನಾಯಕಿಯರಿಗೆ ಸಿಗುತ್ತಿರುವ ಪಾತ್ರದ ಬಗ್ಗೆ ನನಗೆ ತುಂಬಾ ಖುಷಿ ಇದೆ. ನನಗೆ ಸಮಯ ಸಿಕ್ಕಾಗ ಸೀರಿಸ್ ನೋಡುತ್ತೀನಿ, ನನ್ನ ನೆಚ್ಚಿನ ಸೀರಿಸ್ ಗೇಮ್ ಆಫ್ ಥ್ರೋನ್ಸ್. ತೀನ್ ಪಟ್ಟಿಯಲ್ಲಿ ಕಾಲೋಜ್ ಪಾತ್ರ, ಅಂದಾದುನ್‌ನಲ್ಲಿ ತಬು ಪಾತ್ರ ನನಗೆ ಸಖತ್ ಇಷ್ಟವಾಗುತ್ತದೆ. ಸೌತ್ ಕರ್ನಾಟಕದಲ್ಲಿ ರಮ್ಯಾ ಕೃಷ್ಣ, ಸಿಮ್ರನ್ ವಿಭಿನ್ನ ಪಾತ್ರಗಳಲ್ಲಿ ಸಖತ್ ಕೆಲಸ ಮಾಡುತ್ತಿದ್ದಾರೆ ಎಂದು ಮಾಲಾಶ್ರೀ ಹೇಳಿದ್ದಾರೆ.

ಇದೀಗ ಮಾಲಾಶ್ರೀ ಮುದ್ದಿನ ಮಗಳ ಆರಾಧನಾ ರಾಮ್ 'ಕಾಟೇರ' ಚಿತ್ರದ ಮೂಲಕ ಕನ್ನಡಿಗರಿಗೆ ಹತ್ತಿರವಾಗಿದ್ದಾರೆ. ಇನ್ನೂ ವಿದ್ಯಾಭ್ಯಾಸ ಮಾಡುತ್ತಿರುವ ಪುತ್ರನನ್ನು ಬಣ್ಣ ಪ್ರಪಂಚಕ್ಕೆ ಕರೆತರಲು ಮಾಲಾಶ್ರೀ ಎಲ್ಲ ರೀತಿ ತಯಾರಿಗಳನ್ನು ನೀಡುತ್ತಿದ್ದಾರೆ.

# ಸಪ್ತಸಾಗರದಾಚೆ ಜಾಲಿ ಮೂಡ್‌ನಲ್ಲಿ ನಿವೇದಿತಾ




ಬಿಗ್ ಬಾಸ್ ಮೂಲಕ ಎಲ್ಲರ ಮನಸನ್ನು ಗೆದ್ದಿದ್ದ ಬಾರ್ಬಿ ಡಾಲ್ ನಿವೇದಿತಾ ಗೌಡ ಸೋಷಿಯಲ್ ಮೀಡಿಯಾದಲ್ಲಿ ಸಖತ್ ಸದ್ದು ಮಾಡುತ್ತಲೇ ಇರುತ್ತಾರೆ. ಚಂದನ್ ಶೆಟ್ಟಿ ಜೊತೆ ಮದುವೆಯಾಗಿ ವಿಚ್ಛೇದನ ಕೂಡ ಪಡೆದುಕೊಂಡಿದ್ದಾರೆ. ನಿವೇದಿತಾ ಗೌಡ ಅವರು ಇತ್ತೀಚೆಗೆ ಹಾಟ್ ಹಾಗೆಯೇ ಬೋಲ್ಡ್ ಆಗಿ ಕಾಣಿಸಿಕೊಂಡಿದ್ದಾರೆ. ನಿವೇದಿತಾ ಗೌಡ ನೋಡಿದ ಜನರು ಬಹಳಷ್ಟು ಖುಷಿ ಪಡುತ್ತಿದ್ದಾರೆ.

ಯಾವುದೇ ಡ್ರೆಸ್ ತೊಟ್ಟರು ಕೂಡ ನಿವೇದಿತಾ ಗೌಡ ಅದ್ಭುತವಾಗಿ ಕಾಣಿಸಿಕೊಳ್ಳುತ್ತಾರೆ. ನಿವೇದಿತಾ ಗೌಡ ಸದಾ ಒಂದಲ್ಲ ಒಂದು ಸುದ್ದಿಯಿಂದ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಸೋಷಿಯಲ್ ಮೀಡಿಯಾದಲ್ಲಿ ಫೋಟೋವೊಂದು ವೈರಲ್ ಆಗುತ್ತಿದ್ದು ಅಭಿಮಾನಿಗಳು ನೋಡಿ ಫುಲ್ ಖುಷ್ ಆಗಿದ್ದಾರೆ. ನಿವೇದಿತಾ ಏನೇ ಮಾಡಿದರೂ ಕೂಡಾ ಸುದ್ದಿಯಾಗುತ್ತೆ. ಬಾರ್ಬಿ ಡಾಲ್ ಫೋಟೋ ನೋಡಲು ಅನೇಕ ಜನ ಅಭಿಮಾನಿಗಳು ಕಾಯುತ್ತಿರುವುದು ಮಾತ್ರ ಅಕ್ಷರಶಃ ಸತ್ಯ. ರೀಲ್ಸ್ ನಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಿರುವ ನಟಿಯ ನಟನೆಯನ್ನು ಮೆಚ್ಚದವರೆ ಇಲ್ಲ.

ಕಣ್ಣೋಟದಲ್ಲಿಯೇ ಎಲ್ಲರನ್ನೂ ಸೆಳೆಯುವ ಕ್ಯಾಪಸಿಟಿ ನಿವೇದಿತಾ ಗೌಡಗೆ ಇದೆ ಎಂದು ಹೇಳಿದರೆ ತಪ್ಪಾಗದು. ಇದೀಗ ನಿವೇದಿತಾ ಗೌಡ ಫೋಟೋ ವೈರಲ್ ಆಗಿದ್ದು ಸಾಕಷ್ಟು ಲೈಕ್ ಕಾಮೆಂಟ್ ಗಳು ಹರಿದು ಬರುತ್ತಿದೆ. ನಿವಿ ಹಾಟ್ ಲುಕ್ ಗೆ ಅಭಿಮಾನಿಗಳಿಗೆ ಬಹಳಷ್ಟು ಖುಷಿ ನೀಡಿದೆ.

ಇನ್ನು ಕೆಲವರು ನಿವೇದಿತಾ ಗೌಡ ಡ್ರೆಸ್ಸಿಂಗ್ ಸ್ಟೈಲ್ ನೋಡಿ ಕುಪಿತಗೊಂಡಿರುತ್ತಾರೆ. ಇದೀಗ ನಿವೇದಿತಾ ಗೌಡ ಅವರು ವೆಕೇಶನ್ ಮೂಡ್ ನಲ್ಲಿ ಇದ್ದಾರೆ. ಜಾಲಿ ಮೂಡ್ ನಲ್ಲಿರುವ ನಟಿ ಜಾಲಿ ಮೂಡ್ ನಲ್ಲಿರುವ ನಿವೇದಿತಾ ಗೌಡ ಲುಕ್ ಗೆ ಫಿದಾ ಆಗದವರೆ ಇಲ್ಲ. ಸೋಶಿಯಲ್ ಮೀಡಿಯಾದಲ್ಲಿ ಈಗಾಗಲೇ ಫೋಟೋ ವೈರಲ್ ಆಗಿದ್ದು ಸಾಕಷ್ಟು ಕಾಮೆಂಟ್ ಗಳು ಹರಿದು ಬರುತ್ತಿದೆ.



ನಿವೇದಿತಾ ಗೌಡ ಸೋ ಕ್ಯೂಟ್, ಲುಕ್ಕಿಂಗ್ ಗುಡ್, ಲುಕ್ಕಿಂಗ್ ವೆರಿ ವೆರಿ ಗುಡ್ ಎಂದೆಲ್ಲ ಕಾಮೆಂಟ್ ಮಾಡುತ್ತಿದ್ದಾರೆ. ನಿವೇದಿತಾ ನೋಟಕ್ಕೆ ಅನೇಕ ಜನರು ಫಿದಾ ಆಗಿರುವುದಂತು ನಿಜ. ನಿವೇದಿತಾ ಗೌಡ ಸಾಕಷ್ಟು ಫ್ಯಾನ್ಸ್ ಬಳಗವನ್ನು ಹೊಂದಿದ್ದಾರೆ. ಈಗಾಗಲೇ ಸಿನಿಮಾದಲ್ಲಿ ಕೂಡ ನಟನೆ ಮಾಡಿ ಸೈ ಎನಿಸಿಕೊಂಡಿದ್ದಾರೆ. ತಾನು ಯಾವುದಕ್ಕೂ ಕಡಿಮೆ ಇಲ್ಲ ಎಂಬುವುದನ್ನು ನಿವೇದಿತಾ ಗೌಡ ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರೆ ತಪ್ಪಾಗದು.

ಚಂದನ್ ಶೆಟ್ಟಿ ಜೊತೆ ಡಿವೋರ್ಸ್ ಪಡೆದ ಬಳಿಕ ಸಖತ್ ಬೋಲ್ಡ್ ಆಗಿ ಕಾಣಿಸಿಕೊಂಡ ನಟಿ ಯನ್ನು ನೋಡಿದ ಅನೇಕರು ಕುಪಿತಗೊಂಡರೆ, ಇನ್ನೂ ಅನೇಕರು ಬಹಳಷ್ಟು ಕೋಪ ಮಾಡಿಕೊಂಡಿರುವುದು ಮಾತ್ರ ಸತ್ಯ. ಬ್ಯಾಕ್ ಟು ಬ್ಯಾಕ್ ಹೊಸ ರೀಲ್ಸ್ ಮಾಡಿ ಇನ್ಸ್ಟಾದಲ್ಲಿ ಶೇರ್ ಮಾಡಿ ಜನರನ್ನು ಸೆಳೆಯುವ ಪ್ರಯತ್ನವನ್ನು ಮಾಡುತ್ತಿದ್ದಾರೆ. ಆದರೆ ಇದರಿಂದ ಕೆಲವು ಅಭಿಮಾನಿಗಳ ಕಣ್ಣಿಗೆ ಹಬ್ಬ ಆದರೂ ಅದೆಷ್ಟೋ ಜನ ನಿವೇದಿತಾ ಗೌಡ ವಿರುದ್ಧ ಕೆರಳಿ ಕೆಂಡವಾಗಿದ್ದಾರೆ

# ರಾಜಕೀಯಕ್ಕೆ ಕಾಲಿಟ್ಟರೆ ಪರಿಸ್ಥಿತಿ ತುಂಬಾ ಭೀಕರವಾಗಿರುತ್ತದೆ



ಟಾಲಿವುಡ್‌ನಲ್ಲಿ ಅಪಾರ ಅಭಿಮಾನಿ ಬಳಗವನ್ನು ಹೊಂದಿರುವ ಸ್ಟಾರ್ ನಟ ಮಹೇಶ್ ಬಾಬು. ಕ್ಲಾಸ್ ಮತ್ತು ಮಾಸ್ ಪ್ರೇಕ್ಷಕರಲ್ಲಿ ಸಮಾನವಾಗಿ ಅಭಿಮಾನಿಗಳನ್ನು ಹೊಂದಿರುವ ಏಕೈಕ ನಟ ಮಹೇಶ್ ಬಾಬು ಎಂದು ಹೇಳಬಹುದು. ಅದೇ ರೀತಿ ಮಹೇಶ್‌ಗೆ ಮಹಿಳಾ ಅಭಿಮಾನಿಗಳ ಬೆಂಬಲವೂ ಹೆಚ್ಚು. ಜನಪ್ರಿಯ ಸಿನಿ ತಾರೆಯರು ರಾಜಕೀಯಕ್ಕೆ ಪ್ರವೇಶಿಸುವುದನ್ನು ನಾವು ನೋಡುತ್ತಲೇ ಇದ್ದೇವೆ.ಪವನ್ ಕಲ್ಯಾಣ್ ಈಗಾಗಲೇ ರಾಜಕೀಯದಲ್ಲಿದ್ದಾರೆ. ವಿಜಯ್ ಕೂಡ ಇತ್ತೀಚೆಗೆ ರಾಜಕೀಯಕ್ಕೆ ಪಾದಾರ್ಪಣೆ ಮಾಡಿದ್ದಾರೆ. ಮಹೇಶ್ ಬಾಬು ಕೂಡ ರಾಜಕೀಯಕ್ಕೆ ಬರಬೇಕೆಂಬ ಬೇಡಿಕೆ ಬಹಳ ದಿನಗಳಿಂದ ಇದೆ. ಶ್ರೀಮಂತ, ಭರತ್ ಅನ್ನೆ ನೇನು ಚಿತ್ರಗಳು ಬಿಡುಗಡೆಯಾದಾಗ ಮಹೇಶ್ ಬಾಬು ರಾಜಕೀಯಕ್ಕೆ ಪ್ರವೇಶಿಸುತ್ತಾರಾ ಎಂಬ ಚರ್ಚೆ ನಡೆದಿತ್ತು. ಮಹೇಶ್ ಬಾಬು ರಾಜಕೀಯದ ಬಗ್ಗೆ ಆಸಕ್ತಿ ಇಲ್ಲ ಎಂದು ಹೇಳುತ್ತಲೇ ಇದ್ದಾರೆ. ಆದರೆ ಮಾಧ್ಯಮಗಳಿಂದ ರಾಜಕೀಯ ಪ್ರಶ್ನೆಗಳು ಎದುರಾಗುತ್ತಿವೆ. "ಅನೇಕ ಸಿನಿ ತಾರೆಯರು ರಾಜಕೀಯಕ್ಕೆ ಬರುತ್ತಿದ್ದಾರೆ. ನಿಮಗೆ ರಾಜಕೀಯಕ್ಕೆ ಹೋಗುವ ಆಲೋಚನೆ ಇದೆಯೇ?" ಎಂದು ಮಾಧ್ಯಮ ಪ್ರತಿನಿಧಿ ಪ್ರಶ್ನಿಸಿದರು. "ಯಾರಾದರೂ ನನ್ನನ್ನು ರಾಜಕೀಯಕ್ಕೆ ಕರೆದೊಯ್ದರೆ ಪರಿಸ್ಥಿತಿ ತುಂಬಾ ಭೀಕರವಾಗಿರುತ್ತದೆ. ನನಗೆ ರಾಜಕೀಯದ ಬಗ್ಗೆ ಯಾವುದೇ ಜ್ಞಾನವಿಲ್ಲ" ಎಂದು ಮಹೇಶ್ ಬಾಬು ಹೇಳಿದರು. "ಆದರೆ ಕಥೆಯನ್ನು ಆಧರಿಸಿ ರಾಜಕೀಯ ಚಲನಚಿತ್ರಗಳನ್ನು ಮಾಡುತ್ತೇನೆ" ಎಂದು ಮಹೇಶ್ ಬಾಬು ಹೇಳಿದರು. ಮತ್ತೊಬ್ಬ ಮಾಧ್ಯಮ ಪ್ರತಿನಿಧಿ, "ನೀವು ಸೈನಿಕುಡು ಚಿತ್ರದಲ್ಲಿ ಯುವಕರು ರಾಜಕೀಯಕ್ಕೆ ಬರಬೇಕೆಂದು ಸಂದೇಶ ನೀಡಿದ್ದೀರಿ. ಹಾಗಾಗಿ ರಾಜಕೀಯಕ್ಕೆ ಬರುವ ಆಲೋಚನೆ ಮಾಡುತ್ತಿಲ್ಲವೇ?" ಎಂದು ಕೇಳಿದರು. ಮಹೇಶ್, "ಅದಕ್ಕಾಗಿಯೇ ಆ ಸಿನಿಮಾ ಕೇವಲ ಒಂದು ವಾರ ಮಾತ್ರ ಪ್ರದರ್ಶನ ಕಂಡಿತು" ಎಂದು ತಮಾಷೆ ಮಾಡಿದರು.ಮಹೇಶ್ ಬಾಬು ರಾಜಕೀಯ ಹಿನ್ನೆಲೆಯಲ್ಲಿ ನಟಿಸಿದ ಭರತ್ ಅನ್ನೆ ನೇನು ಚಿತ್ರ ಭರ್ಜರಿ ಯಶಸ್ಸು ಗಳಿಸಿತು. ಯುವ ಸಿಎಂ ಪಾತ್ರದಲ್ಲಿ ಮಹೇಶ್ ಬಾಬು ಅಬ್ಬರಿಸಿದರು. ಮಹೇಶ್ ಬಾಬು, ಗುಣಶೇಖರ್ ಕಾಂಬಿನೇಷನ್‌ನ ಸೈನಿಕುಡು ಚಿತ್ರ ಅಟ್ಟರ್ ಫ್ಲಾಪ್ ಆಗಿತ್ತು.



# ಬಾಲ್ಯದ ಕಥೆ ಹಂಚಿಕೊಂಡ ಅರೋರಾ

ತಾಯಿಯ ಬಲವಾದ ಆಧಾರಸ್ತಂಭ ಮಗಳು ಎಂದು ಹೇಳಲಾಗುತ್ತದೆ. ಮಲ್ಲೈಕಾ ಅರೋರಾ ಕೂಡ ಅಂತಹ ಹೆಣ್ಣುಮಕ್ಕಳಲ್ಲಿ ಒಬ್ಬರು. ಚಿಕ್ಕ ವಯಸ್ಸಿನಲ್ಲಿಯೇ ತಾಯಿಗೆ ಆಸರೆಯಾದರು. ಈ ಬಾಲಿವುಡ್ ನಟಿ ಯಾವುದರಲ್ಲೂ ಕಡಿಮೆ ಇಲ್ಲ. ರಿಯಾಲಿಟಿ ಶೋಗಳಲ್ಲಿ ಜಡ್ಜ್ ಆಗಿರುವ, ಫಿಟ್ನೆಸ್ ಫ್ರೀಕ್ ಮತ್ತು ಫ್ಯಾಷನಿಸ್ಟ್ ಮಲ್ಲೈಕಾ ಇತ್ತೀಚೆಗೆ ಒಂದು ಸಂದರ್ಶನದಲ್ಲಿ ತಮ್ಮ ಬಾಲ್ಯದ ಕಥೆಯನ್ನು ಹೇಳಿಕೊಂಡಿದ್ದಾರೆ.

ಮಲ್ಲೈಕಾ ಹೇಳುವ ಪ್ರಕಾರ ಜೈ ಹಿಂದ್ ಕಾಲೇಜಿನಲ್ಲಿ ಎರಡು ವರ್ಷ ಓದಿ ಮಾಡೆಲಿಂಗ್ ಅಸೈನ್‌ಮೆಂಟ್‌ಗಳನ್ನು ಮಾಡಲು ಪ್ರಾರಂಭಿಸಿದರು. ಇದರಿಂದಾಗಿ ಕಾಲೇಜಿಗೆ ಕಡಿಮೆ ಹೋಗುತ್ತಿದ್ದರು. ಇದರಿಂದಾಗಿ ಅವರ ತಾಯಿಗೆ ಕಾಲೇಜಿನಿಂದ ದೂರು ಬಂತು. ನಟಿ ಹೇಳುವ ಪ್ರಕಾರ ಸ್ವತಂತ್ರಳಾಗುವ ಆಸೆಯಿಂದ ಕೆಲಸ ಮಾಡಲು ಪ್ರಾರಂಭಿಸಿದರು. ಹಣಕಾಸಿನಲ್ಲಿ ತಾಯಿಗೆ ಸಹಾಯ ಮಾಡಲು ಬಯಸಿದ್ದರು. ಅವರ ತಾಯಿ ಒಬ್ಬರೇ ದುಡಿಯಬೇಕಿತ್ತು.

11 ವರ್ಷದವಳಿದ್ದಾಗ ತಂದೆ ಬೇರೆಯಾದರು: ಮಲ್ಲೈಕಾ ಹೇಳುವ ಪ್ರಕಾರ ಅವರಿಗೆ 11 ವರ್ಷವಿದ್ದಾಗ ತಂದೆ–ತಾಯಿ ಬೇರೆಯಾದರು. ಇದರಿಂದಾಗಿ ಅವರಲ್ಲಿ ಬದಲಾವಣೆಗಳಾದವು. ಜೀವನವನ್ನು ನೋಡುವ ಹೊಸ ದೃಷ್ಟಿಕೋನ ಬಂತು. ಕಷ್ಟದ ಸಮಯದಲ್ಲಿ ಅನೇಕ ಪಾಠಗಳನ್ನು ಕಲಿತರು. ಇದೀಗ ನಟಿಗೆ ಒಬ್ಬ ಮಗನಿದ್ದಾನೆ. ಅರ್ಬಾಜ್‌ನಿಂದ ಬಹಳ ಹಿಂದೆಯೇ ವಿಚ್ಛೇದನ ಪಡೆದಿದ್ದಾರೆ. ಆದರೂ, ಚಿತ್ರರಂಗದಲ್ಲಿ ದೃಢವಾಗಿ ನಿಂತಿದ್ದಾರೆ. ಮಗನನ್ನು ಚೆನ್ನಾಗಿ ಬೆಳೆಸುತ್ತಿದ್ದಾರೆ.

ಕುಟುಂಬಕ್ಕೆ ಆಸರೆಯಾಗಿ, ನಿಮ್ಮ ಕನಸುಗಳನ್ನು ನನಸಾಗಿಸಿ: ಮಲ್ಲೈಕಾ ಅವರ ಈ ಕಥೆಯಲ್ಲಿ ಸಂಬಂಧಗಳ ಮಹತ್ವ, ವೃತ್ತಿ ಬಯಕೆ ಅಡಗಿದೆ. ಒಂಟಿ ತಾಯಿಗೆ ಸಹಾಯ ಮಾಡಲು ಕೆಲಸ ಮಾಡಲು ಪ್ರಾರಂಭಿಸಿದರು. ಅವರು ಎಂದಿಗೂ ಅದೃಷ್ಟದ ಮೇಲೆ ಅವಲಂಬಿತರಾಗಲಿಲ್ಲ. ಈ ಕಥೆ ಎಲ್ಲಾ ಹುಡುಗಿಯರಿಗೆ ಸ್ಫೂರ್ತಿ. ತಾಯಿಗೆ ಆಸರೆಯಾಗಿ ನಿಮ್ಮ ಕನಸುಗಳನ್ನು ಹೇಗೆ ನನಸಾಗಿಸಬಹುದು ಎಂಬುದನ್ನು ನಟಿಯಿಂದ ಕಲಿಯಬಹುದು. ಫಿಟ್ನೆಸ್ ಬಗ್ಗೆಯೂ ಮಲ್ಲೈಕಾ ಅವರಿಂದ ಕಲಿಯಬಹುದು. 51ನೇ ವಯಸ್ಸಿನಲ್ಲಿಯೂ ಅವರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುತ್ತಾರೆ.

ಚೈಯಾ–ಚೈಯಾದಿಂದ ಅನಾರ್ಕಲಿ ಡಿಸ್ಕೋ ಚಾಲಿಯಂತಹ ಐಟಂ ಸಾಂಗ್ ಮಾಡಿ ಅಭಿಮಾನಿಗಳ ಮನಸ್ಸು ಕದ್ದಿದ್ದ ಮಲ್ಲೈಕಾ ಅರೋರಾ ಕೋಟ್ಯಾಂತರ ರೂಪಾಯಿ ಸಂಭಾವನೆ ಪಡೆಯುತ್ತಿದ್ದರು. ಆದ್ರೀಗ ಮಲ್ಲೈಕಾ ಬಾಲಿವುಡ್ನಿಂದ ದೂರವಿದ್ದಾರೆ. ಹಾಗಿದ್ದಲ್ಲಿ ಮಲ್ಲೈಕಾ ಹೇಗೆ ಹಣ ಮಾಡ್ತಿದ್ದಾರೆ ಎಂಬ ಪ್ರಶ್ನೆ ಕಾಡುವುದು ಸಹಜ. ಮಲ್ಲೈಕಾ ಉತ್ತಮ ಡಾನ್ಸರ್ ಮಾತ್ರವಲ್ಲ ಬ್ಯುಸಿನೆಸ್ ವುಮೆನ್ ಕೂಡ ಹೌದು. ಡಾನ್ಸ್ ಸೇರಿದಂತೆ ರಿಯಾಲಿಟಿ ಶೋಗಳಲ್ಲಿ ಪಾಲ್ಗೊಳ್ಳುವ ಅವರು ಉತ್ತಮ ಸಂಭಾವನೆ ಪಡೆಯುತ್ತಿದ್ದಾರೆ. ಅದ್ರ ಜೊತೆ ಯೋಗ್ಯ ಸ್ಥಳದಲ್ಲಿ ಹಣ ಹೂಡಿಕೆ ಮಾಡಿದ್ದಾರೆ. 2012ರಲ್ಲಿಯೇ ಮಲ್ಲೈಕಾ ದಿ ಲೇಬಲ್ ಲೈಫ್ ನಲ್ಲಿ ಹೂಡಿಕೆ ಮಾಡಿರುವ ಅವರು ದಿ ಲೇಬಲ್ ಲೈಫ್ ಬಟ್ಟೆ ಬ್ರಾಂಡ್ ನ ಸ್ಟೈಲ್ ಎಡಿಟರ್ ಕೂಡ ಹೌದು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-29 Email-mussanje2010@gmail.com, Phone: **9448074878**